VOLUME: 16 | 17 APRIL 2026 | ಶುಕ್ರವಾರ | RS: 2 | PAGE: 06 ISSUE: 74 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಆಡಿಷನ್ ಮಾಡುವಾಗ ಬಾಲಿವುಡ್ ನಟಿ ಡೈಸಿ ಶಾ ಅವರಿಗೆ ಕೆಟ್ಟ ಅನುಭವ ಆಗಿತ್ತು. ಆ ಘಟನೆಯ ಬಗ್ಗೆ ಅವರು ಈಗ ಬಾಯಿ ಬಿಟ್ಟಿದ್ದಾರೆ. ದಕ್ಷಿಣ ಭಾರತದ ಸಿನಿಮಾಗಾಗಿ ಮುಂಬೈನಲ್ಲಿ ಆಡಿಷನ್ ನಡೆಸಿದ ನಿರ್ಮಾಪಕನೊಬ್ಬ ತಮ್ಮನ್ನು ಕೆಟ್ಟದಾಗಿ ಮುಟ್ಟಿದ್ದ ಎಂದು ಡೈಸಿ ಶಾ ಅವರು ಹೇಳಿದ್ದಾರೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಅಪಘಾತ: 8 ಜನರು ಸಾವು



ರಾಯಚೂರು: ಬುಲೆರೋ ವಾಹನಕ್ಕೆ ಸಿಮೆಂಟ್ ಟ್ಯಾಂಕರ್ ಡಿಕ್ಕಿಯಾಗಿ 8 ಜನ ಭೀಕರವಾಗಿ ಸಾವನ್ನಪ್ಪಿರುವ ಘಟನೆ ಆಂಧ್ರದ ಕರ್ನೂಲ್ ಜಿಲ್ಲೆಯ ಮಂತ್ರಾಲಯ ಬಳಿಯ ಚಿಲಕನಡೋಣ ಬಳಿ ನಡೆದಿದೆ. ಹಾಸನ, ಚಿಕ್ಕಮಗಳೂರು ಮೂಲದ ಕುಮಾರ್ (50), ದೀಪಿಕಾ (42) , ಸುನಿಲ್ (40) ಯಶೋಧಮ್ಮ (60), ಪುಟ್ಟಮ್ಮ (55), ಬೆಳ್ಳಿ (3), ಲೋಲಾಕ್ಷಿ ಹಾಗೂ ಮೀನಾಕ್ಷಿ ಮೃತರು.

ಇಂದು (ಏ.16) ಜಾವ 4 ಗಂಟೆ ಸುಮಾರಿಗೆ ರಾಯರ ದರ್ಶನಕ್ಕಾಗಿ ಮಂತ್ರಾಲಯಕ್ಕೆ ತೆರಳುತ್ತಿದ್ದ ವೇಳೆ ಅವಘಡ ಸಂಭವಿಸಿದೆ. ಈ ವೇಳೆ ಮಂತ್ರಾಲಯಕ್ಕೆ ಹೋಗುತ್ತಿದ್ದ ಬುಲೆರೋ ವಾಹನಕ್ಕೆ ಬೀದರ್‌ನಿಂದ ತುಮಕೂರಿಗೆ ಹೋಗುತ್ತಿದ್ದ ಟ್ಯಾಂಕರ್ ಡಿಕ್ಕಿ ಹೊಡೆದಿದೆ. ಪರಿಣಾಮ ಸ್ಥಳದಲ್ಲೇ 8 ಜನ ಸಾವನ್ನಪ್ಪಿದ್ದಾರೆ.

ಇನ್ನುಳಿದ ಗಾಯಾಳುಗಳನ್ನು ಕರ್ನೂಲು ಆಸ್ಪತ್ರೆಗೆ ದಾಖಲಿಸಲಾಗಿದೆ. ಮಂತ್ರಾಲಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಮಹಿಳಾ ಮೀಸಲಾತಿ ಮಸೂದೆ ಮಂಡನೆ

ನವದೆಹಲಿ: ಲೋಕಸಭೆ ಯಲ್ಲಿ ಗದ್ದಲದ ನಡುವೆಯೇ ಮಹಿಳಾ ಮೀಸಲಾತಿ ಹಾಗೂ ಗಡಿ ನಿರ್ಣಯ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ, 2026 ಮಂಡನೆಯಾಗಿದೆ. ದೇಶದ ಜನಸಂಖ್ಯೆಗೆ ಅನುಗುಣವಾಗಿ ಲೋಕಸಭೆಯ ಬಲವನ್ನು ಪ್ರಸ್ತುತ ಇರುವ 543 ರಿಂದ 850 ಸ್ಥಾನಗಳಿಗೆ ಹೆಚ್ಚಿಸುವ ಪ್ರಸ್ತಾವನೆ ಇದೆ. ಇದೇ ರೀತಿ ರಾಜ್ಯ ವಿಧಾನಸಭೆಗಳ ಸ್ಥಾನಗಳನ್ನೂ ವಿಸ್ತರಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ. ಕ್ಷೇತ್ರ ಪುನರ್ವಿಂಗಡಣೆಯ ನಂತರವಷ್ಟೇ ಇದು ಸಾಧ್ಯವಾಗಲಿದೆ.



ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಲೋಕಸಭೆಯಲ್ಲಿ ಮಸೂದೆಯನ್ನು ಮಂಡಿಸಿದರು. ಕಾಂಗ್ರೆಸ್ ನಾಯಕ ಕೆ.ಸಿ.ವೇಣುಗೋಪಾಲ್ ಮಸೂದೆಯನ್ನು ವಿರೋಧಿಸಿದ್ದು, ಸದನದಲ್ಲಿ ಕೋಲಾಹಲಕ್ಕೆ ಕಾರಣವಾಯಿತು.

ಮಲ್ಲಿಕಾರ್ಜುನ ಖರ್ಗೆ ಬುಧವಾರದ ಸಭೆ ಬಳಿಕ ಮಾತನಾಡಿ, ನಾವೆಲ್ಲರೂ ಮಹಿಳಾ ಮೀಸಲಾತಿಯ ಪರವಾಗಿದ್ದೇವೆ. ಆದರೆ ಸರ್ಕಾರ ಇದನ್ನು ತರುತ್ತಿರುವ ವಿಧಾನ ರಾಜಕೀಯ ಪ್ರೇರಿತವಾಗಿದೆ. ಕ್ಷೇತ್ರ ಪುನರ್ವಿಂಗಡಣೆಯ ಹೆಸರಿನಲ್ಲಿ ಸರ್ಕಾರ ತಂತ್ರಗಳನ್ನು ಆಡುತ್ತಿದೆ," ಎಂದು ನೇರವಾಗಿ ಆರೋಪಿಸಿದರು. ಸರ್ಕಾರವು ಜನಗಣತಿ ಮತ್ತು ಕ್ಷೇತ್ರ ಪುನರ್ವಿಂಗಡಣೆಯ ನಂತರವೇ ಮೀಸಲಾತಿ ಜಾರಿಯಾಗಲಿದೆ ಎಂಬ ಷರತ್ತು ವಿಧಿಸಿದೆ. ಇದು ಮೀಸಲಾತಿಯನ್ನು ಇನ್ನಷ್ಟು ವಿಳಂಬ ಮಾಡುವ ತಂತ್ರ ಎಂಬುದು ವಿರೋಧ ಪಕ್ಷಗಳ ವಾದ.

2023ರಲ್ಲೇ ಸಂವಿಧಾನಕ್ಕೆ 334 ವಿಧಿಯನ್ನು ಸೇರಿಸಿ ಒಮ್ಮತ ಮೂಡಿಸಲಾಗಿತ್ತು. ಈಗಿನ ಲೋಕಸಭಾ ಚುನಾವಣೆಯಿಂದಲೇ ಇದನ್ನು ಜಾರಿಗೆ ತರಲು ಏನು ಅಡ್ಡಿ?" ಎಂದು ಕಾಂಗ್ರೆಸ್ ಮುಖಂಡ ಜೈರಾಮ್ ರಮೇಶ್ ಪ್ರಶ್ನಿಸಿದ್ದರು.

ಮಹಿಳಾ ಮೀಸಲಾತಿ ಮಸೂದೆ ಮಹಿಳೆಯರಿಗೆ ಶೇ. 33ರಷ್ಟು ಮೀಸಲಾತಿ ನೀಡುವ 'ನಾರಿ ಶಕ್ತಿ ವಂದನ ಅಧಿನಿಯಮ'ವನ್ನು ತ್ವರಿತವಾಗಿ ಜಾರಿಗೆ ತರುವುದು ಸರ್ಕಾರದ ಗುರಿಯಾಗಿದೆ. ಆದರೆ, ಈ ಮೀಸಲಾತಿಯು ಕ್ಷೇತ್ರ ಪುನರ್ವಿಂಗಡಣೆಯ ಪ್ರಕ್ರಿಯೆಯೊಂದಿಗೆ ತಳುಕು ಹಾಕಿಕೊಂಡಿರುವುದು ಈಗ ವಿವಾದಕ್ಕೆ ಕಾರಣವಾಗಿದೆ. ಮಂಗಳವಾರ ನಡೆದ ಮೈತ್ರಿಕೂಟದ ಸಭೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ವಿರೋಧ ಪಕ್ಷಗಳ ನಿಲುವನ್ನು ಸ್ಪಷ್ಟಪಡಿಸಿದ್ದರು.

ಮಹಿಳಾ ಮೀಸಲಾತಿ ಮಸೂದೆಯು ಈ ಮಸೂದೆಯು ಲೋಕಸಭೆಯ ಬಲವನ್ನು ಪ್ರಸ್ತುತ 543 ರಿಂದ 850 ಸದಸ್ಯರಿಗೆ ಹೆಚ್ಚಿಸಲು ಪ್ರಸ್ತಾಪಿಸುತ್ತದೆ, ಇದರಲ್ಲಿ 815 ಸದಸ್ಯರು ರಾಜ್ಯಗಳಿಂದ ಮತ್ತು 35 ಸದಸ್ಯರು ಕೇಂದ್ರಾಡಳಿತ ಪ್ರದೇಶಗಳಿಂದ ಆಯ್ಕೆಯಾಗುತ್ತಾರೆ. 2026 ರ ನಂತರ ಜನಗಣತಿಗಾಗಿ ಕಾಯದೆ, ಇತ್ತೀಚಿನ ಲಭ್ಯವಿರುವ ಜನಗಣತಿಯ ಆಧಾರದ ಮೇಲೆ ಡಿಲಿಮಿಟೇಶನ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸಂವಿಧಾನದ 81 ಮತ್ತು 82 ನೇ ವಿಧಿಗಳನ್ನು ಇದು ತಿದ್ದುಪಡಿ ಮಾಡುತ್ತದೆ. 2029 ರ ಚುನಾವಣೆಗಳಿಗೆ ಮೊದಲು ತಕ್ಷಣ ಜಾರಿಗೆ ಬರುವಂತೆ ಲೋಕಸಭೆ ಮತ್ತು ರಾಜ್ಯ ಶಾಸಕಾಂಗ ಸಭೆಗಳಲ್ಲಿ 33% ಮಹಿಳಾ ಮೀಸಲಾತಿಯನ್ನು ಜಾರಿಗೆ ತರುವುದು ಇದರ ಪ್ರಾಥಮಿಕ ಉದ್ದೇಶವಾಗಿದೆ.

ಡಿಲಿಮಿಟೇಶನ್ ಮಸೂದೆ ಡಿಲಿಮಿಟೇಶನ್ ಮಸೂದೆ, 2026( ಗಡಿ ನಿರ್ಣಯ) ಹಳೆಯ ಡಿಲಿಮಿಟೇಶನ್ ಕಾಯ್ದೆ, 2002 ಅನ್ನು ರದ್ದುಗೊಳಿಸುತ್ತದೆ ಮತ್ತು ಬದಲಾಯಿಸುತ್ತದೆ. ಈ ಮಸೂದೆಯು ಹೊಸ ಡಿಲಿಮಿಟೇಶನ್ ಆಯೋಗವನ್ನು ಸ್ಥಾಪಿಸಲು ಅವಕಾಶ ನೀಡುತ್ತದೆ. ಈ ಆಯೋಗವು ಕ್ಷೇತ್ರಗಳ ಗಡಿಗಳನ್ನು ಮರು ವ್ಯಾಖ್ಯಾನಿಸುತ್ತದೆ ಮತ್ತು ಇತ್ತೀಚಿನ ಜನಗಣತಿ ದತ್ತಾಂಶವನ್ನು ಆಧರಿಸಿ (2011) ಲೋಕಸಭೆ ಮತ್ತು ರಾಜ್ಯ ಶಾಸಕಾಂಗ ಸಭೆಗಳಲ್ಲಿ ಸ್ಥಾನಗಳನ್ನು ಹಂಚುತ್ತದೆ.

ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ, 2026 ಈ ಮಸೂದೆಯು ರಾಜ್ಯಗಳ ಶಾಸಕಾಂಗ ಸಭೆಗಳಲ್ಲಿ ಹಾಗೂ ದೆಹಲಿ, ಜಮ್ಮು ಮತ್ತು ಕಾಶ್ಮೀರ ಮತ್ತು ಪುದುಚೇರಿಯಂತಹ ಕೇಂದ್ರಾಡಳಿತ ಪ್ರದೇಶಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿಯನ್ನು ಜಾರಿಗೆ ತರಲು ದಾರಿ ಮಾಡಿಕೊಡುತ್ತದೆ. ಈ ಮೂರು ಮಸೂದೆಗಳನ್ನು ಪ್ರಾಥಮಿಕವಾಗಿ ಮಹಿಳಾ ಮೀಸಲಾತಿಯ ಅನುಷ್ಠಾನವನ್ನು ತ್ವರಿತಗೊಳಿಸಲು ಮತ್ತು ದೇಶದ ಚುನಾವಣಾ ರಚನೆಯಲ್ಲಿ ವ್ಯಾಪಕ ಬದಲಾವಣೆಗಳನ್ನು ಮಾಡಲು ಪರಿಚಯಿಸಲಾಗುತ್ತಿದೆ.

ಸಂಸತ್ತಿನ ಅಧಿವೇಶನದಲ್ಲಿ ಈ ವಿಷಯದ ಕುರಿತು ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳಲು ವಿರೋಧ ಪಕ್ಷಗಳು ನಿರ್ಧರಿಸಿವೆ. ಮೋದಿ ಸರ್ಕಾರವು ವಿರೋಧ ಪಕ್ಷಗಳನ್ನು ನಿಗ್ರಹಿಸಲು ಮತ್ತು ಚುನಾವಣಾ ಲಾಭ ಪಡೆಯಲು ಈ ರೀತಿ ವರ್ತಿಸುತ್ತಿದೆ. ನಾವು ಸಂಸತ್ತಿನ ಒಳಗೆ ಒಗ್ಗಟ್ಟಿನಿಂದ ಹೋರಾಡುತ್ತೇವೆ ಎಂದು ನಾಯಕರು ಘೋಷಿಸಿದ್ದಾರೆ.

ಮಹಿಳೆಯರಿಗೆ ಅಧಿಕಾರ ನೀಡುವ ಮಸೂದೆಯ ಆಶಯಕ್ಕೆ ಎಲ್ಲರೂ ಸಹಮತ ಸೂಚಿಸಿದ್ದರೂ, ಅದು ಜಾರಿಯಾಗುವ 'ಸಮಯ' ಮತ್ತು 'ವಿಧಾನ' ಈಗ ದೊಡ್ಡ ರಾಜಕೀಯ ಜಿದ್ದಾಜಿದ್ದಿಗೆ ಕಾರಣವಾಗಿದೆ. ಸರ್ಕಾರವು ತನ್ನ ಷರತ್ತುಗಳನ್ನು ಸಡಿಲಿಸುತ್ತದೆಯೇ ಅಥವಾ ಸಂಸತ್ತಿನಲ್ಲಿ ಸಂಘರ್ಷ ಮುಂದುವರೆಯುತ್ತದೆಯೇ ಎಂಬುದನ್ನು ಕಾದು ನೋಡಬೇಕಿದೆ.

## 'ಕುಡಿಯುವ ನೀರಿನ ತೊಂದರೆಯಾಗದಂತೆ ಮುಂಜಾಗ್ರತೆವಹಿಸಿ'

ಬೆಂಗಳೂರು: ರಾಜ್ಯದ ಐದು ಜಿಲ್ಲೆಗಳನ್ನು ಹೊರತುಪಡಿಸಿ ಬೇರೆ ಎಲ್ಲಾ ಜಿಲ್ಲೆಗಳಲ್ಲಿ ಮುಂಗಾರು ಕೊರತೆ ನಿರೀಕ್ಷಿಸಲಾಗಿದ್ದು, ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು.



ಇಂದು ಅವರ ಅಧ್ಯಕ್ಷತೆಯಲ್ಲಿ ವಿಧಾನಸೌಧ ಸಭಾಂಗಣದಲ್ಲಿ ನಡೆದ ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿನ ಕುಡಿಯುವ ನೀರು ಪೂರೈಕೆ ಕುರಿತಾಗಿ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ಜರುಗಿತು.

ಈ ವರ್ಷ ಮುಂಗಾರಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆಯಿದೆ ಎಂದು ಕೇಂದ್ರ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಆಗಸ್ಟ್ ತಿಂಗಳಲ್ಲಿ ವಾಡಿಕೆ ಮಳೆಯಾಗುವ ಸಾಧ್ಯತೆಯಿದ್ದು, ಸೆಪ್ಟಂಬರ್ ತಿಂಗಳಲ್ಲಿ ಮಳೆ ಕಡಿಮೆ ನಿರೀಕ್ಷಿಸಲಾಗಿದೆ.

ಕುಡಿಯುವ ನೀರಿಗೆ ತೊಂದರೆಯಾದರೆ ಆಯಾ ಜಿಲ್ಲಾಧಿಕಾರಿಗಳೇ ಇದಕ್ಕೆ ಹೊಣೆಯಾಗುತ್ತಾರೆ. ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚಿಸಿದರು.

ಈ ಬಾರಿ ಎಪ್ರಿಲ್-ಜೂನ್ ಅವಧಿಯಲ್ಲಿ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚು ಬಿಸಿಗಾಳಿ ದಿನಗಳು ಕಂಡು ಬರುವ ಸಾಧ್ಯತೆಯಿದೆ. ಇಂತಹ ಸಂದರ್ಭದಲ್ಲಿ ಯಾವ ರೀತಿಯ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಬೇಕು. ಹವಾಮಾನ ಇಲಾಖೆಯ ಮುನ್ಸೂಚನೆಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂಬ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳು ಸೂಚನೆಗಳನ್ನು ನೀಡಬೇಕು ಎಂದರು.

ಸಾರ್ವಜನಿಕರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರು ಪೂರೈಕೆಯನ್ನು ಖಾತ್ರಿಪಡಿಸಲು ಯಾವುದೇ ಅನುದಾನದ ಕೊರತೆಯಿಲ್ಲ. ಜಿಲ್ಲಾಧಿಕಾರಿಗಳ ವರದಿ ಆಧಾರದಲ್ಲಿ ಅಗತ್ಯ ಅನುದಾನವನ್ನು ಒದಗಿಸಲು ಹಣಕಾಸು ಇಲಾಖೆಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದರು.

ರಾಜ್ಯದಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಬಹುದಾದ 213 ತಾಲೂಕುಗಳನ್ನು ಹಾಗೂ 2410 ಗ್ರಾಮ ಪಂಚಾಯತ್ಗಳನ್ನು ಗುರುತಿಸಲಾಗಿದೆ.

ಪ್ರಸ್ತುತ 114 ತಾಲೂಕುಗಳ 598 ಗ್ರಾಮ ಪಂಚಾಯತ್ಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದೆ. ಟ್ಯಾಂಕರ್ಗಳ ಮೂಲಕ 137 ಗ್ರಾಮಗಳಿಗೆ ಒಟ್ಟು 129 ಟ್ಯಾಂಕರ್ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. 585 ಖಾಸಗಿ ಬೋರ್ವೆಲ್ಗಳನ್ನು ಬಾಡಿಗೆಗೆ ಪಡೆಯಲಾಗಿದ್ದು, ಇದರ ಮೂಲಕ 515ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿರುವ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ಪಡೆದರು.

ಪ್ರಸ್ತುತ 27 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, 95 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ಗುರುತಿಸಲಾಗಿದೆ. ಒಟ್ಟು 145 ವಾರ್ಡ್ಗಳಿಗೆ 57 ಟ್ಯಾಂಕರ್ಗಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದ್ದು, ಬಾಡಿಗೆಗೆ 22 ಕೊಳವೆ ಬಾವಿಗಳನ್ನು ಪಡೆಯಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

## ಕುರ್ಚಿ ಆಸೆಗೆ ಡಿಕೆಶಿಯನ್ನು ಮುಗಿಸುತ್ತಿದ್ದಾರೆ: ಜೆಡಿಎಸ್ ಕಿಡಿ

ಬೆಂಗಳೂರು: ಕುರ್ಚಿ ಆಸೆಗಾಗಿ ಡಿಸಿಎಂ ಡಿಕೆ ಶಿವಕುಮಾರ್ ಅವರು ತಮ್ಮ ವಿರೋಧಿ ಬಣದ ನಾಯಕರನ್ನು ಹೊಂಚು ಹಾಕಿ, ಸಂಚು ರೂಪಿಸಿ ಮುಗಿಸುತ್ತಿದ್ದಾರೆ ಎಂದು ಜೆಡಿಎಸ್ ಕಿಡಿಕಾರಿದೆ.

ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದು, ಕಾಂಗ್ರೆಸ್‌ನಿಂದ ಮುಸ್ಲಿಂ ನಾಯಕ ಅಬ್ದುಲ್ ಜಬ್ಬರ್ ಅಮಾನತು ವಿಚಾರವಾಗಿ ಆಕ್ರೋಶ ಹೊರಹಾಕಿದೆ. ಕಾಂಗ್ರೆಸ್ ಪಕ್ಷದಲ್ಲಿ ಸಾಮಾಜಿಕ ಅನ್ಯಾಯ ನಡೆಯುತ್ತಿದೆ.

ಅಂದು ಪರಿಶಿಷ್ಟ ಸಮುದಾಯದ ವಾಲ್ಮೀಕಿ ಜನಾಂಗದ ನಾಯಕ ಕೆ.ಎನ್. ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ಏಕಾಏಕಿ ಕಿತ್ತು ಹಾಕಿದ್ದರು. ಇಂದು ಅಲ್ಪಸಂಖ್ಯಾತ ಸಮುದಾಯದ ಮುಖಂಡ ಅಬ್ದುಲ್ ಜಬ್ಬರ್ ಅವರನ್ನು ಪಕ್ಷದಿಂದ ಉಚ್ಚಾಟಿಸಲಾಗಿದೆ. ಕುರ್ಚಿ ಆಸೆಗಾಗಿ ಡಿಕೆ ಶಿವಕುಮಾರ್ ತಮ್ಮ ವಿರೋಧಿ ಬಣದ ನಾಯಕರನ್ನು ಹೊಂಚು ಹಾಕಿ, ಸಂಚು ರೂಪಿಸಿ ಒಬ್ಬೊಬ್ಬರನ್ನೇ ಮುಗಿಸುತ್ತಿದ್ದಾರೆ ಎಂದು ಆರೋಪಿಸಿದೆ.

ತೋಳ್ಬಲದಿಂದ ಮೆರೆಯುತ್ತಿರುವ ಡಿಕೆಶಿ ಸ್ವಾರ್ಥಕ್ಕೆ ಕಾಂಗ್ರೆಸ್‌ಗಾಗಿ ದುಡಿದ ತಳಮಟ್ಟದ ದಲಿತ ಮತ್ತು ಹಿಂದುಳಿದ ವರ್ಗಗಳ ನಾಯಕರನ್ನು ಗುರಿಯಾಗಿಸಿ, ಅವರ ರಾಜಕೀಯ ಭವಿಷ್ಯಕ್ಕೆ ಕೊಳ್ಳಿ ಇಡುತ್ತಿದ್ದಾರೆ. ಇದು ಕಾಂಗ್ರೆಸ್‌ನ ಅಸಲಿ ಮುಖ ಎಂದು ಟೀಕಿಸಿದೆ.

## ಗ್ರೇಡ್ ಯಾಕೆ...? ಅಂಕವನ್ನೇ ಕೊಡಿ: ಹೈಕೋರ್ಟ್

ಬೆಂಗಳೂರು: ಪ್ರಸಕ್ತ ಸಾಲಿನಿಂದಲೇ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ನಡೆಸುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆ ವಿಷಯಗಳಿಗೆ ಗ್ರೇಡ್ ಬದಲಿಗೆ ಅಂಕಗಳನ್ನು ನೀಡುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ.

ಗ್ರೇಡ್ ನೀಡುವ ಬಗ್ಗೆ ಪ್ರಶ್ನಿಸಿ ಚಿಕ್ಕಮಗಳೂರಿನ ಸಹನಾ ಆರ್. ನಾಯ್ಕ ಸೇರಿ ಮೂವರು ವಿದ್ಯಾರ್ಥಿಗಳು ತಕರಾರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಇ.ಎಸ್.ಇಂದಿರೇಶ್ ಅವರ ಏಕಸದಸ್ಯ ಪೀಠವು ಗ್ರೇಡ್ ಬದಲಿಗೆ ಅಂಕಗಳನ್ನು ನೀಡುವಂತೆ ಸರ್ಕಾರಕ್ಕೆ ಸೂಚಿಸಿ, ಅರ್ಜಿ ಇತ್ಯರ್ಥಪಡಿಸಿದೆ.

ಅರ್ಜಿದಾರರ ಪರ ವಕೀಲ ಆರ್.ವಿ.ನಾಯ್ಕ ವಾದ ಮಂಡಿಸಿ, 2025-2026ನೇ ಸಾಲಿನಿಂದಲೇ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆ ವಿಷಯಗಳಿಗೆ ಅಂಕಗಳ ಬದಲಿಗೆ ಗ್ರೇಡ್ ನೀಡುವುದಾಗಿ ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು 2026ರ ಮಾ.28ರಂದು ಹೇಳಿಕೆ ನೀಡಿದ್ದಾರೆ. ಅಲ್ಲದೇ ಇದಕ್ಕೂ ಮುನ್ನ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ಮುಖ್ಯಸ್ಥರು 2024ರ ಅ.18 ಮತ್ತು 2025ರ ಅ.28ರಂದು ಮಾರ್ಗಸೂಚಿ ಹಾಗೂ ಸುತ್ತೋಲೆ ಹೊರಡಿಸಿ, ಎಸ್‌ಎಸ್‌ಎಲ್‌ಸಿ ಹಿಂದಿ ಹಾಗೂ ಇತರೆ ತೃತೀಯ ಭಾಷಾ ವಿಷಯಗಳಿಗೆ 100 ಅಂಕ ನೀಡಬೇಕು. ಲಿಖಿತ ಪರೀಕ್ಷೆಯ ಮೌಲ್ಯಮಾಪನದಲ್ಲಿ 80 ಅಂಕ, ಶಾಲಾ ಆಂತರಿಕ ಪರೀಕ್ಷೆ 20 ಅಂಕ ನೀಡಬೇಕು ಎಂದು ಸೂಚಿಸಿದ್ದಾರೆ. ಆದರೆ, ಕೊನೆ ಹಂತದಲ್ಲಿ ಪರೀಕ್ಷೆ ನಡೆಯುತ್ತಿರುವ ಸಮಯದಲ್ಲಿ ಅಂಕಗಳ ಬದಲಿಗೆ ಗ್ರೇಡ್ ನೀಡುವ ತೀರ್ಮಾನವನ್ನು ಸರ್ಕಾರ ಕೈಗೊಂಡಿದೆ ಎಂದು ಆಕ್ಷೇಪಿಸಿದರು. ಯುಪಿಎಸ್‌ಸಿ ಸೇರಿ ಕೇಂದ್ರ ಸರ್ಕಾರ ಹಾಗೂ ಕೇಂದ್ರ ಸ್ವಾಮ್ಯದ ಸಂಸ್ಥೆಗಳು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಬ್ಯಾಂಕಿಂಗ್ ಪರೀಕ್ಷೆಗಳಲ್ಲಿ ಗ್ರೇಡಿಂಗ್‌ನ್ನು ಪರಿಗಣಿಸುವುದಿಲ್ಲ. ಕೇವಲ ಅಂಕಗಳನ್ನಷ್ಟೆ ಪರಿಗಣಿಸಲಾಗುತ್ತದೆ.

ರಾಜ್ಯ ಸರ್ಕಾರ ಹಿಂದಿ ಹಾಗೂ ಇತರೆ ತೃತೀಯ ಭಾಷಾ ವಿಷಯಗಳ ಪರೀಕ್ಷೆಯಲ್ಲಿ ಅಂಕಗಳ ಬದಲಿಗೆ ಗ್ರೇಡ್ ನೀಡಿದರೆ, ರಾಜ್ಯದ ವಿದ್ಯಾರ್ಥಿಗಳು/ಉದ್ಯೋಗ ಆಕಾಂಕ್ಷಿಗಳ ಮೇಲೆ ಭವಿಷ್ಯದಲ್ಲಿ ಸಾಕಷ್ಟು ದುಷ್ಪರಿಣಾಮ ಬೀರುತ್ತದೆ. ಆದ್ದರಿಂದ 2025-2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆ ವಿಷಯಗಳಿಗೆ ಗ್ರೇಡ್ ಬದಲಿಗೆ ಅಂಕಗಳನ್ನೇ ನೀಡಲು ಸರ್ಕಾರ ಹಾಗೂ ಕೆಎಸ್‌ಇಎಬಿಗೆ ನಿರ್ದೇಶಿಸಬೇಕು ಎಂದು ಕೋರಿದರು. ನ್ಯಾಯಪೀಠ ಪ್ರತಿಕ್ರಿಯಿಸಿ, ತೃತೀಯ ಭಾಷೆ ವಿಷಯಗಳ ಪರೀಕ್ಷೆಯಲ್ಲಿ ಗ್ರೇಡಿಂಗ್ ನೀಡುವ ಬಗ್ಗೆ ರಾಜ್ಯ ಸರ್ಕಾರ ನೋಟಿಫಿಕೇಷನ್/ಸುತ್ತೋಲೆ ಹೊರಡಿಸಿದೆಯೇ ಎಂದು ಸರ್ಕಾರಿ ವಕೀಲರನ್ನು ಕೋರಿದರು.

ಸರ್ಕಾರಿ ವಕೀಲರು, ಸದ್ಯ ಕರಡು ಅಧಿಸೂಚನೆ ಹೊರಡಿಸಲಾಗಿದೆ. ಹೆಚ್ಚಿನ ಮಾಹಿತಿಯನ್ನು ಸರ್ಕಾರದಿಂದ ಪಡೆದು ತಿಳಿಸಲಾಗುವುದು ಎಂದು ತಿಳಿಸಿದರು. ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ, ಹಾಲಿ ಇರುವ ನಿಯಮಗಳು ಹಾಗೂ ಮಾರ್ಗಸೂಚಿಯಂತೆ 2025-2026ನೇ ಸಾಲಿನಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆ ವಿಷಯಗಳಿಗೆ ಗ್ರೇಡ್ ಬದಲಿಗೆ ಅಂಕಗಳನ್ನು ನೀಡುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿ ಅರ್ಜಿ ಇತ್ಯರ್ಥಪಡಿಸಿದೆ.




# ರಾಜ್ಯದಲ್ಲಿ ಲೋಕಸಭಾ ಸ್ಥಾನ 42ಕ್ಕೆ ಏರಿಕೆ..!

ನವದೆಹಲಿ: ಕ್ಷೇತ್ರ ಪುನರ್ ವಿಂಗಡಣೆಯ ನಂತರ ಕರ್ನಾಟಕದಲ್ಲಿ ಲೋಕಸಭಾ ಕ್ಷೇತ್ರಗಳ ಸಂಖ್ಯೆಯು ಸದ್ಯದ 28 ರಿಂದ 42 ಕ್ಕೆ ಏರಿಕೆಯಾಗಲಿದೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಕ್ಷೇತ್ರ ಮರುವಿಂಗಡಣೆ ಮಸೂದೆ ಯಿಂದ ದಕ್ಷಿಣ ರಾಜ್ಯಗಳಿಗೆ ಅನ್ಯಾಯವಾ ಗಲಿದೆ ಎಂಬ ಆರೋಪಕ್ಕೆ ಲೋಕಸಭೆಯಲ್ಲಿ ಉತ್ತರ ನೀಡಿದ ಅವರು, ಕ್ಷೇತ್ರ ಪುನರ್ ವಿಂಗಡನೆ ಮಸೂದೆಯಿಂದಾಗಿ ಕರ್ನಾ ಟಕದ ಪ್ರಾತಿನಿಧ್ಯವು 14 ಸ್ಥಾನಗಳಷ್ಟು ಹೆಚ್ಚಾಗಲಿದ್ದು, ಒಟ್ಟು 42 ಸಂಸದರು ರಾಜ್ಯದಿಂದ ಆಯ್ಕೆಯಾಗಲಿದ್ದಾರೆ ಎಂದು ತಿಳಿಸಿದರು.

ಸದ್ಯ ಲೋಕಸಭೆಯ ಒಟ್ಟು 543 ಸ್ಥಾನಗಳಲ್ಲಿ ಕರ್ನಾಟಕದ ಪಾಲು ಶೇ. 5.15 ರಷ್ಟಿದೆ. 816 ಸದಸ್ಯರ ಸದನದಲ್ಲಿ ಅದರ ಪಾಲು ಸುಮಾರು 5.14 ಪ್ರತಿಶತದಷ್ಟಿರುತ್ತದೆ.



ಮರುವಿಂಗಡಣೆಯ ನಂತರ ಇದರ ಪ್ರಾತಿನಿಧ್ಯ ಶೇ. 5.44 ಕ್ಕೆ ಏರಿಕೆಯಾಗಲಿರುವುದರಿಂದ ಕರ್ನಾಟಕಕ್ಕೆ ಯಾವುದೇ ನಷ್ಟವಾಗುವುದಿಲ್ಲ ಎಂದರು.

> ಸದ್ಯ ಲೋಕಸಭೆಯ ಒಟ್ಟು 543 ಸ್ಥಾನಗಳಲ್ಲಿ ಕರ್ನಾಟಕದ ಪಾಲು ಶೇ. 5.15 ರಷ್ಟಿದೆ. 816 ಸದಸ್ಯರ ಸದನದಲ್ಲಿ ಅದರ ಪಾಲು ಸುಮಾರು 5.14 ಪ್ರತಿಶತದಷ್ಟಿರುತ್ತದೆ. ಮರುವಿಂಗಡಣೆಯ ನಂತರ ಇದರ ಪ್ರಾತಿನಿಧ್ಯ ಶೇ.5.44ಕ್ಕೆ ಏರಿಕೆಯಾಗಲಿರುವುದರಿಂದ ಕರ್ನಾಟಕಕ್ಕೆ ಯಾವುದೇ ನಷ್ಟವಾಗುವುದಿಲ್ಲ ಎಂದರು.

ಜನಸಂಖ್ಯೆ ನಿಯಂತ್ರಿಸಿದ ಕಾರಣಕ್ಕಾಗಿ ದಕ್ಷಿಣ ಭಾರತದ ರಾಜ್ಯಗಳು ಲೋಕಸಭೆಯಲ್ಲಿ ಸ್ಥಾನಗಳನ್ನು ಕಳೆದುಕೊಳ್ಳಲಿವೆ ಎಂಬ ಆತಂಕಕ್ಕೆ ಉತ್ತರಿಸಿದ ಅವರು, ದಕ್ಷಿಣದ ರಾಜ್ಯಗಳು ಜನಸಂಖ್ಯೆಯನ್ನು ಯಶಸ್ವಿಯಾಗಿ ನಿಯಂತ್ರಿಸಿವೆ.

ಆದರೆ, ಉತ್ತರ ಭಾರತದ ರಾಜ್ಯಗಳ ಜನಸಂಖ್ಯೆ ಹೆಚ್ಚಿದೆ ಎಂಬ ಕಾರಣಕ್ಕೆ ದಕ್ಷಿಣದ ರಾಜ್ಯಗಳ ರಾಜಕೀಯ ಪ್ರಾಬಲ್ಯ ಕುಗ್ಗುವುದಿಲ್ಲ. ಸ್ಥಾನಗಳ ಹೆಚ್ಚಳವು ದಕ್ಷಿಣದ ರಾಜ್ಯಗಳಿಗೂ ಸಮಾನವಾಗಿ ಅನ್ವಯಿಸುವುದರಿಂದ, ಆ ರಾಜ್ಯಗಳ ಧ್ವನಿ ಸಂಸತ್ತಿನಲ್ಲಿ ಗಟ್ಟಿಯಾಗಿಯೇ ಇರಲಿದೆ ಎಂದು ಅವರು ಸ್ಪಷ್ಟಪಡಿಸಿದರು.

ಕರ್ನಾಟಕ ಸೇರಿದಂತೆ ದಕ್ಷಿಣದ ರಾಜ್ಯಗಳ ಸ್ಥಾನಗಳು ಹೆಚ್ಚಾಗಲಿವೆಯೇ ಹೊರತು ಯಾವುದೇ ನಷ್ಟವಾಗುವುದಿಲ್ಲ ಎಂದು ಭರವಸೆ ನೀಡಿದರು.

ದಕ್ಷಿಣ ರಾಜ್ಯಗಳ ಲೋಕಸಭಾ ಸ್ಥಾನಗಳ ಸಂಖ್ಯೆ ಎಷ್ಟು ಏರಿಕೆಯಾಗಲಿದೆ ಎಂಬುದನ್ನು ವಿವರಿಸಿದ ಅವರು, ಈ ರಾಜ್ಯಗಳ ಒಟ್ಟು ಲೋಕಸಭಾ ಸ್ಥಾನಗಳ ಸಂಖ್ಯೆಯು 195 ಕ್ಕೆ ಏರಿಕೆಯಾಗಲಿದೆ. ಕರ್ನಾಟಕ 28 ರಿಂದ 42, ತಮಿಳುನಾಡು 39 ರಿಂದ 59, ಕೇರಳ 20 ರಿಂದ 30, ಆಂಧ್ರಪ್ರದೇಶ 25 ರಿಂದ 38, ತೆಲಂಗಾಣ 17 ರಿಂದ 26ಕ್ಕೆ ಏರಿಕೆಯಾಗಲಿದೆ ಎಂದು ತಿಳಿಸಿದರು.

543 ಮಂದಿ ಇರುವ ಲೋಕಸಭೆಯಲ್ಲಿ ಹಾಲಿ ದಕ್ಷಿಣ ಭಾಗದ 129 ಸಂಸದರು ಈ ಸದನದಲ್ಲಿ ಕುಳಿತಿದ್ದಾರೆ. ಅದು ಸರಿಸುಮಾರು ಶೇ. 23.76 ರಷ್ಟು ಆಗುತ್ತದೆ. 816 ಸದಸ್ಯರ ಸದನದಲ್ಲಿ 195 ಸಂಸದರು ಕುಳಿತುಕೊಳ್ಳುತ್ತಾರೆ ಮತ್ತು ಅವರ ಪ್ರಾತಿನಿಧ್ಯ 23.97% ಆಗಿರುತ್ತದೆ ಎಂದು ವಿವರಿಸಿದರು.

ಕ್ಷೇತ್ರಗಳ ಸಂಖ್ಯೆ ಹೆಚ್ಚಾಗುವುದರಿಂದ ಪ್ರತಿಯೊಬ್ಬ ಸಂಸದರು ಪ್ರತಿನಿಧಿಸುವ ಮತದಾರರ ಸಂಖ್ಯೆ ಕಡಿಮೆಯಾಗುತ್ತದೆ. ಉದಾಹರಣೆಗೆ ಕರ್ನಾಟಕದಲ್ಲಿ ಒಬ್ಬ ಸಂಸದರು 25 ಲಕ್ಷ ಜನರ ಬದಲಿಗೆ ಸುಮಾರು 16 ಲಕ್ಷ ಜನರನ್ನು ಪ್ರತಿನಿಧಿಸುತ್ತಾರೆ, ಇದರಿಂದ ಅಭಿವೃದ್ಧಿ ಕಾರ್ಯಗಳು ಸುಲಭವಾಗುತ್ತವೆ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಅವರು ಅಮಿತ್ ಶಾ ಅವರ ಹೇಳಿಕೆಯನ್ನು ಸಮರ್ಥಿಸಿಕೊಂಡರು.

ಲೋಕಸಭೆಯಲ್ಲಿ ಏಪ್ರಿಲ್ 16 ರಂದು ಮಂಡಿಸಲಾದ 'ಕ್ಷೇತ್ರ ಮರುವಿಂಗಡಣೆ ಮಸೂದೆ-2026'ರ ಅನ್ವಯ ದೇಶದ ಎಲ್ಲಾ ರಾಜ್ಯಗಳ ಲೋಕಸಭಾ ಸ್ಥಾನಗಳನ್ನು ಈಗಿರುವ ಸಂಖ್ಯೆಗಿಂತ ಸಮಾನವಾಗಿ ಶೇ. 50 ರಷ್ಟು ಹೆಚ್ಚಿಸುವ ವಿಶಿಷ್ಟ ಸೂತ್ರವನ್ನು ಕೇಂದ್ರ ಸರ್ಕಾರ ಪ್ರಸ್ತಾಪಿಸಿದೆ. ಶೇ.33 ರಷ್ಟು ಮಹಿಳಾ ಮೀಸಲಾತಿಯನ್ನು ಜಾರಿಗೆ ತರುವಾಗ, ಪ್ರಸ್ತುತ ಇರುವ ಪುರುಷ ಸಂಸದರ ಸಂಖ್ಯೆಗೆ ಧಕ್ಕೆಯಾಗದಂತೆ ಹೆಚ್ಚುವರಿ ಸ್ಥಾನಗಳನ್ನು ಸೃಷ್ಟಿಸುವುದು ಈ 50% ಹೆಚ್ಚಳದ ಹಿಂದಿನ ಮುಖ್ಯ ಉದ್ದೇಶವಾಗಿದೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
17/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಬೆಂಗಳೂರಿಗೆ ಪೌಲಮಿ ಎಸ್ಟೇಟ್ಸ್ ಪಾದಾರ್ಪಣೆ

ಬೆಂಗಳೂರು




ಹೈದರಾಬಾದ್ ಮೂಲದ ರಿಯಲ್ ಎಸ್ಟೇಟ್ ಕಂಪೆನಿ ಪೌಲಮಿ ಎಸ್ಟೇಟ್ಸ್ ಪ್ರೈವೇಟ್ ಲಿಮಿಟೆಡ್ ತನ್ನ "ಪೌಲಮಿ ಫ್ಲೋರಿಕ್ ಯೋಜನೆಯ ಮೂಲಕ ಬೆಂಗಳೂರು ಮಾರುಕಟ್ಟೆಯನ್ನು ಪ್ರವೇಶಿಸಲಿದೆ. 2005ರಲ್ಲಿ ಆರಂಭಗೊಂಡ ಪೌಲಮಿ ಎಸ್ಟೇಟ್ಸ್ ಬೆಂಗಳೂರಿನಲ್ಲಿ ಮೊದಲ ವಸತಿ ಸಮುಚ್ಚಯವನ್ನು ನಿರ್ಮಿಸಲಿದೆ.

ನೂತನ ಯೋಜನೆಗೆ ಶೀಘ್ರವೇ ಚಾಲನೆ ದೊರೆಯಲಿದೆ. ಬೆಂಗಳೂರು ದೇಶದಲ್ಲಿಯೇ ತ್ವರಿತವಾಗಿ ಬದಲಾಗುತ್ತಿರುವ ವಸತಿ ರಿಯಲ್ ಎಸ್ಟೇಟ್ ಮಾರುಕಟ್ಟೆ ಹೊಂದಿದ್ದು, ಕಂಪೆನಿಯು ವಿವೇಚನೆಯ ಯೋಜನೆ, ಗುಣಮಟ್ಟ ಮತ್ತು ಗ್ರಾಹಕ ಕೇಂದ್ರ ಅಭಿವೃದ್ಧಿ ಸೂತ್ರಗಳ ಸಿದ್ಧಾಂತದೊಂದಿಗೆ ಬೆಂಗಳೂರಿಗೆ ಕಾಲಿಡುತ್ತಿದೆ.

ಸದೃಢ ಮೂಲಸೌಕರ್ಯ, ಉದ್ಯೋಗಾವಕಾಶಗಳಿಂದಾಗಿ ಬೆಂಗಳೂರು ಅಭಿವೃದ್ಧಿಗೆ ಹೆಚ್ಚು ಸಾಧ್ಯತೆಗಳಿರುವ ಮಾರುಕಟ್ಟೆಯಾಗಿದ್ದು, ಪೌಲಮಿ ಈಗಾಗಲೇ ಇದನ್ನು ಗುರುತಿಸಿ ಕಾರ್ಯತಂತ್ರ ರೂಪಿಸಿದೆ.

## ಸೇಲ್ಸ್‌ಫೋರ್ಸ್ ಜೊತೆಯಲ್ಲಿ ಸಹಯೋಗ

ಬೆಂಗಳೂರು

ವಿಶ್ವದ #1 ಎಐ ಸಿ.ಆರ್.ಎಂ ಸೇಲ್ಸ್ ಫೋರ್ಸ್, ಭಾರತದ ಅತ್ಯಂತ ಗೌರವಾನ್ವಿತ ಮತ್ತು ಉನ್ನತ ಶಿಕ್ಷಣದಲ್ಲಿ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಸಂಸ್ಥೆಗಳಲ್ಲಿ ಒಂದಾದ ಎಸ್.ವಿ.ಕೆ.ಎಂ.ನ ಎನ್.ಎಂ.ಐ.ಎಂ.ಎಸ್ (ನಾರ್ಸೀ ಮೊಂಜೀ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್) ಜೊತೆಯಲ್ಲಿ ಸಹಯೋಗ ಹೊಂದಿದ್ದು ಅದು ಸಂಭವನೀಯ ವಿದ್ಯಾರ್ಥಿಗಳೊಂದಿಗೆ ಸಕ್ರಿಯವಾಗಿರಲು ಮತ್ತು ದೊಡ್ಡ ಮಟ್ಟದಲ್ಲಿ ಪ್ರವೇಶಗಳನ್ನು ನಿರ್ವಹಿಸುವುದನ್ನು ಡಿಜಿಟಲಿ ಪರಿವರ್ತನೆ ಮಾಡಲಿದೆ.



ಎನ್.ಎಂ.ಐ.ಎಂ.ಎಸ್. ದತ್ತಾಂಶದ ಕೊರತೆಗಳನ್ನು ನಿವಾರಿಸಲು, ಪ್ರವೇಶಗಳ ವರ್ಕ್ ಫ್ಲೋ ಸುಸೂತ್ರಗೊಳಿಸಲು ಮತ್ತು ಹಲವು ಕ್ಯಾಂಪಸ್ ಗಳಿಗೆ ತನ್ನ ವೈಯಕ್ತಿಕಗೊಳಿಸಿದ ವಿದ್ಯಾರ್ಥಿ ಅನುಭವಗಳನ್ನು ಪೂರೈಸಲು ಮತ್ತು ಡಿಜಿಟಲ್ ಹೆಜ್ಜೆ ಗುರುತಿಗೆ ಏಕೀಕೃತ, ಎಐ-ಪವರ್ಡ್ ಪ್ಲಾಟ್ ಫಾರಂ ನಿರ್ಮಿಸುತ್ತಿದೆ. ಹಿಂದೆ ವಿಘಟಿತವಾದ ವ್ಯವಸ್ಥೆಗಳನ್ನು ಒಟ್ಟಿಗೆ ತರುವ ಮೂಲಕ ಯೂನಿವರ್ಸಿಟಿಯು ಕಾರ್ಯಾಚರಣೆಯ ದಕ್ಷತೆ ಸುಧಾರಿಸುವ, ಪ್ರವೇಶಗಳ ಕಾರ್ಯಕ್ಷಮತೆಗೆ ಬಗ್ಗೆ ರಿಯಲ್-ಟೈಮ್ ಮಾಹಿತಿ ಪಡೆಯುವ ಮತ್ತು ವಿಸ್ತರಿಸಬಲ್ಲ, ವಿದ್ಯಾರ್ಥಿ-ಕೇಂದ್ರಿತ ವ್ಯವಸ್ಥೆಗೆ ತಳಹದಿ ನಿರ್ಮಿಸಲಿದೆ.

ಎನ್.ಎಂ.ಐ.ಎಂ.ಎಸ್. ಏಜೆಂಟ್ ಫೋರ್ಸ್ ಎಜುಕೇಷನ್ ಮತ್ತು ಏಜೆಂಟ್ ಫೋರ್ಸ್ ಮಾರ್ಕೆಟಿಂಗ್ ಪರಿಹಾರಗಳನ್ನು ಅಳವಡಿಸಿದ್ದು ಅದು ಮ್ಯೂಲ್ ಸಾಫ್ಟ್ ನೊಂದಿಗೆ ತನ್ನ ಲೀಡ್ ನಿಂದ ಪ್ರವೇಶ ಪ್ರಕ್ರಿಯೆಯನ್ನು ಪರಿವರ್ತಿಸುತ್ತದೆ.

ಈ ಪ್ಲಾಟ್ ಫಾರಂ ಸಂಭವನೀಯ ವಿದ್ಯಾರ್ಥಿಗಳನ್ನು ಡಿಜಿಟಲ್ ಚಾನೆಲ್ ಗಳ ಮೂಲಕ ಸ್ವಯಂಚಾಲಿತ ಪಡೆಯುವಿಕೆ, ಪೋಷಣೆ ಮತ್ತು ಗಮನಿಸುವ ಮೂಲಕ ಸಮಗ್ರ ಲೀಡ್ ಮ್ಯಾನೇಜ್ಮೆಂಟ್ ಸಾಧ್ಯವಾಗಿಸುತ್ತದೆ, ಇದರೊಂದಿಗೆ ಎಐ-ಪ್ರೇರಿತ ವೈಯಕ್ತಿಕಗೊಳಿಸಿದ ಸಕ್ರಿಯತೆಯನ್ನು ವೈಯಕ್ತಿಕ ಆಸಕ್ತಿಗಳು ಮತ್ತು ವರ್ತನೆಗಳಿಗೆ ರೂಪಿಸಲಾಗಿದೆ.


### ಬಸವಜಯಂತಿಗೂ ಮುನ್ನ ಚಾಲುಕ್ಯ ವೃತ್ತದ ಕಾಯಕಯೋಗಿ ಬಸವಣ್ಣನವರ ಪುತ್ಥಳಿಗೆ ಹೊಸ ಸ್ವರೂಪ ನೀಡಿ:

# ಕರ್ನಾಟಕ ರಾಜ್ಯ ಯುವ ಸಮೂಹ ಒತ್ತಾಯ

ಬೆಂಗಳೂರು: ನಗರದ ಚಾಲುಕ್ಯ ವೃತ್ತದಲ್ಲಿರುವ ಕಾಯಕಯೋಗಿ ಬಸವಣ್ಣನವರ ಪುತ್ಥಳಿಗೆ ಬಣ್ಣ ಬಳಿದು ಮೂಲಭೂತ ಸೌಕರ್ಯ ಕಲ್ಪಿಸಬೇಕು ಎಂದು ಕರ್ನಾಟಕ ರಾಜ್ಯ ಯುವ ಸಮೂಹದ ರಾಜ್ಯಾಧ್ಯಕ್ಷ ಎಸ್. ಸಂಗಮೇಶ್ ಒತ್ತಾಯಿಸಿದ್ದಾರೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಪತ್ರ ಬರದಿರುವ ಅವರು, ಏಪ್ರಿಲ್ 20 ರಂದು ನಾಡಿನೆಲ್ಲೆಡೆ ಬಸವ ಜಯಂತಿ ಆಚರಿಸಲಾಗುತ್ತಿದ್ದು, ಅದಕ್ಕೂ ಮುನ್ನ ಪುತ್ಥಳಿ ನಳನಳಿಸುವಂತೆ ಮಾಡಬೇಕು. ಅಂದು ನಾಡಿನ ಹಲವು ಗಣ್ಯರು ವಿಶ್ವಗುರುವಿಗೆ ಪುಷ್ಪನಮನ ಸಲ್ಲಿಸಲಿದ್ದಾರೆ. ಆದರೆ ಚಾಲುಕ್ಯ ವೃತ್ತದಲ್ಲಿರುವ ಬಸವಣ್ಣನವರ ಪುತ್ಥಳಿಯನ್ನು ಸ್ವಚ್ಛಗೊಳಿಸದೇ, ನಿರ್ವಹಣೆ ಮಾಡದೇ ನಿರ್ಲಕ್ಷ್ಯವಹಿಸಿರುವುದರಿಂದ ಅದು ಜೀವ ಕಳೆ ಕಳೆದುಕೊಂಡಿದೆ. ಪುತ್ಥಳಿಯ ಬಣ್ಣ ಮಸುಕಾಗಿದ್ದು, ತಕ್ಷಣ ಹೊಸ ಸ್ವರೂಪ ನೀಡುವ ಕೆಲಸ ನಡೆಯಬೇಕು. ರಾಜ್ಯದ ಯಾವುದೇ ಪುತ್ಥಳಿಯಲ್ಲೂ ಬಿಳಿ ಬಣ್ಣ ಬಳಿದಿಲ್ಲ. ಗೋಲ್ಡನ್ ಕಲರ್ ಬಳಸಿ ಪುತ್ಥಳಿಗೆ ಹೊಸ ಸ್ಪಷ್ಟ ನೀಡಬೇಕು ಎಂದು ಹೇಳಿದ್ದಾರೆ.

ಬಸವಣ್ಣನವರ ಪುತ್ಥಳಿಯ ಸುತ್ತಮುತ್ತ ತುರ್ತು ಸ್ವಚ್ಛತೆ, ಸೌಂದರ್ಯೀಕರಣ, ಮೂಲಭೂತ ಸೌಲಭ್ಯಗಳೊಂದಿಗೆ ಪಾರ್ಕ್ ನಿರ್ಮಾಣ ಮಾಡಬೇಕು. ಪ್ರತಿದಿನ ಪ್ರತಿದಿನ ಬೆಳಗ್ಗೆ 5 ರಿಂದ 10 ಗಂಟೆ, ಸಂಜೆ 5.30ರಿಂದ ರಾತ್ರಿ 10 ಗಂಟೆಯವರೆಗೆ ಧ್ವನಿ ವರ್ಧಕ ಧ್ವನಿ ವರ್ಧಕದ ಮೂಲಕ ವಚನ ಪ್ರಸಾರಕ್ಕೆ ವ್ಯವಸ್ಥೆ ಮಾಡಬೇಕು. ಧ್ವನಿ ವರ್ಧಕ ವ್ಯವಸ್ಥೆ ಬಸವ ಜಯಂತಿಗೆ ಸೀಮಿತವಾಗದೆ ಅನುದಿನದ ಕಾರ್ಯಕ್ರಮವಾಗಬೇಕು. ಬಸವಣ್ಣನವರ ವಚನಗಳು ಸಮಾಜದಲ್ಲಿ



ಸಮಾನತೆ, ಕಾಯಕ ಮತ್ತು ದಾಸೋಹದ ಮೌಲ್ಯಗಳನ್ನು ಸಾರುವ ಅಮೂಲ್ಯ ಸಂದೇಶಗಳಾಗಿದ್ದು, ಅವು ಜನಮಾನಸಕ್ಕೆ ಪ್ರತಿದಿನ ತಲುಪುವಂತೆ ಮಾಡುವ ಜವಾಬ್ದಾರಿ ಸರ್ಕಾರದ್ದಾಗಿದೆ ಎಂದು ಹೇಳಿದ್ದಾರೆ.

ಪುತ್ಥಳಿಯ ಸೌಂದರ್ಯ ವೃದ್ಧಿಸುವ ಜೊತೆಗೆ ಸುತ್ತಮುತ್ತಲಿನ ಪ್ರದೇಶದಲ್ಲಿ ಹಸೀರಿಕರಣಕ್ಕೆ ಒತ್ತು ನೀಡಬೇಕು. ಹೂವಿನ ಗಿಡಗಳು, ವಿಧಾನಸೌಧ, ಹೈಕೋರ್ಟ್, ಲೋಕಭವನಕ್ಕೆ ಕೂಗಳೆಯ ದೂರದಲ್ಲಿರುವ ಚಾಲುಕ್ಯ ವೃತ್ತದ ಪುತ್ಥಳಿಯನ್ನು ಸರ್ಕಾರ ನಿರ್ಲಕ್ಷ್ಯ ತೋರದೇ ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡಬೇಕು. ಅಲಂಕಾರಿಕ ಸಸ್ಯಗಳು, ಹೂವಿನ ಕುಂಡಗಳ ಮೂಲಕ ಸುಂದರ ವಾತಾವರಣ ನಿರ್ಮಾಣ ಮಾಡಬೇಕು.

ಸಾರ್ವಜನಿಕರು ಕುಳಿತುಕೊಳ್ಳಲು ಆಸನ ವ್ಯವಸ್ಥೆ, ಸಮರ್ಪಕ ಬೆಳಕು, ಭದ್ರತೆ ಹಾಗೂ ದಿನನಿತ್ಯ ನಿರ್ವಹಣೆಗೆ ಸಿಬ್ಬಂದಿಯನ್ನು ನಿಯೋಜಿಸಬೇಕು. ಬಸವಣ್ಣನವರ ಸ್ಮಾರಕ ಸ್ಥಳವು ನಗರದ ಗೌರವದ ಪ್ರತೀಕವಾಗಿದೆ. ಕ್ರಾಂತಿಯೋಗಿಯ ಚಿಂತನೆಗಳ ಬಗ್ಗೆ ಎಲ್ಲೆಡೆ ಮಾತನಾಡುವ ಮುಖ್ಯಮಂತ್ರಿ ಅವರು, ಅತೀ ತುರ್ತಾಗಿ ಅಗತ್ಯ ಸೌಕರ್ಯಗಳನ್ನು ಒದಗಿಸಬೇಕು. ಬಸವಣ್ಣನವರ ಚಿಂತನೆಗಳು ಮತ್ತು ವಚನಗಳು ಜನರಿಗೆ ತಲುಪುವಂತೆ ಮಾಡುವ ಒಂದು ಸಾಂಸ್ಕೃತಿಕ ಹಾಗೂ ಸಾಮಾಜಿಕ ಜವಾಬ್ದಾರಿ ಸರ್ಕಾರದ್ದಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಮನವಿ ಪತ್ರಕ್ಕೆ ಹನುಮೇಶ್ ಗುಂಡೂರ, ವಕೀಲರ ನಿಂಗರಾಜ ಗುಳೆ, ಮಲ್ಲಿಕಾರ್ಜುನ್ ಬಾಂಬೇಕರ್, ಜಿ ಎಂ ಬಬಲದ, ಅಭಿಷೇಕ, ಭೀಮಾಶಂಕರ ಬಿಲ್ಲವ ಮತ್ತು ಮಂಜುನಾಥ ಬಿ (ಗುತ್ತಿಗೆದಾರರು) ಸಹಿ ಮಾಡಿದ್ದಾರೆ.

## ಪ್ಲಂಬೆಕ್ಸ್ ಇಂಡಿಯಾ 2026ಕ್ಕೆ ಚಾಲನೆ



ಬೆಂಗಳೂರು

ಪ್ಲಂಬೆಕ್ಸ್ ಇಂಡಿಯಾ 2026 ಇಂದು ಭವ್ಯ ಉದ್ಘಾಟನೆಯೊಂದಿಗೆ ಪ್ರಾರಂಭಗೊಂಡಿದ್ದು, ನೀರಿನ ಭದ್ರತೆ ಹಾಗೂ ಸುಸ್ಥಿರ ನಗರ ವ್ಯವಸ್ಥೆಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ.

ಕಾರ್ಯಕ್ರಮದಲ್ಲಿ ಸತ್ವ ಗ್ರೂಪ್ ನಿರ್ದೇಶಕರಾದ ಮಹೇಶ್ ಕುಮಾರ್ ಖೇತಾನ್, ಇಂಡಿಯನ್ ಪ್ಲಂಬಿಂಗ್ ಅಸೋಸಿಯೇಷನ್ ರಾಷ್ಟ್ರೀಯ ಅಧ್ಯಕ್ಷರಾದ ಗುರ್ಮಿತ್ ಸಿಂಗ್ ಅರೋರ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಮೊದಲ ದಿನದಲ್ಲಿ ನಗರಗಳ ನೀರಿನ ಸಮಸ್ಯೆಗಳು ಮತ್ತು ನೀತಿ ರೂಪರೇಖೆಗಳ ಕುರಿತು ವಿಶ್ಲೇಷಣಾತ್ಮಕ ಚರ್ಚೆಗಳು ನಡೆಯಿತು. ಈ ಸಂದರ್ಭದಲ್ಲಿ ತಜ್ಞರಾದ ವಿಕಾಸ್ ಬ್ರಹ್ಮಾವರ್, ಡಾ. ಶಿಹಾಬುದ್ದೀನ್ ಎ. ಮಳಿಯೆಕ್ಕಲ್, ಡಾ. ಪ್ರಮೋದ್ ಕುಮಾರ್ ಮತ್ತು ಆರ್ಕಿಟೆಕ್ಟ್ ವಿ. ವಿಶ್ವನಾಥ್ ಒಳನೋಟಪೂರ್ಣ ವಿಚಾರ ವಿನಿಮಯ ನಡೆಸಿದರು.

## ಪೇಟಿಎಂ ದೇಶೀಯ ಷೇರುಗಳನ್ನು ಹೆಚ್ಚಾಗಿ ಹೊಂದಿರುವ ಕಂಪನಿ

ಬೆಂಗಳೂರು

ಎಂಎಸ್‌ಎಂಇಗಳು ಮತ್ತು ಉದ್ಯಮಗಳಿಗೆ ಸೇವೆ ಸಲ್ಲಿಸುವ ಭಾರತದ ಪೂರ್ಣ ಪ್ರಮಾಣದ ವ್ಯಾಪಾರಿ ಪಾವತಿಯಲ್ಲಿ ಅಗ್ರಗಣ್ಯ ಕಂಪನಿಯಾಗಿರುವ, ಪ್ರಮುಖ ಹಣಕಾಸು ಸೇವೆಗಳ ವಿತರಣಾ ಕಂಪನಿ ಮತ್ತು ಮೊಬೈಲ್ ಪಾವತಿಗಳು, ಕ್ಯುಆರ್ ಕೋಡ್ಗಳು ಮತ್ತು ಸೌಂಡ್ಬಾಕ್ಸ್ ಪ್ರವರ್ತಕ, ಪೇಟಿಎಂ (ಒನ್ 97 ಕಮ್ಯುನಿಕೇಷನ್ಸ್ ಲಿಮಿಟೆಡ್), ಭಾರತೀಯ ಸ್ವಾಮ್ಯದ ಮತ್ತು ನಿಯಂತ್ರಿತ ಕಂಪನಿ (ಐಒಸಿಸಿ) ಆಗಿ ಮಾರ್ಪಟ್ಟಿರುವುದಾಗಿ ಘೋಷಿಸಿದೆ.

ಮಾರ್ಚ್ 31, 2026 ಕ್ಕೆ ಕೊನೆಗೊಂಡ ತ್ರೈಮಾಸಿಕದ ಷೇರುದಾರರ ಮಾದರಿಯ ಪ್ರಕಾರ, ದೇಶೀಯ ಹೂಡಿಕೆದಾರರು ಈಗ ಕಂಪನಿಯ ಈಕ್ವಿಟಿ ಷೇರು ಬಂಡವಾಳದ 50.3% ಅನ್ನು ಹೊಂದಿದ್ದು, ಬಹುಪಾಲು ಭಾರತೀಯ ಮಾಲೀಕತ್ವ ಮತ್ತು ನಿಯಂತ್ರಣವನ್ನು ಸ್ಥಾಪಿಸಿದ್ದಾರೆ.

ದೇಶೀಯ ಸಾಂಸ್ಥಿಕ ಹೂಡಿಕೆದಾರರು ತಮ್ಮ ಭಾಗವಹಿಸುವಿಕೆಯನ್ನು ಹೆಚ್ಚಿಸುತ್ತಲೇ ಇದ್ದಾರೆ, ಅವರ ಹಿಡುವಳಿಯು ಕ್ಯು4 ಎಫ್ವೈ 26 ರಲ್ಲಿ 23.1% ಕ್ಕೆ ಏರಿದೆ, ಹಿಂದಿನ ತ್ರೈಮಾಸಿಕದಲ್ಲಿ 20.3% ಮತ್ತು ಒಂದು ವರ್ಷದ ಹಿಂದೆ 14.0% ರಷ್ಟಿತ್ತು. ಭಾರತೀಯ ಮ್ಯೂಚುಯಲ್ ಫಂಡ್ಗಳು ಕಂಪನಿಯಲ್ಲಿ 16.6% ಪಾಲನ್ನು ಹೊಂದಿವೆ, 41 ಮ್ಯೂಚುಯಲ್ ಫಂಡ್ಗಳು ಷೇರುದಾರರಾಗಿವೆ.

ದೇಶೀಯ ವಿಮಾ ಕಂಪನಿಗಳು ಸಹ ತಮ್ಮ ಹಿಡುವಳಿಯನ್ನು 5.1% ಕ್ಕೆ ಹೆಚ್ಚಿಸಿವೆ. ದೇಶೀಯ ಸಾಂಸ್ಥಿಕ ಹೂಡಿಕೆದಾರರು ತಮ್ಮ ಭಾಗವಹಿಸುವಿಕೆಯನ್ನು ಹೆಚ್ಚಿಸುತ್ತಲೇ ಇದ್ದಾರೆ, ಅವರ ಹಿಡುವಳಿಯು ಕ್ಯು4 ಎಫ್ವೈ 26 ರಲ್ಲಿ 23.1% ಕ್ಕೆ ಏರಿದೆ, ಹಿಂದಿನ ತ್ರೈಮಾಸಿಕದಲ್ಲಿ 20.3% ಮತ್ತು ಒಂದು ವರ್ಷದ ಹಿಂದೆ 14.0% ರಷ್ಟಿತ್ತು. ಭಾರತೀಯ ಮ್ಯೂಚುಯಲ್ ಫಂಡ್ಗಳು ಕಂಪನಿಯಲ್ಲಿ 16.6% ಪಾಲನ್ನು ಹೊಂದಿವೆ, ದೇಶೀಯ ವಿಮಾ ಕಂಪನಿಗಳು ಸಹ ತಮ್ಮ ಹಿಡುವಳಿಯನ್ನು 5.1% ಕ್ಕೆ ಹೆಚ್ಚಿಸಿವೆ. ದೇಶೀಯ ಸಾಂಸ್ಥಿಕ ಹೂಡಿಕೆದಾರರು ತಮ್ಮ ಭಾಗವಹಿಸುವಿಕೆಯನ್ನು ಹೆಚ್ಚಿಸುತ್ತಲೇ ಇದ್ದಾರೆ, ಅವರ ಹಿಡುವಳಿಯು ಕ್ಯು4 ಎಫ್ವೈ 26 ರಲ್ಲಿ ಫಂಡ್ಗಳು ಷೇರುದಾರರಾಗಿವೆ. ದೇಶೀಯ ವಿಮಾ ಕಂಪನಿಗಳು ಸಹ ತಮ್ಮ ಹಿಡುವಳಿಯನ್ನು 5.1% ಕ್ಕೆ ಹೆಚ್ಚಿಸಿವೆ.

## ಟರ್ಮ್ ಪ್ಲಾನ್ ಬಿಡುಗಡೆ ಮಾಡಿದ ಟಾಟಾ ಎಐಎ ಲೈಫ್ ಇನ್ಶೂರೆನ್ಸ್

ಬೆಂಗಳೂರು

ಭಾರತ ಸೇರಿದಂತೆ ಜಗತ್ತಿನಾದ್ಯಂತ ವಿದ್ಯಾರ್ಥಿಗಳು ತಮ್ಮ ಉನ್ನತ ಶಿಕ್ಷಣದ ಕನಸುಗಳನ್ನು ನನಸು ಮಾಡಲು ಮುಂದಾಗುತ್ತಿರುವ ಹಿನ್ನೆಲೆಯಲ್ಲಿ, ಶಿಕ್ಷಣ ಸಾಲಗಳ ಮೇಲಿನ ಅವಲಂಬನೆ ಹೆಚ್ಚಾಗಿದೆ. ಇಂತಹ ಸಾಲಗಳು ಉತ್ತಮ ವೃತ್ತಿಜೀವನಕ್ಕೆ ದಾರಿ ತೆರೆದರೂ, ಅವುಗಳೊಂದಿಗೆ ದೊಡ್ಡ ಮಟ್ಟದ ಹಣಕಾಸಿನ ಜವಾಬ್ದಾರಿಯೂ ಸೇರಿಕೊಂಡಿದೆ.

ಸಾಮಾನ್ಯವಾಗಿ ವಿದ್ಯಾರ್ಥಿಗಳು ಪದವಿ ಪೂರ್ಣಗೊಳಿಸಿ ಉದ್ಯೋಗ ಪಡೆದ ಬಳಿಕ ಶಿಕ್ಷಣ ಸಾಲದ ಮರುಪಾವತಿ ಪ್ರಾರಂಭಿಸುತ್ತಾರೆ. ಆದರೆ, ಅನಿರೀಕ್ಷಿತ ಸಂದರ್ಭಗಳಲ್ಲಿ ವಿದ್ಯಾರ್ಥಿಯ ಅಕಾಲಿಕ ಮರಣ ಸಂಭವಿಸಿದರೆ, ಸಾಲದ ಹೊರೆ ಕುಟುಂಬದ ಮೇಲೆ ಬೀಳುವ ಸಾಧ್ಯತೆ ಇದೆ. ಇದು ಕುಟುಂಬವನ್ನು ಇನ್ನಷ್ಟು ಆರ್ಥಿಕ ಸಂಕಷ್ಟಕ್ಕೆ ತಳ್ಳಬಹುದು.

ಈ ಸಮಸ್ಯೆಗೆ ಪರಿಹಾರವಾಗಿ, ಟಾಟಾ ಎಐಎ ಲೈಫ್ ಇನ್ಶೂರೆನ್ಸ್ ತನ್ನ ಪ್ರಮುಖ ಯೋಜನೆಯಾದ 'ಟಾಟಾ ಎಐಎ ಸಂಪೂರ್ಣ ರಕ್ಷಾ ಪ್ರಾಮಿಸ್' ಅಡಿಯಲ್ಲಿ 'ವಿದ್ಯಾರ್ಥಿ ಕೇಂದ್ರಿತ ಟರ್ಮ್ ಇನ್ಶೂರೆನ್ಸ್' ಎಂಬ ಹೊಸ ವೈಶಿಷ್ಟ್ಯವನ್ನು ಪರಿಚಯಿಸಿದೆ.

ಈ ಯೋಜನೆಯ ಪ್ರಕಾರ, ವಿದ್ಯಾರ್ಥಿಯ ಅಕಾಲಿಕ ಮರಣ ಸಂಭವಿಸಿದಲ್ಲಿ, ಶಿಕ್ಷಣ ಸಾಲದ ಮರುಪಾವತಿಯ ಹೊರೆ ಕುಟುಂಬದ ಮೇಲೆ ಬೀಳದಂತೆ ಆರ್ಥಿಕ ರಕ್ಷಣೆ ಒದಗಿಸಲಾಗುತ್ತದೆ. ಇದರಿಂದ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಮೇಲೆ ನಿರಾತಂಕವಾಗಿ ಗಮನ ಹರಿಸಲು ಸಾಧ್ಯವಾಗುತ್ತದೆ. ಜೊತೆಗೆ, ಯಾವುದೇ ದುರಂತ ಸಂಭವಿಸಿದರೂ ಕುಟುಂಬದವರು ಸಾಲದ ಒತ್ತಡದಿಂದ ಮುಕ್ತರಾಗುತ್ತಾರೆ.

## ತೂಕ ನಿಯಂತ್ರಣ ಔಷಧದ ಬೆಲೆ ಇಳಿಕೆ

ಬೆಂಗಳೂರು

ಎಮ್ ಕ್ಯೂರ್ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್ ಸಂಸ್ಥೆಯು ದೇಶಾದ್ಯಂತ ತನ್ನ ಜನಪ್ರಿಯ ತೂಕ ನಿರ್ವಹಣಾ ಔಷಧವಾದ ಪೊವಿಜ್ಞಾ (ಸೆಮಾಗ್ಲುಟೈಡ್ ಇಂಜೆಕ್ಷನ್) ಬೆಲೆಯನ್ನು ಗಣನೀಯವಾಗಿ ಇಳಿಕೆ ಮಾಡಿದ್ದು, ಆರಂಭಿಕ ಡೋಸ್ ದರದಲ್ಲಿ ಶೇ. 55ರಷ್ಟು ಕಡಿತಗೊಳಿಸಿರುವುದಾಗಿ ಘೋಷಿಸಿದೆ.

ಈ ಬೆಲೆ ಪರಿಷ್ಕರಣೆಯ ನಂತರ, ಪೊವಿಜ್ಞಾ (0.25 ಎಂಜಿ) ಆರಂಭಿಕ ಡೋಸ್ ಈಗ ವಾರಕ್ಕೆ ಕೇವಲ ರೂ. 999ಕ್ಕೆ ಲಭ್ಯವಾಗಲಿದೆ. ಅಂದರೆ, ನಾಲ್ಕು ವಾರಗಳ ಪೂರ್ಣ ಅವಧಿಗೆ ತೆರಿಗೆ ಸೇರಿ ಒಟ್ಟು ರೂ. 3,999ಕ್ಕೆ ದೊರೆಯಲಿದೆ. ಹಿಂದಿನ ದರಗಳಿಗೆ ಹೋಲಿಸಿದರೆ ವಿವಿಧ ಪ್ರಮಾಣಗಳ ಔಷಧಿಗಳ ಮೇಲೆ ಸರಾಸರಿ ಶೇ. 47ರಷ್ಟು ಕಡಿತ ಮಾಡಲಾಗಿದೆ.

ಈ ಔಷಧವು ಬಳಸಲು ಸುಲಭವಾಗುವಂತೆ 'ಪೆನ್ ಸಾಧನ' ರೂಪದಲ್ಲಿ ಲಭ್ಯವಿದ್ದು, 0.25 ಎಂಜಿಯಿಂದ 2.4 ಎಂಜಿವರೆಗೆ ಐದು ವಿಭಿನ್ನ ಪ್ರಮಾಣಗಳಲ್ಲಿ ದೊರೆಯುತ್ತದೆ. ಇದರಿಂದ ರೋಗಿಗಳು ತಮ್ಮದೇಯಾಗಿ ನಿಖರ ಪ್ರಮಾಣದ ಔಷಧವನ್ನು ತೆಗೆದುಕೊಳ್ಳಲು ಅನುಕೂಲವಾಗುತ್ತದೆ.

ಬೊಜ್ಜು ನಿಯಂತ್ರಣಕ್ಕಾಗಿ ಬಳಸಲಾಗುವ ಸೆಮಾಗ್ಲುಟೈಡ್ ಇಂಜೆಕ್ಷನ್ ಗಳಲ್ಲಿ ಎರಡನೇ ಪ್ರಮುಖ ಬ್ರ್ಯಾಂಡ್ ಆಗಿರುವ ಪೊವಿಜ್ಞಾ ಅನ್ನು ಭಾರತದಲ್ಲಿ ಪ್ರತ್ಯೇಕವಾಗಿ ವಿತರಣೆ ಮತ್ತು ವಾಣಿಜ್ಯೀಕರಣಗೊಳಿಸಿದ ಮೊದಲ ಭಾರತೀಯ ಸಂಸ್ಥೆ ಎಮ್ ಕ್ಯೂರ್ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್ ಆಗಿದೆ.

### ಸಮಯ ಬಂದಿದೆ: ಮಹಿಳಾ ಮೀಸಲಾತಿಯು ಭಾರತೀಯ

# ಪ್ರಜಾಪ್ರಭುತ್ವವನ್ನು ಹೇಗೆ ಬದಲಿಸಲಿದೆ?

ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಿಂದ ತನ್ನ ಅರ್ಧದಷ್ಟು ನಾಗರಿಕರನ್ನು ನಿರಂತರವಾಗಿ ಹೊರಗಿಡುವ ಪ್ರಜಾಪ್ರಭುತ್ವವನ್ನು ನೈಜ ಪ್ರಜಾಪ್ರಭುತ್ವ ಎಂದು ಪರಿಗಣಿಸಲಾಗುವುದಿಲ್ಲ; ಅದು ಇನ್ನೂ ಆಗಬೇಕಿರುವ ಕೆಲಸವಾಗಿಯೇ ಉಳಿದಿದೆ. 'ನಾರಿ ಶಕ್ತಿ ವಂದನ್ ಅಧಿನಿಯಮ'ವು ಈ ಪ್ರಯತ್ನವನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿದೆ. ಆದರೆ ಅದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸದ ಹೊರತು ಅದು ಕಾಗದದ ಮೇಲಿನ ಕಾನೂನಾಗಿ ಉಳಿಯಲಿದೆ. ಯಾವುದೇ ಮೌಲ್ಯವನ್ನು ಪಡೆಯುವುದಿಲ್ಲ. ಜನಗಣತಿ ನಡೆಯಬೇಕು, ಅದರ ಬಳಿಕ ಕ್ಷೇತ್ರ ಪುನರ್ವಿಂಗಡಣೆ ನಡೆಯಬೇಕು, ಮುಂದಿನ ಹಂತವಾಗಿ ಸಂಸತ್ತು ಮತ್ತು ಪ್ರತಿ ರಾಜ್ಯ ವಿಧಾನಸಭೆಯ ಮೂರನೇ ಒಂದು ಭಾಗದಷ್ಟು ಸ್ಥಾನಗಳನ್ನು ಮಹಿಳೆಯರು ಅಲಂಕರಿಸಲಿದ್ದಾರೆ.

ಕಾನೂನುಗಳನ್ನು ರೂಪಿಸುವ ಪ್ರಕ್ರಿಯೆಯಲ್ಲಿ ಮಹಿಳೆಯರನ್ನು ಸೇರಿಸಿಕೊಂಡಾಗ, ಶಾಸನದ ಕೇಂದ್ರ ಬಿಂದು ಬದಲಾಗುತ್ತದೆ. ದಶಕಗಳ ಹಿಂದೆ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯನ್ನು ಜಾರಿಗೆ ತಂದಿದ್ದ ಪಂಚಾಯತ್ ರಾಜ್ ಸಂಸ್ಥೆಗಳು ಆದ್ಯತೆಗಳಲ್ಲಿ ಅಳೆಯಬಹುದಾದ ಬದಲಾವಣೆಯನ್ನು ತೋರಿಸುತ್ತವೆ. ನೀರು, ಆರೋಗ್ಯ, ಶಿಕ್ಷಣ ಮತ್ತು ಮಕ್ಕಳ ಪೋಷಣೆಗೆ ಹೆಚ್ಚಿನ ಬಜೆಟ್ ಅನ್ನು ಮೀಸಲಿಡಲಾಗಿದೆ. ಭ್ರಷ್ಟಾಚಾರದ ಬಗ್ಗೆ ಕಡಿಮೆ ಸಹಿಷ್ಣುತೆ ಮತ್ತು ಸಮುದಾಯಗಳಿಗೆ ಹೆಚ್ಚಿನ ಉತ್ತರದಾಯಿತ್ವ ಕಾಣಬಹುದಾಗಿದೆ. ಇದು ಕೇವಲ ಕಾಕತಾಳೀಯವಲ್ಲ. ಬದಲಿಗೆ ಇದು ಪ್ರಾತಿನಿಧ್ಯದ ನೈಜ ಸಾಕಾರತೆ.

ಮಹಿಳೆಯರು "ತಮ್ಮದೇ ಆದ ಅರ್ಹತೆಯ ಮೇಲೆ" ಮೇಲೇರಬೇಕು ಎಂಬ ವಾದವನ್ನು ನಾನು ಕೇಳಿದ್ದೇನೆ. ಆ ಭಾವನೆಯನ್ನು ನಾನು ಗೌರವಿಸುತ್ತೇನೆ, ಆದರೆ ನಾನು ಪ್ರಮೇಯವನ್ನು ತಿರಸ್ಕರಿಸುತ್ತೇನೆ. ನಿರ್ವಾತದಲ್ಲಿ ಅರ್ಹತೆ ಅಸ್ತಿತ್ವದಲ್ಲಿ ಇರುಲು ಸಾಧ್ಯವಿಲ್ಲ. ಅವಕಾಶಗಳು ಇರುವಲ್ಲಿ ಮಾತ್ರ ಅದು ಪ್ರವರ್ಧಮಾನಕ್ಕೆ ಬರುತ್ತದೆ.



ಮಹಿಳೆಯರ ಸಂಪೂರ್ಣ ಮತ್ತು ಸಮಾನ ಭಾಗವಹಿಸುವಿಕೆಯಿಲ್ಲದೆ ಭಾರತವು ತನ್ನ ಸಂಪೂರ್ಣ ಸಾಮರ್ಥ್ಯವನ್ನು ಅರಿತುಕೊಳ್ಳಲು ಸಾಧ್ಯವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಬಹಳ ಹಿಂದಿನಿಂದಲೂ ಹೇಳುತ್ತಿದ್ದಾರೆ. ಇದು ಕೇವಲ ಮಾತಿನಲ್ಲಿ ಉಳಿದಿಲ್ಲ. ಬದಲಿಗೆ 'ಬೇಟಿ ಬಚಾವೋ ಬೇಟಿ ಪಡಾವೋ'ದಿಂದ ಹಿಡಿದು 'ಜನ್ ಧನ್', 'ಉಜ್ವಲ' ಮತ್ತು 'ಪಿಎಂ ಆವಾಸ್ ಯೋಜನೆ'ಯಲ್ಲಿ ಮಹಿಳೆಯರನ್ನು ದಾಖಲೆಯ ಮಟ್ಟದಲ್ಲಿ ಸೇರ್ಪಡೆಗೊಳಿಸುವ ಮೂಲಕ ಪ್ರತಿ ನೀತಿಯನ್ನು ದೃಢ ನಿಶ್ಚಯದಿಂದ ಮುನ್ನಡೆಸಿದ್ದಾರೆ. ಅವರು ನಾರಿ ಶಕ್ತಿಯನ್ನು ಬರಿ ಘೋಷಣೆಯಾಗಿ ಮಾಡದೆ 'ವಿಕಸಿತ ಭಾರತ'ದ ಅಡಿಪಾಯ ಎಂದು ಹೇಳಿದ್ದಾರೆ. 'ನಾರಿ ಶಕ್ತಿ ವಂದನ್ ಅಧಿನಿಯಮ'ವು ಆ ದೃಷ್ಟಿಕೋನದ ಸಂಪೂರ್ಣ ಅಭಿವ್ಯಕ್ತಿಯಾಗಿದೆ, ಮಹಿಳಾ ಸಬಲೀಕರಣವನ್ನು ಕಲ್ಯಾಣದಿಂದ ಆಡಳಿತದ ರಚನೆಯೊಳಗೆ ತರುತ್ತದೆ.

ತಲೆಮಾರುಗಳಿಂದಲೂ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ರಚನಾತ್ಮಕ ಅಡೆತಡೆಗಳು ಪ್ರತಿಭಾವಂತ ಮಹಿಳೆಯರನ್ನು ರಾಜಕೀಯದಿಂದ ದೂರವಿರಿಸಿವೆ. ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ಸದಾ ಪ್ರಭಾವಶಾಲಿಗಳಿಗೆ, ಉತ್ತಮ ಸಂಪರ್ಕಗಳನ್ನು ಹೊಂದಿರುವವರಿಗೆ, ಆನುವಂಶಿಕವಾಗಿ ಪಡೆದ ರಾಜಕೀಯ ಬಂಡವಾಳ ಮತ್ತು ಕೌಟುಂಬಿಕ ಜವಾಬ್ದಾರಿಗಳಿಂದ ಮುಕ್ತಿ ಪಡೆದವರಿಗೆ ಮಾತ್ರ ಆದ್ಯತೆ ದೊರೆಯುತ್ತದೆ. ಆದರೆ, ಮಹಿಳೆಯರು ಈ ಯಾವ ಅನುಕೂಲಗಳನ್ನೂ ಹೊಂದಿಲ್ಲ.

ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಂಚಾಯಿತಿಗಳನ್ನು ಪ್ರವೇಶಿಸಿದಾಗ ಆರಂಭದಲ್ಲಿ ಅವರನ್ನು ವಜಾ ಮಾಡಲಾಗುತ್ತಿತ್ತು. ಆದರೆ, ಅಂತಿಮವಾಗಿ ಮಹಿಳೆಯರು ತಮ್ಮ ಪುರುಷ ಸಹವರ್ತಿಗಳಿಗಿಂತ ಹೆಚ್ಚು ಪರಿಣಾಮಕಾರಿ, ಹೆಚ್ಚು ಸುಲಭ ಲಭ್ಯತೆ ಮತ್ತು ಹೆಚ್ಚು ಪ್ರಾಮಾಣಿಕ ಎಂದು ಸ್ವಂತ ಸಮುದಾಯಗಳಿಂದಲೇ ಗುರುತಿಸಲ್ಪಟ್ಟರು. ಹಲವು ಅಧ್ಯಯನಗಳಿಂದ ಇದು ಸಾಬೀತಾಯಿತು. ನ್ಯಾಯಯುತ ಅವಕಾಶ ನೀಡಿದಾಗ, ಮಹಿಳೆಯರು ಕೇವಲ ಭಾಗವಹಿಸುವುದಿಲ್ಲ, ಅವರು ಮುನ್ನಡೆಸುತ್ತಾರೆ.

ನಿರ್ಧಾರ ಕೈಗೊಳ್ಳುವ ಸಮಯದಲ್ಲಿ ಕೋಣೆಯಲ್ಲಿ ಯಾರು ಇದ್ದಾರೆ ಎಂಬುದು ಅಲ್ಲಿ ಏನು ಚರ್ಚೆ ನಡೆಸಲಾಗುತ್ತದೆ ಎಂಬುದನ್ನು ನಿರ್ಧರಿಸುತ್ತದೆ. ಸರ್ಕಾರದಲ್ಲಿ ನನ್ನ ವ್ಯಾಪಕ ಅನುಭವದಿಂದ ಈ ವಿಷಯವನ್ನು ನನಗೆ ಕಲಿಸಿದೆ. ಮಹಿಳಾ ಶಾಸಕರು ತಾಯಿಯ ಆರೋಗ್ಯ ನಿಧಿಯನ್ನು ಕಡಿತಗೊಳಿಸಿದಾಗ ಅದನ್ನು ಒತ್ತಾಯಿಸುತ್ತಾರೆ. ಸರ್ಕಾರದ ನೀತಿಗಳ ಅನುಷ್ಠಾನದಲ್ಲಿ ಮಹಿಳೆಯರ ಪಾಲಿಗೆ ಕಠಿಣವೆನಿಸುವ ಪರಿಣಾಮದ ಬಗ್ಗೆ ಅವರು ದನಿ ಎತ್ತುತ್ತಾರೆ. ಪುರುಷ ಸಹೋದ್ಯೋಗಿಗಳು, ತಲೆಕೆಡಿಸಿಕೊಳ್ಳದ ಕ್ಷೇತ್ರದ ಕಳವಳಗಳತ್ತ ಮಹಿಳೆಯರು ಗಮನ ಹರಿಸುತ್ತಾರೆ.

ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಶೇ.33ರಷ್ಟು ಮೀಸಲಾತಿ ಎಂದರೆ ಇದೇ ಮೊದಲ ಬಾರಿಗೆ ಈ ಧ್ವನಿಗಳಿಗೆ ಶಕ್ತಿ ಬರಲಿದೆ. ಅವು ರಚನಾತ್ಮಕವಾಗಿರುತ್ತವೆ. ಶಾಶ್ವತವಾಗುತ್ತವೆ, ಆ ದನಿಗಳನ್ನು ನಿರ್ಲಕ್ಷಿಸುವುದು ಅಸಾಧ್ಯ.

ಮಹಿಳೆಯರ ಸಂಪೂರ್ಣ ಮತ್ತು ಸಮಾನ ಭಾಗವಹಿಸುವಿಕೆಯಿಲ್ಲದೆ ಭಾರತವು ತನ್ನ ಸಂಪೂರ್ಣ ಸಾಮರ್ಥ್ಯವನ್ನು ಅರಿತುಕೊಳ್ಳಲು ಸಾಧ್ಯವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಬಹಳ ಹಿಂದಿನಿಂದಲೂ ಹೇಳುತ್ತಿದ್ದಾರೆ. ಇದು ಕೇವಲ ಮಾತಿನಲ್ಲಿ ಉಳಿದಿಲ್ಲ. ಬದಲಿಗೆ 'ಬೇಟಿ ಬಚಾವೋ ಬೇಟಿ ಪಡಾವೋ'ದಿಂದ ಹಿಡಿದು 'ಜನ್ ಧನ್', 'ಉಜ್ವಲ' ಮತ್ತು 'ಪಿಎಂ ಆವಾಸ್ ಯೋಜನೆ'ಯಲ್ಲಿ ಮಹಿಳೆಯರನ್ನು ದಾಖಲೆಯ ಮಟ್ಟದಲ್ಲಿ ಸೇರ್ಪಡೆಗೊಳಿಸುವ ಮೂಲಕ ಪ್ರತಿ ನೀತಿಯನ್ನು ದೃಢ ನಿಶ್ಚಯದಿಂದ ಮುನ್ನಡೆಸಿದ್ದಾರೆ. ಅವರು ನಾರಿ ಶಕ್ತಿಯನ್ನು ಬರಿ ಘೋಷಣೆಯಾಗಿ ಮಾಡದೆ 'ವಿಕಸಿತ ಭಾರತ'ದ ಅಡಿಪಾಯ ಎಂದು ಹೇಳಿದ್ದಾರೆ. 'ನಾರಿ ಶಕ್ತಿ ವಂದನ್ ಅಧಿನಿಯಮ'ವು ಆ ದೃಷ್ಟಿಕೋನದ ಸಂಪೂರ್ಣ ಅಭಿವ್ಯಕ್ತಿಯಾಗಿದೆ, ಮಹಿಳಾ ಸಬಲೀಕರಣವನ್ನು ಕಲ್ಯಾಣದಿಂದ ಆಡಳಿತದ ರಚನೆಯೊಳಗೆ ತರುತ್ತದೆ.

ಇದು ನಮ್ಮೆಲ್ಲರಿಗೂ ಸೇರಿದ ಸಮಯ. ಯಾವುದೇ ಒಂದು ಪಕ್ಷಕ್ಕೆ ಸೀಮಿತವಾದುದಲ್ಲ, ಬದಲಿಗೆ ಒಂದು ಸಂಸ್ಥೆಯಾಗಿ ಇಡೀ ಸಂಸತ್ತಿಗೆ ಸಂಬಂಧಿಸಿದ್ದು. ಸರ್ಕಾರದ ಪ್ರತಿಯೊಂದು ಹಂತದಲ್ಲೂ ಈ ರಾಷ್ಟ್ರಕ್ಕೆ ಸೇವೆ ಸಲ್ಲಿಸಿದ ಮಹಿಳೆಯಾಗಿ ನಾನು ಎಲ್ಲರಿಗೂ ಮನವಿ ಮಾಡುತ್ತೇನೆ ಮತ್ತು ಭಾರತದ ಪ್ರಜಾಪ್ರಭುತ್ವವನ್ನು ಬಲವಾಗಿ ಮತ್ತು ಹೆಚ್ಚು ಪರಿಪೂರ್ಣವಾಗಿ ನೋಡುವ ಬಯಕೆಯನ್ನು ನಾವೆಲ್ಲರೂ ಹಂಚಿಕೊಳ್ಳುತ್ತೇವೆ ಎಂದು ನಾನು ನಂಬುತ್ತೇನೆ. ಜನಗಣತಿ ನಡೆಸುವುದು, ಕ್ಷೇತ್ರ ವಿಂಗಡಣೆ ಪೂರ್ಣಗೊಳಿಸುವುದು ಮತ್ತು ಒಂದು ದಿನವೂ ಅನಗತ್ಯವಾಗಿ ವ್ಯರ್ಥವಾಗದಂತೆ ನೋಡಿಕೊಳ್ಳುವ ತುರ್ತು ಅಗತ್ಯ ಪೂರೈಸುವ ಮೂಲಕ ಭಾರತದ ಮಹಿಳೆಯರಿಗೆ ನಾವು ಈಗ ಋಣಿಯಾಗಿದ್ದೇವೆ. ಅನುಷ್ಠಾನ, ಮೀಸಲು ಸ್ಥಾನಗಳ ಆವರ್ತನ, ಬದಲಿ ಅಭ್ಯರ್ಥಿಗಳು, ಷರತ್ತುಗಳ ಬಗೆಗಿನ ಕಳವಳಗಳನ್ನು ನಾನು ಅರ್ಥಮಾಡಿಕೊಂಡಿದ್ದೇನೆ. ಇವು ಕಾನೂನುಬದ್ಧ ಚರ್ಚೆಗಳಾಗಿವೆ, ಆದರೆ ಈ ವಿಷಯದ ಬಗ್ಗೆ ತುರ್ತು ಗಮನ ಹರಿಸುವುದು ಅಗತ್ಯ ಎಂದು ನಾವು ಖಚಿತಪಡಿಸಿಕೊಳ್ಳಬೇಕು. ತತ್ವವು ಸದೃಢವಾಗಿದೆ. ಅವಶ್ಯಕತೆ ತುರ್ತಾಗಿದೆ. ಪರಿಪೂರ್ಣರನ್ನು ಪರಿವರ್ತನೆಯ ಶತ್ರುವಾಗಲು ನಾವು ಅನುವು ನೀಡಬಾರದು.

ಸೆಪ್ಟೆಂಬರ್ 2023ರಲ್ಲಿ ಇತಿಹಾಸ ನಿರ್ಮಿಸಲಾಯಿತು.

ಆದರೆ ಅದರ ನಂತರ ನಡೆಯಬೇಕಾದ ಪ್ರಕ್ರಿಯೆ ನಡೆದರಷ್ಟೇ ಇತಿಹಾಸ ಅರ್ಥಪೂರ್ಣವಾಗಲಿದೆ. ನ್ಯಾಯಸಮ್ಮತತೆಯನ್ನು ಆಯ್ಕೆ ಮಾಡುವ ದೇಶವು ತಾನು ಅಂಗೀಕರಿಸುವ ಕಾನೂನುಗಳ ಪ್ರಕಾರ ಬದುಕುವ ಮೂಲಕ ಸದ್ದಿಲ್ಲದೆ ಶಾಶ್ವತ ಕೆಲಸವನ್ನು ಮಾಡುತ್ತದೆ. ತನ್ನ ದೇಶಕ್ಕೆ ಸೇವೆ ಸಲ್ಲಿಸಲು ಬಯಸುವ ಯಾವುದೇ ಸಮುದಾಯದ ಮಹಿಳೆಗೆ, ಎಂದಿಗೂ ವೇದಿಕೆ ಏರದ ನಾಯಕಿಗೆ ಮತ್ತು ಎಂದಿಗೂ ಮೈಕ್ರೊಫೋನ್ ದೊರೆಯದ ಧ್ವನಿಗಾಗಿ, ನಾವು ಕಾರ್ಯಪ್ರವೃತ್ತರಾಗುವ ಸಮಯ ಈಗ ಬಂದಿದೆ. ಈ ಕಾನೂನನ್ನು ಜಾರಿಗೆ ತರಬೇಕಿದೆ. ಕೋಣೆಯನ್ನು ಮತ್ತಷ್ಟು ದೊಡ್ಡದಾಗಿ ಮಾಡಬೇಕಿದೆ... ಭಾರತ ನೋಡುತ್ತಿದೆ.

ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

17/04/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER



## ಬೇಸಿಗೆಯಲ್ಲಿ ಮಕ್ಕಳಿಗಾಗಿ

# ಸೃಜನಶೀಲತೆ ಮತ್ತು ಮೋಜಿನ ರಸದೌತಣ

ಬೆಂಗಳೂರು

ಏಪ್ರಿಲ್ 18 ರಿಂದ ಮೇ 24, 2026ರವರೆಗೆ ಇಲ್ಲಿ 'ದ ಸಮ್ಮರ್ ಕಿಡ್ಸ್ ಫೆಸ್ಟಿವಲ್ 2026' ಆಯೋಜಿಸಲಾಗಿದೆ.

ಮಕ್ಕಳ ಉದ್ಯಮಶೀಲತೆ, ಕಲೆ ಮತ್ತು ಕಲಿಕೆಯನ್ನು ಉತ್ತೇಜಿಸುವ ಉದ್ದೇಶದಿಂದ ಈ ಹಬ್ಬವನ್ನು ರೂಪಿಸಲಾಗಿದ್ದು, ಮಾಲ್‌ನಲ್ಲಿ ಡಿಸ್ಕವರಿ, ಕ್ರಿಯೇಟಿವ್ ಸ್ಕಿಲ್ಸ್ ಹಾಗೂ ಇಕೋ–ಲರ್ನಿಂಗ್ ವಲಯಗಳನ್ನೊಳಗೊಂಡ ವಿಶೇಷ 'ಮಲ್ಟಿ–ಜೋನ್ ಪೆವಿಲಿಯನ್' ಇರಲಿದೆ.

1ನೇ ವಾರ (ಏಪ್ರಿಲ್ 18–19):ವಿವಿಧ ಚಟುವಟಿಕೆಗಳೊಂದಿಗೆ ಹಬ್ಬಕ್ಕೆ ಚಾಲನೆ. ಪುಟಾಣಿ ಬಾಣಸಿಗರಿಗಾಗಿ ಲಿಟಲ್ ಚೆಫ್ ಸ್ಪರ್ಧೆ ಮತ್ತು ಅದರ ಗ್ರ್ಯಾಂಡ್ ಫಿನಾಲೆ ನಡೆಯಲಿದೆ. 2ನೇ ವಾರ (ಏಪ್ರಿಲ್ 23–26):ಮಕ್ಕಳಲ್ಲಿ ಅನ್ವೇಷಣಾ ಮನೋಭಾವ ಬೆಳೆಸಲು ಬಿಕಮ್ ಆನ್ ಆಥರ್' ಸೆಷನ್ ಹಾಗೂ ರೋಮಾಂಚಕ

ಪ್ಲಾನೆಟೇರಿಯಂ ಶೋ ಆಯೋಜಿಸಲಾಗಿದೆ. 3ನೇ ವಾರ (ಮೇ 7–10): ಸಕ್ರಿಯ ಕಲಿಕೆಯ ಜೊತೆಗೆ, ಕುಟುಂಬದೊಂದಿಗೆ ಆಚರಿಸಲು ವಿಶೇಷ ತಾಯಂದಿರ ದಿನಾಚರಣೆ ಕಾರ್ಯಕ್ರಮಗಳಿರಲಿವೆ.

4ನೇ ವಾರ (ಮೇ 21–24): ಅಂತಿಮ ಹಂತವಾಗಿ ಮಕ್ಕಳಲ್ಲಿ ಉದ್ಯಮಶೀಲತೆ ಬೆಳೆಸಲು 'ಕಿಡ್ಸ್ ಫ್ಲೀ ಮಾರ್ಕೆಟ್' ಮತ್ತು ತಜ್ಞರ ಉಪನ್ಯಾಸಗಳು ನಡೆಯಲಿವೆ.




# 125 ಹೊಸ ಹೋಟೆಲ್‌ಗಳ ನಿರ್ಮಾಣಕ್ಕೆ ಮುನ್ನುಡಿ

ಬೆಂಗಳೂರು

ಜಾಗತಿಕ ಮಟ್ಟದ ಪ್ರತಿಷ್ಠಿತ ಆತಿಥ್ಯ ಸಂಸ್ಥೆ ಹಿಲ್ಟನ್, ಭಾರತದಲ್ಲಿ ತನ್ನ ವ್ಯಾಪ್ತಿಯನ್ನು ಅಭೂತಪೂರ್ವವಾಗಿ ವಿಸ್ತರಿಸಲು ಬೃಹತ್ ಯೋಜನೆಯೊಂದನ್ನು ರೂಪಿಸಿದೆ. ದೇಶದ ಪ್ರಮುಖ ಹೋಟೆಲ್ ಸಮೂಹವಾದ ರಾಯಲ್ ಆರ್ಕಿಡ್ ಹೋಟೆಲ್ಸ್ ಲಿಮಿಟೆಡ್‌ನ ಅಂಗಸಂಸ್ಥೆ ರೆಜೆಂಟಾ ಹೋಟೆಲ್ಸ್ ಪ್ರೈವೇಟ್ ಲಿಮಿಟೆಡ್ ಜೊತೆಗೆ ಮಹತ್ವದ ಕಾರ್ಯತಂತ್ರದ ಒಪ್ಪಂದಕ್ಕೆ ಸಹಿ ಹಾಕುವ ಮೂಲಕ, ಹಿಲ್ಟನ್ ಭಾರತೀಯ ಮಾರುಕಟ್ಟೆಯಲ್ಲಿ ತನ್ನ ಪ್ರಾಬಲ್ಯವನ್ನು ಮರುಸ್ಥಾಪಿಸಲು ಸಜ್ಜಾಗಿದೆ.

ಈ ಐತಿಹಾಸಿಕ ಒಪ್ಪಂದದ ಅನ್ವಯ 2035ರ ವೇಳೆಗೆ ಭಾರತದಾದ್ಯಂತ, ವಿಶೇಷವಾಗಿ ಪಶ್ಚಿಮ ಮತ್ತು ದಕ್ಷಿಣ ಭಾರತದ ವಿವಿಧ ನಗರಗಳಲ್ಲಿ ಒಟ್ಟು 125 'ಹ್ಯಾಂಪ್ಟನ್ ಬೈ ಹಿಲ್ಟನ್' ಹೋಟೆಲ್‌ಗಳನ್ನು ಪ್ರಾರಂಭಿಸುವ ಗುರಿಯನ್ನು ಹೊಂದಲಾಗಿದೆ. ಭಾರತದ ಆರ್ಥಿಕತೆಯು ವೇಗವಾಗಿ ಬೆಳೆಯುತ್ತಿದ್ದು, ಮಧ್ಯಮ ವರ್ಗದ ಜನರ ಆದಾಯದಲ್ಲಿ ಗಣನೀಯ ಏರಿಕೆಯಾಗಿದೆ. ಇದು ದೇಶೀಯ ಪ್ರವಾಸೋದ್ಯಮಕ್ಕೆ ದೊಡ್ಡ ಮಟ್ಟದ ವೇಗವನ್ನು ನೀಡಿದೆ. ಇಂತಹ ಸಮಯದಲ್ಲಿ ಗುಣಮಟ್ಟದ ವಸತಿ ಸೌಕರ್ಯಗಳ ಕೊರತೆಯನ್ನು ನೀಗಿಸಲು ಈ ಪಾಲುದಾರಿಕೆ ಪೂರಕವಾಗಲಿದೆ. ಈ ಹೊಸ ಯೋಜನೆಯಡಿ ತಲೆಯೆತ್ತಲಿರುವ ಹೋಟೆಲ್‌ಗಳು ಪ್ರಮುಖವಾಗಿ ಕರ್ನಾಟಕ, ಗೋವಾ, ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳಲ್ಲಿ ಕೇಂದ್ರೀಕೃತವಾಗಿರಲಿವೆ.




ಈ ರಾಜ್ಯಗಳು ಭಾರತದ ಒಟ್ಟು ಜಿಡಿಪಿಯಲ್ಲಿ ಸಿಂಹಪಾಲನ್ನು ಹೊಂದಿದ್ದು, ವಾಣಿಜ್ಯ ಮತ್ತು ಪ್ರವಾಸೋದ್ಯಮದ ದೃಷ್ಟಿಯಿಂದ ಅತ್ಯಂತ ಕ್ರಿಯಾತ್ಮಕ ಕಾರಿಡಾರ್‌ಗಳಾಗಿ ಗುರುತಿಸಿಕೊಂಡಿವೆ. ಹ್ಯಾಂಪ್ಟನ್ ಬೈ ಹಿಲ್ಟನ್ ಈಗಾಗಲೇ ಜಾಗತಿಕವಾಗಿ 3,100ಕ್ಕೂ ಹೆಚ್ಚು ಆಸ್ತಿಗಳನ್ನು ಹೊಂದಿದ್ದು, ಈಗ ಭಾರತದ ಉದಯೋನ್ಮುಖ ನಗರಗಳಿಗೂ ತನ್ನ ಸೇವೆಯನ್ನು ವಿಸ್ತರಿಸುತ್ತಿದೆ.

# ಪಲ್ಸರ್ 180 ಹೊಸ ಗ್ರಾಫಿಕ್ಸ್ ಮತ್ತು ಎಲ್ ಇ ಡಿ ಹೆಡ್ ಲ್ಯಾಂಪ್

ಬೆಂಗಳೂರು

ಬಜಾಜ್ ಆಟೋ ಲಿಮಿಟೆಡ್, ಭಾರತದ ಅತ್ಯಂತ ಜನಪ್ರಿಯ ಮತ್ತು ಐಕಾನಿಕ್ ಮೋಟಾರ್‌ಸೈಕಲ್‌ಗಳಲ್ಲಿ ಒಂದಾದ ಪಲ್ಸರ್ 180 ಮತ್ತೆ ಬಂದಿರುವುದಾಗಿ ಇಂದು ಘೋಷಿಸಿದೆ. ಸವಾರರ ಬಲವಾದ ಬೇಡಿಕೆಯಿಂದಾಗಿ, ಹೊಸ ಗ್ರಾಫಿಕ್ಸ್, ಎಲ್‌ಇಡಿ ಹೆಡ್‌ಲ್ಯಾಂಪ್, ಬ್ಲಿಂಕರ್‌ಗಳು ಮತ್ತು ಬ್ಲೂಟೂತ್ ಕನೆಕ್ಟೆಡ್ ಡಿಜಿಟಲ್ ಕನ್ಸೋಲ್‌ನೊಂದಿಗೆ ಪಲ್ಸರ್ 180 ಈಗ ಹೆಚ್ಚು ಹರಿತವಾದ, ಸುಧಾರಿತ ಅವತಾರದಲ್ಲಿ ಮರಳಿ ಬಂದಿದೆ. ಪಲ್ಸರ್ ಬ್ಯಾಂಡ್‌ನ ಎರಡು ಮಹತ್ವದ ಮಾಡೆಲ್‌ಗಳಾದ ಪಲ್ಸರ್ 150 ಮತ್ತು ಪಲ್ಸರ್ 180 ಬಿಡುಗಡೆಯಾಗಿ 25 ವರ್ಷಗಳು ಪೂರೈಸುತ್ತಿರುವ ಸಂಭ್ರಮದಲ್ಲಿ, ಈ ಮರುಬಿಡುಗಡೆ ಒಂದು ಪ್ರಮುಖ ಮೈಲಿಗಲ್ಲಾಗಿದೆ.

ಪಲ್ಸರ್ 180 ಬಿಡುಗಡೆಯಾದಾಗ, ಅದು ಭಾರತದಲ್ಲಿ ಪರ್ಫಾರ್ಮೆನ್ಸ್ ಮೋಟಾರ್‌ಸೈಕ್ಲಿಂಗ್‌ನಲ್ಲಿ ಹೊಸದಾದ ಮಾನದಂಡಗಳನ್ನು ಸ್ಥಾಪಿಸಿತು. ಇದು ಉನ್ನತ ಸಿಸಿ ಬೈಕ್‌ನ ಕಾರ್ಯಕ್ಷಮತೆಯನ್ನು ದೈನಂದಿನ ಬಳಕೆಯ ಸೌಕರ್ಯದೊಂದಿಗೆ ಒಟ್ಟುಗೂಡಿಸಿತು. ಪಲ್ಸರ್ ಭಾರತಕ್ಕೆ ಸ್ಪೋರ್ಟ್ಸ್ ಮೋಟಾರ್‌ಸೈಕ್ಲಿಂಗ್ ಯುಗವನ್ನು ತಂದಿತು. ಪಲ್ಸರ್ 180 ಪಲ್ಸರ್ ಬ್ಯಾಂಡ್ ಮತ್ತು ಅದರ ಪರಂಪರೆಯನ್ನು ನಿರ್ಮಿಸಿದ ಮೋಟಾರ್‌ಸೈಕಲ್ ಆಗಿದೆ.



ಪಲ್ಸರ್ 180 ಮರಳಿ ತರುತ್ತಲಿದೆ ತನ್ನ ಆಕ್ರಮಣಕಾರಿ ಶೈಲಿ, ಸುಧಾರಿತ ಕಾರ್ಯಕ್ಷಮತೆ ಮತ್ತು ಎಲ್‌ಇಡಿ ಹೆಡ್‌ಲ್ಯಾಂಪ್, ಬ್ಲಿಂಕರ್‌ಗಳು ಹಾಗೂ ಬ್ಲೂಟೂತ್ ಕನೆಕ್ಟಿವಿಟಿ ಹೊಂದಿರುವ ಡಿಜಿಟಲ್ ಕನ್ಸೋಲ್‌ನಂತಹ ಅತ್ಯಾಧುನಿಕ ವೈಶಿಷ್ಟ್ಯಗಳ ಸಂಯೋಜನೆಯೊಂದಿಗೆ ಹೊರಹೊಮ್ಮಿರುವ ಪಲ್ಸರ್ 180, ಕಾರ್ಯಕ್ಷಮತೆ, ವಿನ್ಯಾಸ ಮತ್ತು ಮೌಲ್ಯದಲ್ಲಿ ಒಂದು ಪರಿಪೂರ್ಣ ಆಯ್ಕೆಯಾಗಿದೆ.

## ಬೇಸಿಗೆ ಶಿಬಿರಕ್ಕೆ ಚಾಲನೆ

ವಿಜಯಪುರ

ಹೋಬಳಿಯ ನಾರಾಯಣಪುರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ, ಮಕ್ಕಳ ಜಾಗೃತಿ ಸಂಸ್ಥೆಯ ವತಿಯಿಂದ ಬೇಸಿಗೆ ಶಿಬಿರವನ್ನು ಆಯೋಜಿಸಿದ್ದು, ಮುಖ್ಯಶಿಕ್ಷಕ ಲವಕುಮಾರ್ ಅವರು, ಶಿಬಿರ ಉದ್ಘಾಟನೆ ಮಾಡಿದರು.

15 ದಿನಗಳ ಕಾಲ ನಡೆಯುವ ಶಿಬಿರದಲ್ಲಿ, ಚಿತ್ರಕಲೆ, ಸರಳ ಇಂಗ್ಲಿಷ್ ಪದಗಳು, ಪೇಂಟಿಂಗ್, ವಿವಿಧ ಕ್ರೀಡಾ ಆಟಗಳು, ಕಥೆ ಹೇಳುವುದು, ನಾಟಕ ಅಭ್ಯಾಸ, ರಂಗೋಲಿ ಬಿಡಿಸುವುದು, ಸೇರಿದಂತೆ ವಿವಿಧ ಕೌಶಲ್ಯಾಧಾರಿತವಾದ ಕಲಿಕೆಯನ್ನು ಮಕ್ಕಳಿಗೆ ಕಲಿಸಲಿದ್ದಾರೆ. ಮುಖ್ಯಶಿಕ್ಷಕ ಲವಕುಮಾರ್ ಮಾತನಾಡಿ, ಮಕ್ಕಳಲ್ಲಿ ಕೌಶಲ್ಯಗಳನ್ನು ವೃದ್ಧಿಸಲು ಬೇಸಿಗೆ ಶಿಬಿರ ಹೆಚ್ಚು ಸಹಕಾರಿಯಾಗಲಿದೆ. ಮಕ್ಕಳು, ಬೇಸಿಗೆ ಶಿಬಿರದಲ್ಲಿ, ಶಾಲೆಯಲ್ಲಿ ಕಲಿಯುವ ಶಿಕ್ಷಣಕ್ಕಿಂತ, ವಿಭಿನ್ನಾದ ಶಿಕ್ಷಣವನ್ನು ಕಲಿಯಲಿದ್ದೀರಿ, ಇಂತಹ ಅವಕಾಶಗಳನ್ನು ಸದುಪಯೋಗ ಮಾಡಿಕೊಳ್ಳಬೇಕು.

## 17ಕ್ಕೆ ದಾಳಿಂಬೆ ಬೆಳೆಗಾರರ ತರಬೇತಿ ಕಾರ್ಯಗಾರ

ವಿಜಯಪುರ

ಪಟ್ಟಣದ ಚನ್ನರಾಯಪಟ್ಟಣ ಸರ್ಕಲ್ ನಲ್ಲಿರುವ, ಅನ್ನಪೂರ್ಣೇಶ್ವರಿ ಕನ್ವೆನ್ಷನ್ ಹಾಲ್‌ನಲ್ಲಿ ಇದೇ 17ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4ಗಂಟೆಯವರೆಗೆ, ದಾಳಿಂಬೆ ಬೆಳೆಗಾರರ ರೈತರ ಕಾರ್ಯಗಾರವನ್ನು, ಜೈನ್ ಇರಿಗೇಶನ್ ಸಿಸ್ಟಮ್ಸ್ ಹಾಗೂ ಇಂಟರ್ ನ್ಯಾಷನಲ್ ಫೈಟೋ ಸ್ಯಾನಿಟರಿ ರಿಸರ್ಚ್ ಅಂಡ್ ಸರ್ವಿಸಸ್ ಮತ್ತು ಶ್ರೀನಿಧಿ ಆಗ್ರೋ ಫರ್ಟಿಲೈಜರ್ಸ್ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜನೆ ಮಾಡಲಾಗಿದೆ ಎಂದು ಶ್ರೀನಿಧಿ ಫರ್ಟಿಲೈಸರ್ಸ್‌ನ ರಾಘವೇಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ದಾಳಿಂಬೆ ಬೆಳೆಯಲ್ಲಿ, ವೈಜ್ಞಾನಿಕ ಕೃಷಿ ಪದ್ಧತಿಗಳ ವಿಚಾರ ಸಂಕೀರ್ಣವನ್ನು ಸಂಯೋಜಿತ ನೀರಾವರಿ ರಸವರಿ ಕೀಟ ಮತ್ತು ರೋಗ ನಿರ್ವಹಣೆ ವಿಷಯಗಳಲ್ಲಿ ತರಬೇತಿ ಕಾರ್ಯಗಾರವನ್ನು ಆಯೋಜಿಸಲಾಗಿದೆ.

# ಕೆ.ಆರ್.ಎಸ್ ಕಾರ್ಯಕರ್ತರ ನಡವಳಿಕೆ ಬಗ್ಗೆ ಕಾಂಗ್ರೆಸ್ ಗರಂ

ತುಮಕೂರು

ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ನಡೆದ ಜನಸ್ಪಂದನ ಕಾರ್ಯಕ್ರಮದಲ್ಲಿ ಕೆ.ಆರ್.ಎಸ್ (ಕರ್ನಾಟಕ ರಾಷ್ಟ್ರ ಸಮಿತಿ) ಪಕ್ಷದ ಕಾರ್ಯಕರ್ತರು ಉದ್ದೇಶಪೂರ್ವಕವಾಗಿ ಗೊಂದಲ ಸೃಷ್ಟಿಸಿ, ಸಚಿವರ ತೇಜೋವಧೆಗೆ ಮುಂದಾಗಿರುವುದನ್ನು ಜಿಲ್ಲಾ ಕಾಂಗ್ರೆಸ್ ತೀವ್ರವಾಗಿ ಖಂಡಿಸಿದೆ. ಕೆ.ಆರ್.ಎಸ್ ಕಾರ್ಯಕರ್ತರ ಇಂತಹ ವರ್ತನೆ ಮುಂದುವರೆದರೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ. ಚಂದ್ರಶೇಖರ್ ಗೌಡ ಎಚ್ಚರಿಕೆ ನೀಡಿದ್ದಾರೆ.

ಪಕ್ಷದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಏಪ್ರಿಲ್ 8ರಂದು ನಡೆದ ಜನಸ್ಪಂದನದಲ್ಲಿ




ಸಚಿವರು ಊಟವನ್ನೂ ಮಾಡದೆ ಸುಮಾರು 750ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಿ ಜನಸಾಮಾನ್ಯರ ಸಂಕಷ್ಟ ಆಲಿಸಿದ್ದಾರೆ. ಆದರೆ ಸಭೆಯ ಕೊನೆಯಲ್ಲಿ ಬಂದ ಕೆ.ಆರ್.ಎಸ್ ಪಕ್ಷದ ಕೆಲವರು ಉದ್ದೇಶಪೂರ್ವಕವಾಗಿಯೇ ಸಚಿವರನ್ನು ಕೆರಳಿಸುವಂತೆ ಪ್ರಶ್ನೆ ಮಾಡಿದ್ದಾರೆ ಎಂದು ದೂರಿದರು.

"ತುಮಕೂರಿನ ಕಾರ್ಯಕ್ರಮಕ್ಕೆ ಮೈಸೂರಿನಿಂದ ವ್ಯಕ್ತಿಗಳನ್ನು ಕರೆತರುವ ಅಗತ್ಯವೇನಿತ್ತು? ಇದು ಗೃಹ ಸಚಿವರಿಗೆ ಕೆಟ್ಟ ಹೆಸರು ತರುವ ವ್ಯವಸ್ಥಿತ ಷಡ್ಯಂತ್ರ. ಅರ್ಜಿ ಸಲ್ಲಿಸಲು ಬಂದವರು ಅದನ್ನು ವಿಡಿಯೋ ಮಾಡಿ ಸೋಶಿಯಲ್ ಮೀಡಿಯಾದಲ್ಲಿ ಅಪಪ್ರಚಾರ ಮಾಡುತ್ತಿರುವುದು ಕೇವಲ ಗಿಮಿಕ್," ಎಂದು ಚಂದ್ರಶೇಖರ್ ಗೌಡ ಕಿಡಿಕಾರಿದರು. ಕೆ.ಆರ್.ಎಸ್‌ನ ಈ ದುಂಡಾವರ್ತನೆ ಮುಂದುವರೆದರೆ ಕಾಂಗ್ರೆಸ್ ಕಾರ್ಯಕರ್ತರು ಎಲ್ಲೆಂದರಲ್ಲಿ ಅವರಿಗೆ ಘೇರಾವ್ ಹಾಕಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮುಖಂಡರಾದ ಎನ್. ಗೋವಿಂದರಾಜು ಮತ್ತು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಆರ್. ರಾಮಕೃಷ್ಣ ಮಾತನಾಡಿ, "ಗೃಹ ಸಚಿವರು ತಮ್ಮ 40 ವರ್ಷಗಳ ರಾಜಕೀಯ ಜೀವನದಲ್ಲಿ ಸೌಮ್ಯ ಸ್ವಭಾವಕ್ಕೆ ಹೆಸರಾದವರು. ಅವರನ್ನು ಟಾರ್ಗೆಟ್ ಮಾಡಿ ತೇಜೋವಧೆ ಮಾಡುತ್ತಿರುವುದು ಸರಿಯಲ್ಲ. ಇದರ ಹಿಂದೆ ಯಾರಿದ್ದಾರೆ ಎಂಬ ಬಗ್ಗೆ ತನಿಖೆಯಾಗಬೇಕು," ಎಂದು ಒತ್ತಾಯಿಸಿದರು.

ಕೆಪಿಸಿಸಿ ಉಪಾಧ್ಯಕ್ಷ ಮುರುಳೀಧರ ಹಾಲಪ್ಪ ಮಾತನಾಡಿ, "ಕೆ.ಆರ್.ಎಸ್ ಪಕ್ಷದವರು ಕೇವಲ ಪ್ರಚಾರಕ್ಕಾಗಿ ಹೀಗೆ ಮಾಡುತ್ತಿದ್ದಾರೆ. ಮುಖ್ಯಮಂತ್ರಿಗಳು ಹಾಗೂ ಇತರ ಸಚಿವರ ಜನಸ್ಪಂದನ ಸಭೆಗಳಲ್ಲೂ ಇವರು ಇದೇ ರೀತಿ ವರ್ತಿಸಿ ಗೊಂದಲ ಮೂಡಿಸುತ್ತಿದ್ದಾರೆ. ಅರ್ಜಿ ನೀಡುವ ಬದಲು ವಿಡಿಯೋ ಮಾಡುವುದೇ ಇವರ ಮುಖ್ಯ ಉದ್ದೇಶವಾಗಿದೆ," ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಇಕ್ಬಾಲ್ ಅಹಮದ್, ಸುವರ್ಣಮ್ಮ, ಹೆಚ್.ಸಿ. ಹನುಮಂತಯ್ಯ, ರೇವಣ್ಣ ಸಿದ್ದಯ್ಯ, ಇರ್ಫಾನ್ ಅಹಮದ್, ಲಿಂಗರಾಜು ಸೇರಿದಂತೆ ಹಲವು ಬ್ಲಾಕ್ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

## ಅಂಬೇಡ್ಕರ್ ಜಯಂತಿ ಆಚರಣೆ

ಬೇತಮಂಗಲ

"ಡಾ. ಬಿ.ಆರ್. ಅಂಬೇಡ್ಕರ್ ಅವರು ಕೇವಲ ಸಂವಿಧಾನ ಶಿಲ್ಪಿಯಲ್ಲ, ಅವರು ಹಿಂದೂ ಕೋಡ್ ಬಿಲ್ ಮೂಲಕ ಮಹಿಳೆಯರಿಗೆ ಆಸ್ತಿ ಹಕ್ಕು ಮತ್ತು ಸಮಾನತೆ ದೊರಕಿಸಿಕೊಟ್ಟ ಧೀಮಂತ ನಾಯಕ," ಎಂದು ಹುಲ್ಕೂರ್ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರು ಶ್ಲಾಘಿಸಿದರು.

ಪಟ್ಟಣದ ಸಮೀಪದ ಹುಲ್ಕೂರ್ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು. ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಹಾಗೂ ಸಿಬ್ಬಂದಿ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಮರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪಂಚಾಯತಿ ಸಿಬ್ಬಂದಿ, "ಅಸ್ಪೃಶ್ಯತೆ ನಿರ್ಮೂಲನೆ, ದಲಿತರ ಹಕ್ಕುಗಳು ಮತ್ತು ಮಹಿಳಾ ಸಬಲೀಕರಣಕ್ಕಾಗಿ ಅಂಬೇಡ್ಕರ್ ಅವರು ನಡೆಸಿದ ಹೋರಾಟಗಳು ಅವಿಸ್ಮರಣೀಯ. ಕಾರ್ಮಿಕರ ಹಕ್ಕುಗಳ ರಕ್ಷಣೆಗಾಗಿ ಅವರು ತೋರಿದ ದಾರಿಯು ಇಂದಿಗೂ ಪ್ರಸ್ತುತವಾಗಿದೆ. ಪ್ರತಿಯೊಬ್ಬ ನಾಗರಿಕನೂ ಅವರ ತತ್ವ ಮತ್ತು ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ," ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಕೃಷ್ಣಮೂರ್ತಿ, ಕರವಸೂಲಿಗಾರ ವೆಂಕಟರಾಮ್, ಸಿಬ್ಬಂದಿಗಳಾದ ರಾಜಪ್ಪ, ಧನಂಜಯ್ ಹಾಗೂ ಹಲವಾರು ದಲಿತ ಮುಖಂಡರು ಭಾಗವಹಿಸಿ ಸಂವಿಧಾನ ಶಿಲ್ಪಿಗೆ ನಮನ ಸಲ್ಲಿಸಿದರು.



## ಶಾಲೆಗೆ ಸೇರಿದರಷ್ಟೇ ಜವಾಬ್ದಾರಿ ಮುಗಿಯಲ್ಲ

ತುಮಕೂರು

ಒಳ್ಳೆಯ ಶಾಲೆಗೆ ಸೇರಿಸಿದರೆ ಅಷ್ಟೇ ಸಾಲದು, ಮಕ್ಕಳ ಬಗ್ಗೆ ಗಮನ ನೀಡಬೇಕು. ಅವರಿಗೆ ಸಮಯ ನೀಡಿ ಒಳ್ಳೆಯದು, ಕೆಟ್ಟದ್ದು ಯಾವುದೆಂದು ತಿಳಿಸಿ ಸಂಸ್ಕಾರ ಬೆಳೆಸಬೇಕು ಎಂದು ತುಮಕೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು ಸಲಹೆ ನೀಡಿದರು.

ನಗರದ ಪ್ರೆಸ್‌ಕ್ಲಬ್ ಆವರಣ ಆಲದಮರ ಪಾರ್ಕ್‌ನಲ್ಲಿ ನಿರಂಕುಶ ರಂಗ ತಂಡದಿಂದ 25 ದಿನಗಳ ಕಾಲ ನಡೆಯಲಿರುವ ಬೇಸಿಗೆ ರಂಗ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬೇಸಿಗೆ ಬಂತೆಂದರೆ ಬೇಸಿಗೆ ಶಿಬಿರ ಶುರು ಮಾಡುತ್ತೇವೆ. ನಾವು ಓದುವಾಗ ಈ ರೀತಿ ಇರಲಿಲ್ಲ, ಇಂತಹ ಅವಕಾಶಗಳೂ ಇರಲಿಲ್ಲ. ಬೀದಿಯಲ್ಲೇ ಇರುತ್ತಿದ್ದೆವು ಎಂದರು.

ಇಂದು ಮಕ್ಕಳನ್ನು ಮುದ್ದಿನಿಂದ ಬೆಳೆಸುತ್ತಿದ್ದೇವೆ. ಆದರೆ ಎರಡೂವರೆ ವರ್ಷಕ್ಕೆ ಅವರಿಂದ ಅಂತರ ಕಾಯ್ದುಕೊಳ್ಳುತ್ತಿದ್ದೇವೆ, ದೂರ ಇರುತ್ತಿದ್ದೇವೆ. ಪ್ಲೇ ಹೋಂ ಅಂತ ಬಿಡುತ್ತಿದ್ದೇವೆ. ಹೀಗಾಗಬಾರದು, ತಂದೆ–ತಾಯಿ ಮಕ್ಕಳ ಜತೆ ಹೆಚ್ಚು ಸಮಯ ಕಳೆಯಬೇಕು ಎಂದರು.

ಉದ್ಯಮಿ ಎಸ್.ಪಿ.ಚಿದಾನಂದ್ ಮಾತನಾಡಿ, ಮಕ್ಕಳಿಗೆ ಸಂಸ್ಕಾರ ಕಲಿಸಬೇಕು. ಆಗ ಅವರು

## ಅಪಾಯಕ್ಕೆ ಆಹ್ವಾನ ನೀಡುತ್ತಿರುವ ಮೀಟರ್ ಬಾಕ್ಸ್

ವಿಜಯಪುರ

ಪಟ್ಟಣದ ಚನ್ನರಾಯಪಟ್ಟಣ ಸರ್ಕಲ್‌ನಲ್ಲಿರುವ ಬೇಕರಿಯ ಪಕ್ಕದಲ್ಲಿ ಅಳವಡಿಸಿರುವ, ವಿದ್ಯುತ್ ಕಂಬವೊಂದರಲ್ಲಿ ವಿದ್ಯುತ್ ತಂತಿಗಳನ್ನು ಮೀಟರ್ ಬಾಕ್ಸ್ ನಿಂದ ಹೊರಗೆ ಬಿಟ್ಟಿದ್ದು, ಇವು ಅಪಾಯಕ್ಕೆ ಅಹ್ವಾನ ನೀಡುತ್ತಿವೆ. ತ್ವರಿತವಾಗಿ, ವಿದ್ಯುತ್ ತಂತಿಗಳನ್ನು ಜನರಿಗೆ ಎಟುಕದ ರೀತಿಯಲ್ಲಿ ಭದ್ರಪಡಿಸಬೇಕಿದೆ.

ಸಮೀಪದಲ್ಲೆ ಶಾಲೆಯಿದೆ. ಸಾವಿರಾರು ಮಕ್ಕಳು, ಇಲ್ಲಿ



ಓಡಾಡುತ್ತಾರೆ. ಬೇಕರಿ ಸೇರಿದಂತೆ ಸುತ್ತಮುತ್ತಲಿನ ಅಂಗಡಿಗಳಲ್ಲಿ ವ್ಯಾಪಾರ ವಹಿವಾಟು ಮಾಡಲು ನೂರಾರು ಮಂದಿ ನಾಗರಿಕರು ಬಂದು ಹೋಗುತ್ತಾರೆ. ತಮ್ಮ ದ್ವಿಚಕ್ರ ವಾಹನಗಳನ್ನೂ ಇಲ್ಲೆ ನಿಲ್ಲಿಸುತ್ತಾರೆ. ಇಲ್ಲಿ, ವಿದ್ಯುತ್ ತಂತಿಗಳಿರುವುದು ಜನರಿಗೆ ಅರಿವಿಗೆ ಬರುವುದಿಲ್ಲ, ಸ್ವಲ್ಪ ಎಚ್ಚರ ತಪ್ಪಿದರೂ, ಅನಾಹುತ ಖಚಿತ. ಆದ್ದರಿಂದ ಸಂಬಂಧಪಟ್ಟವರು, ಮೀಟರ್ ಬಾಕ್ಸ್‌ನಿಂದ ಹೊರಗೆ ಬಿಟ್ಟಿರುವ ತಂತಿಗಳನ್ನು ಭದ್ರಪಡಿಸುವ ಮೂಲಕ ಇಲ್ಲಿ ಆಗಬಹುದಾದಂತಹ ಭಾರಿ ಅನಾಹುತವನ್ನು ತಪ್ಪಿಸಬೇಕಿದೆ.

# ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲೆಯ ನೋಂದಣಿ ರದ್ದು

ಬೆಂಗಳೂರು: ಥಣಿ ಸಂದ್ರದ ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲೆಯ ನೋಂದಣಿಯನ್ನು "ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ಸೆಕ್ಷನ್ 34 ರಡಿ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತಾಲಯ ರದ್ದುಡಿಸಿದೆ.

ಸರ್ಕಾರದ ತೀರ್ಮಾನದ ವಿರುದ್ಧ ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲಾ ಆಡಳಿತ ಮಂಡಳಿ ನಡೆಸಿದ ಕಾನೂನು ಹೋರಾಟಕ್ಕೆ ಹಿನ್ನೆಡೆಯಾಗಿದ್ದು, ಶಾಲಾ ಆಡಳಿತ ಮಂಡಳಿಯ ವಾದವನ್ನು ಹೈಕೋರ್ಟ್ ಸಂಪೂರ್ಣವಾಗಿ ತಿರಸ್ಕರಿಸಿದೆ. ಅನಗತ್ಯವಾಗಿ ರಿಜ್ ಅರ್ಜಿ ಸಲ್ಲಿಸಿದ ಅರ್ಜಿದಾರರಾದ ಶಾಲಾ ಆಡಳಿತ ಮಂಡಳಿಗೆ 25 ಸಾವಿರ ರೂ ದಂಡ ವಿಧಿಸಿ, ರಿಜ್ ಅರ್ಜಿ ವಜಾಗೊಳಿಸಿ, ಸರ್ಕಾರದ ಕ್ರಮವನ್ನು ಎತ್ತಿ ಹಿಡಿದಿದೆ.

ಹೆಜ್ಜೆ, ಹೆಜ್ಜೆಗೂ ನೆಲದ ಕಾನೂನು ಉಲ್ಲಂಘಿಸಿ ಸುಳ್ಳು ಮಾಹಿತಿ ನೀಡಿ ಸರ್ಕಾರವನ್ನು ದಾರಿ ತಪ್ಪಿಸುತ್ತಿದ್ದ ಶಿಕ್ಷಣ ಸಂಸ್ಥೆಗೆ ಕೊನೆಗೂ ಬೀಗ ಮುದ್ರೆ ಹಾಕುವಂತೆ ಸೂಚಿಸಲಾಗಿದೆ. ಎಪ್ರಿಲ್ 10 ರಂದು ಸರ್ಕಾರ ಅಧಿಕೃತ ಆದೇಶ ಜಾರಿ ಮಾಡಿದೆ. ಶಾಲೆಯಲ್ಲಿ ಕಲಿಯುತ್ತಿರುವ 1ನೇ ತರಗತಿಯಿಂದ 7ನೇ ತರಗತಿಯ ವಿದ್ಯಾರ್ಥಿಗಳು ಮತ್ತು 8ನೇ ತರಗತಿಯಿಂದ 10ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗದಂತೆ ತಕ್ಷಣವೇ ಪರ್ಯಾಯ ವ್ಯವಸ್ಥೆ ಮಾಡಬೇಕೆಂದು ಆದೇಶಿಸಿದೆ.

ಈ ಆದೇಶ ಉಪ ನಿರ್ದೇಶಕರಿಗೆ ತಲುಪಿದ ಏಳು ದಿನಗಳ ಒಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 ರ, 1999 ರ 13[3] ರ ನಿಯಮದಂತೆ ಪ್ರಸ್ತುತ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮೀಪದ ಶಾಲೆಗೆ ದಾಖಲಿಸಲು ಉಪ ನಿರ್ದೇಶಕರು ಸೂಕ್ತ ಕ್ರಮ ವಹಿಸಬೇಕು. ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಹೇಳಿದೆ.

ಸಾಮರ್ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಶಾಲೆಯ ಶೈಕ್ಷಣಿಕ ದಾಖಲೆಗಳನ್ನು ಹತ್ತಿರದ ಸರ್ಕಾರಿ ಪ್ರಾಥಮಿಕ ಶಾಲೆಗೆ ಹಸ್ತಾಂತರಿಸಿ ಈ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಪ್ರತ್ಯೇಕ ದಾಸ್ತಾನು ವಹಿಯಲ್ಲಿ ನಮೂದಿಸಿ ದಾಖಲೆ ವಹಿ ನಿರ್ವಹಿಸಬೇಕು. ನೋಂದಣಿ ರದ್ದುಪಡಿಸಿರುವ ಆದೇಶವನ್ನು ಉಪ ನಿರ್ದೇಶಕರ ಹಂತದಲ್ಲಿ ಜಾರಿ ಮಾಡಬೇಕು. ಈ ಆದೇಶದ ತಿದ್ದುಪಡಿ ಇಲ್ಲವೆ ಮಾರ್ಪಾಡಿಗೆ ಅವಕಾಶವಿಲ್ಲ ಎಂದು ಸ್ಪಷ್ಟವಾಗಿ ತಿಳಿಸಲಾಗಿದೆ.

ಶಾಲಾ ಜಾಗಕ್ಕೆ ಸಂಬಂಧಿಸಿದಂತೆ ಶಿಕ್ಷಣ ಸಂಸ್ಥೆಯವರು ಯಾವುದೇ ದಾಖಲೆಗಳನ್ನು ಇಲಾಖೆಯ ಪರಿಶೀಲನೆಗೆ ಒದಗಿಸಿಲ್ಲ. ದಾಖಲೆಗಳಲ್ಲಿ ಶಿಕ್ಷಣ ಸಂಸ್ಥೆಯನ್ನು ಎರಡು ಹೆಸರುಗಳಿಂದ ನಮೂದಿಸಲಾಗಿದೆ. ಶಾಲೆಗೆ ಅನುಮತಿ ಪಡೆಯಲು ಸಲ್ಲಿಸಿದ ಮನವಿಯಲ್ಲಿ ತಪ್ಪು ಮತ್ತು ನಕಲಿ ದಾಖಲೆಗಳನ್ನು ಸಲ್ಲಿಸಲಾಗಿದೆ. ಬ್ಯಾಂಕ್ ದಾಖಲೆಗಳಲ್ಲಿಯೂ ಸಹ ತಿದ್ದುಪಡಿ, ಮಾರ್ಪಾಟುಗಳನ್ನು




ಮಾಡಿರುವುದು ಸಂದೇಹಾಸ್ಪದವಾಗಿದೆ ಎಂದಿದೆ.

ವಿವಿಧ ಹಂತಗಳಲ್ಲಿ ಸಲ್ಲಿಸಿರುವ ದಾಖಲೆಗಳನ್ನು ತಿದ್ದುಪಡಿ ಮಾಡಿದ್ದು, ಸಾಕಷ್ಟು ಲೋಪದೋಷಗಳು ಕಂಡು ಬಂದಿವೆ. 1 ರಿಂದ 10 ನೇ ತರಗತಿಗೆ ಮಾನ್ಯತೆ ನವೀಕರಕ್ಕಾಗಿ ಸಲ್ಲಿಸಿದ ಅರ್ಜಿಯಲ್ಲಿ ಜಾಮೀಯಾ ಮಹಮ್ಮದೀಯ ಮನ್ಸೂರ ಎಂದು ನಮೂದಿಸಿ, ಹೈಕೋರ್ಟ್ ನಲ್ಲಿ ದೂರು ದಾಖಲಾದ ತರುವಾಯ ಸಂಸ್ಥೆಯ ಹೆಸರು ತಪ್ಪಾಗಿದೆ. ಸರಿ ಪಡಿಸಿಕೊಡುವಂತೆ ಶಿಕ್ಷಣ ಸಂಸ್ಥೆಯವರು ಕೋರಿರುವುದನ್ನು ಸಹ ಆದೇಶದಲ್ಲಿ ನಮೂದಿಸಲಾಗಿದೆ.

ಜೊತೆಗೆ ಮುಂಬೈ ವ್ಯಾಪ್ತಿಯಲ್ಲಿ ದಿ ಆಲ್ ಜಮಿಯಾ ಮೊಹಮ್ಮದೀಯ ಎಜುಕೇಶನ್ ಸೊಸೈಟಿ ಹೆಸರಿನಲ್ಲಿ ಸಂಸ್ಥೆ ನೋಂದಣಿಯಾಗಿದೆ. ಆದರೆ ಜಾಮಿಯ ಮೊಹಮ್ಮದ್ದೀಯ ಎಜುಕೇಶನ್ ಸೊಸೈಟಿ ಮತ್ತು ಜಾಮಿಯ ಮೊಹಮ್ಮದೀಯ ಮನ್ಸೂರ ಹೆಸರಿನಲ್ಲಿ ಯಾವುದೇ ಸಂಸ್ಥೆಯನ್ನು ನೋಂದಾಯಿಸಿಲ್ಲ ಎಂದು ಸದರಿ ಸಂಸ್ಥೆಯವರು ನೀಡಿರುವ ಸ್ಪಷ್ಟೀಕರಣವನ್ನು ಆದೇಶದಲ್ಲಿ ಸೇರಿಸಲಾಗಿದೆ. ಹೀಗೆ ಎಲ್ಲಾ ಹಂತಗಳಲ್ಲೂ ಶಿಕ್ಷಣ ಇಲಾಖೆಯನ್ನು ದಾರಿ ತಪ್ಪಿಸಿರುವುದು ಕಂಡು ಬಂದಿದೆ. ಶಾಲೆಯ ಮಾನ್ಯತೆಯನ್ನು ರದ್ದುಪಡಿಸಿದ ಶಾಲಾ ಶಿಕ್ಷಣ ಇಲಾಖೆಯ ಕ್ರಮವನ್ನು ಪ್ರಶ್ನಿಸಿ ಮುಂಬೈ ಮತ್ತು ಬೆಂಗಳೂರಿನ ಜಾಮಿಯಾ ಮೊಹಮ್ಮದೀಯ ಎಜುಕೇಶನ್ ಸೊಸೈಟಿ ಸಲ್ಲಿಸಿದ್ದ ರಿಜ್ ಅರ್ಜಿಯನ್ನು ಹೈಕೋರ್ಟ್ ನ್ಯಾಯಮೂರ್ತಿ ಇ.ಎಸ್. ಇಂದ್ರೇಶ್ ನೇತೃತ್ವದ ನ್ಯಾಯಪೀಠ ವಜಾಗೊಳಿಸಿದೆ. ಅನಗತ್ಯವಾಗಿ ರಿಜ್ ಅರ್ಜಿ ಸಲ್ಲಿಸಿದ ಕಾರಣಕ್ಕೆ ಅರ್ಜಿದಾರರಾದ ಶಾಲಾ ಆಡಳಿತ ಮಂಡಳಿಗೆ 25 ಸಾವಿರ ರೂ ದಂಡ ವಿಧಿಸಿ ದಂಡದ ಮೊತ್ತವನ್ನು ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರಕ್ಕೆ ಪಾವತಿಸುವಂತೆ ಆದೇಶಿಸಿದೆ.

ಶಿಕ್ಷಣ ಸಂಸ್ಥೆಯ ಮಾನ್ಯತೆ ರದ್ದುಪಡಿಸಲು ಕೈಗೊಂಡ ಶಾಲಾ ಶಿಕ್ಷಣ ಇಲಾಖೆಯ ಕ್ರಮಗಳನ್ನು ನ್ಯಾಯಪೀಠ ಎತ್ತಿ ಹಿಡಿದಿದೆ. ಶಿಕ್ಷಣ ಸಂಸ್ಥೆಯ ಕ್ರಮಗಳು ಸಮರ್ಪಕವಾಗಿವೆ. ಜೊತೆಗೆ ಸಂಸ್ಥೆಯ ವಿರುದ್ಧ ಕೊತ್ತನೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಮೊಕದ್ದಮೆಯನ್ನು ಆದೇಶದಲ್ಲಿ ನ್ಯಾಯಪೀಠ ಉಲ್ಲೇಖಿಸಿದೆ.

# ಮಹಿಳೆಯರ ರಾಜಕೀಯ ಸಬಲೀಕರಣಕ್ಕೆ 33% ಮೀಸಲಾತಿ ಬೆಳಕು

ಬಳ್ಳಾರಿ

ಬರುವ 2029ರ ಲೋಕಸಭಾ ಚುನಾವಣೆಯಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಜಾರಿಯಾಗಿ, ನಾರಿಶಕ್ತಿ ಸಂಸತ್ತಿನಲ್ಲಿ ಶಕ್ತಿಯುತವಾಗಿ ಪ್ರತಿನಿಧಿಸಲಿದೆ ಎಂದು ವಿಧಾನಪರಿಷತ್ ಸದಸ್ಯೆ ಹೇಮಲತಾ ನಾಯಕ ಹೇಳಿದರು.

ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮಹಿಳಾ ಮೀಸಲಾತಿ ಜಾರಿಗೆ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಸಂಸತ್ತಿನ ವಿಶೇಷ ಅಧಿವೇಶನ ಕರೆದಿರುವುದು ಇತಿಹಾಸಾತ್ಮಕ ಬೆಳವಣಿಗೆ. ಮಹಿಳಾ ಮೀಸಲಾತಿ ಮಸೂದೆ ಹಲವು ವರ್ಷಗಳಿಂದ ಲೋಕಸಭೆ ಮತ್ತು ರಾಜ್ಯಸಭೆಗಳಲ್ಲಿ ಪ್ರಸ್ತಾಪವಾದರೂ ಅನುಷ್ಠಾನಕ್ಕೆ ಬಂದಿರಲಿಲ್ಲ. ಇದೀಗ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ ಇದನ್ನು ಜಾರಿಗೆ ತರುವ ದಿಟ್ಟ



ನಿರ್ಧಾರ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ 2029ರೊಳಗೆ ಮಹಿಳೆಯರಿಗೆ ಶೇ 33ರಷ್ಟು ಪ್ರತಿನಿಧಿತ್ವ ದೊರೆಯುವುದು ಖಚಿತ ಎಂದರು.

ಹಿಂದಿನ ದಿನಗಳಲ್ಲಿ ಸಂಸತ್ತಿನಲ್ಲಿ ಮಹಿಳಾ ಸದಸ್ಯರ ಪ್ರಮಾಣ ಕೇವಲ ಶೇ 4ರಷ್ಟಿತ್ತು. ಬಸವರಾಜೇಶ್ವರಿ, ನಾಗಮ್ಮ ಕೇಶವಮೂರ್ತಿ ಮೊದಲಾದ ನಾಯಕರಿಂದ ಪ್ರೇರಿತರಾಗಿ ಅನೇಕ ಮಹಿಳೆಯರು ರಾಜಕೀಯಕ್ಕೆ ಪ್ರವೇಶಿಸಿದ್ದಾರೆ. 2019ರ ವೇಳೆಗೆ ಮಹಿಳಾ ಸದಸ್ಯರ ಪ್ರಮಾಣ ಶೇ 15ರಷ್ಟು ಏರಿಕೆಯಾಗಿದೆ. ಮಹಿಳಾ ಮೀಸಲಾತಿ ವಿಚಾರಕ್ಕೆ ದೇಶದಾದ್ಯಂತ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ವಿರೋಧ ಪಕ್ಷಗಳ ಆಕ್ಷೇಪಗಳ ನಡುವೆಯೂ ಎನ್‌ಡಿಎ ಸರ್ಕಾರ ಇದನ್ನು ಜಾರಿಗೆ ತರಲಿದೆ. 2029ರ ಚುನಾವಣೆಯ ವೇಳೆಗೆ ಮಹಿಳೆಯರು ತಮ್ಮ ಹಕ್ಕಿನ ಮೀಸಲಾತಿ ಅನುಭವಿಸಲಿದ್ದಾರೆ ಎಂದರು.

ಮಹಿಳಾ ಸಬಲೀಕರಣದ ದೃಷ್ಟಿಯಿಂದ 'ಡ್ರೋಣ್ ದೀದಿ', 'ಮುದ್ರಾ' ಯೋಜನೆಗಳಂತಹ ವಿವಿಧ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರ ಯಶಸ್ವಿಯಾಗಿ ಜಾರಿಗೊಳಿಸಿದೆ. ಇದರ ಮೂಲಕ ಮಹಿಳೆಯರು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಶಕ್ತಿಶಾಲಿಗಳಾಗುತ್ತಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ನಾಯಕಿಯರಾದ ವಿಜಯಲಕ್ಷ್ಮೀ ಕರೂರು, ಡಾ. ಸುಧಾ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಹಂಪಿ ರಮಣ, ಧುರೀಣೆಯರಾದ ಡಾ. ಅರುಣಾ ಕಾಮಿನೇನಿ, ಡಾ. ರೇಣುಕಾ ಮಂಜುನಾಥ, ಅಲುವೇಲು, ಸಾಧನಾ ಹಿರೇಮಠ ಸೇರಿದಂತೆ ಇನ್ನಿತರರು ಇದ್ದರು.

35 ಭಾರತ ಸಾರಥಿ
17/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳಿ: ನಟರಾಜ್ ಬೂದಾಳು



ತುಮಕೂರು

ಗಾಂಧಿ, ಕುವೆಂಪು, ಅಂಬೇಡ್ಕರ್ ಹಾಗೂ ಬಸವಣ್ಣನವರಂತಹ ಮಹನೀಯರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗುತ್ತಿರುವುದು ಇಂದಿನ ಕಾಲದ ದೊಡ್ಡ ದುರಂತ ಎಂದು ಸಾಂಸ್ಕೃತಿಕ ಚಿಂತಕ ಹಾಗೂ ಬೌದ್ಧ ವಿದ್ವಾಂಸ ಡಾ. ಎಸ್. ನಟರಾಜ್ ಬೂದಾಳು ಕಳವಳ ವ್ಯಕ್ತಪಡಿಸಿದ್ದಾರೆ.

ತುಮಕೂರು ವಿಶ್ವವಿದ್ಯಾನಿಲಯದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರ ಹಾಗೂ ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ತರಬೇತಿ, ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಏ. 15 ಬುಧವಾರದಂದು ಆಯೋಜಿಸಲಾಗಿದ್ದ ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆಯಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಅಂಬೇಡ್ಕರ್ ಅವರು ದೇಶಕ್ಕೆ ರಾಜಕೀಯ ಮತ್ತು ಸಾಂಸ್ಕೃತಿಕ ಸಂವಿಧಾನದ ಜೊತೆಗೆ ಬೌದ್ಧ ಧರ್ಮದ ಕೊಡುಗೆ ನೀಡಿದ್ದಾರೆ. ಆದರೆ ಇಂದು ರಾಜಕೀಯ ಸಂವಿಧಾನಕ್ಕಿಂತಲೂ ಸಾಂಸ್ಕೃತಿಕ ಸಂವಿಧಾನಗಳೇ ನಮ್ಮ ಬದುಕನ್ನು ಹೆಚ್ಚು ನಿಯಂತ್ರಿಸುತ್ತಿವೆ. ಅಸ್ಪೃಶ್ಯತೆ, ಅಸಮಾನತೆ ಹಾಗೂ ಮೂಢನಂಬಿಕೆಗಳನ್ನು ನಿರ್ಧರಿಸುತ್ತಿರುವುದು ಇವೇ ಸಾಂಸ್ಕೃತಿಕ ಚೌಕಟ್ಟುಗಳು. ಅಂದಿನ ಜೀತ ಪದ್ಧತಿ ಇಂದು ಸ್ವರೂಪ ಬದಲಿಸಿಕೊಂಡು ಜೀವಂತವಾಗಿದೆ ಎಂದು ಅವರು ವಿಶ್ಲೇಷಿಸಿದರು.

ಒಂದೇ ಭಾಷೆ, ಒಂದೇ ಧರ್ಮ, ಒಂದೇ ರಾಷ್ಟ್ರ, ಒಬ್ಬನೇ ನಾಯಕ ಎಂಬ ಪರಿಕಲ್ಪನೆಗಳು ಸರ್ವಾಧಿಕಾರಕ್ಕೆ ದಾರಿ ಮಾಡಿಕೊಡುತ್ತವೆ. ಭಾರತದ ಬಹುತ್ವ ಮತ್ತು ವಿವಿಧತೆಯಲ್ಲಿನ ಏಕತೆಯನ್ನು ಉಳಿಸಿಕೊಳ್ಳುವುದು ಇಂದಿನ ಯುವ ಪೀಳಿಗೆಯ ಜವಾಬ್ದಾರಿಯಾಗಿದೆ. ನಿಸರ್ಗದ ನಿಯಮದಂತೆ ಯಾವುದೂ ಸ್ಥಿರವಲ್ಲ, ಯಾವುದೂ ಕೊನೆಯಲ್ಲ ಎಂಬ ವೈಜ್ಞಾನಿಕ ಸತ್ಯವನ್ನು ಅರಿಯಬೇಕು ಎಂದು ಕರೆ ನೀಡಿದರು. ನಾವು ದೇವಸ್ಥಾನಕ್ಕೆ ಹೋಗಬೇಕೋ ಬೇಡವೋ, ವಾಸ್ತು ನೋಡಬೇಕೋ ಬೇಡವೋ ಎಂಬುದನ್ನು ಇಂದಿಗೂ ಹಳೆಯ ಸಾಂಸ್ಕೃತಿಕ ಚೌಕಟ್ಟುಗಳೇ ನಿರ್ಧರಿಸುತ್ತಿವೆ. ಈ ದೇಶದ ಶೇ.70 ರಷ್ಟಿರುವ ಶೂದ್ರರಿಗೆ ತಮ್ಮದೇ ಆದ ಸಾಂಸ್ಕೃತಿಕ ನೆಲೆಗಟ್ಟಿನ ಅರಿವಿಲ್ಲದೆ ವಸಾಹತುಶಾಹಿ ಅಬ್ಬರಕ್ಕೆ ಮರುಳಾಗುತ್ತಿದ್ದಾರೆ ಎಂದು ಅವರು ಎಚ್ಚರಿಸಿದರು. ಭಾರತೀಯರು ಕಥೆ ಮತ್ತು ಸಂಕೇತಗಳನ್ನು ಪ್ರೀತಿಸುತ್ತಾರೆ. ಆದರೆ ವಚನಕಾರರು ಮತ್ತು ಅಂಬೇಡ್ಕರ್ ಅವರು ಕಥೆ ಹೇಳದೆ ಸತ್ಯವನ್ನು ಎಚ್ಚರಿಸಿದರು. ಬುದ್ಧ ಎಂದರೆ ಎಚ್ಚರ ಎಂದರ್ಥ. ಅಂಬೇಡ್ಕರ್ ಕೂಡ ಸಮಾಜವನ್ನು ಎಚ್ಚರಿಸಿದವರು. ಹಾಗಾಗಿ ಸಮಾಜದಲ್ಲಿ ಪ್ರಶ್ನಿಸುವ ಮನೋಭಾವ ಬೆಳೆಸಿಕೊಳ್ಳುವುದು ಅತ್ಯಗತ್ಯ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ಎಂ. ವೆಂಕಟೇಶ್ವರಲು ಮಾತನಾಡಿ, ಸಮಾಜದ ಸಮಸ್ಯೆಗಳಿಗೆ ಶಿಕ್ಷಣದ ಮೂಲಕವೇ ಪರಿಹಾರ ಕಂಡುಕೊಳ್ಳಬೇಕು. ಮಹನೀಯರ ಆದರ್ಶಗಳು ಕೇವಲ ಒಂದು ದಿನದ ಆಚರಣೆಗೆ ಸೀಮಿತವಾಗಬಾರದು. ಬದಲಾವಣೆಯು ವಿಶ್ವವಿದ್ಯಾನಿಲಯ ಮಟ್ಟದಿಂದಲೇ ಆರಂಭವಾಗಬೇಕು ಎಂದು ತಿಳಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕರಾದ ಪ್ರೊ. ಕೇಶವ ಸ್ವಾಗತಿಸಿದರು, ಗ್ರಂಥಪಾಲಕರಾದ ಡಾ. ಕುಮಾರ್ ವಂದಿಸಿದರು. ಪ್ರಾಧ್ಯಾಪಕರಾದ ಡಾ. ಅಶ್ವಿನಿ ನಿರೂಪಿಸಿದರು, ಪರೀಕ್ಷಾಂಗ ಕುಲಸಚಿವ ಪ್ರೊ. ಹೆಚ್. ಎಸ್. ಮೋಹನ್, ಪ್ರಾಂಶುಪಾಲ ಡಾ. ಜಿ. ದಾಕ್ಷಾಯಣಿ, ಡಾ. ಎಸ್. ಶ್ರೀನಿವಾಸ್ ಹಾಗೂ ಇತರರು ಉಪಸ್ಥಿತರಿದ್ದರು.

# ಗೊಬ್ಬರ ಖರೀದಿಗೆ

## ಎಫ್ಐಡಿ ಲಿಂಕ್ ಕಡ್ಡಾಯ




ದೇವನಹಳ್ಳಿ

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ರೈತರು ಯೂರಿಯಾ ರಸಗೊಬ್ಬರ ಖರೀದಿಸಲು ಇನ್ನು ಮುಂದೆ ಫಾರ್ಮರ್ ಐಡಿ ಸಂಖ್ಯೆಯನ್ನು ಹೊಂದಿರುವುದು ಕಡ್ಡಾಯ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಕಲಾವತಿ ತಿಳಿಸಿದ್ದಾರೆ.

ದೇವನಹಳ್ಳಿಯ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ನಡೆದ ರಸಗೊಬ್ಬರ ತಯಾರಕರು, ಸರಬರಾಜುದಾರರು ಮತ್ತು ಮಾರಾಟಗಾರರ ಸಭೆಯಲ್ಲಿ ಅವರು ಈ ಪ್ರಮುಖ ಮಾಹಿತಿ ನೀಡಿದರು.

ಪಾರದರ್ಶಕತೆಗಾಗಿ ಹೊಸ ನಿಯಮ: 2026–27ನೇ ಸಾಲಿನ ಮುಂಗಾರು ಹಂಗಾಮಿನಿಂದ ಈ ಹೊಸ ನಿಯಮ ಜಾರಿಗೆ ಬರಲಿದೆ. ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ತರಲು, ಕಾಳಸಂತೆ ಮಾರಾಟ ತಡೆಗಟ್ಟಲು ಮತ್ತು ಅರ್ಹ ರೈತರಿಗೆ ಗೊಬ್ಬರ ತಲುಪಿಸಲು ಈ ಕ್ರಮ ಕೈಗೊಳ್ಳಲಾಗಿದೆ. 'ಕೆ–ಕಿಸಾನ್' ತಂತ್ರಾಂಶದ ಮೂಲಕ ರೈತರ ಜಮೀನಿನ ವಿಸ್ತೀರ್ಣ ಮತ್ತು ಬೆಳೆದ ಬೆಳೆಗೆ ಅನುಗುಣವಾಗಿ ಅಗತ್ಯವಿರುವಷ್ಟು ಪ್ರಮಾಣದ ಗೊಬ್ಬರವನ್ನು ಮಾತ್ರ ವಿತರಿಸಲಾಗುವುದು ಎಂದು ಅವರು ವಿವರಿಸಿದರು.

ನೋಂದಣಿ ಮಾಡಿಕೊಳ್ಳುವುದು ಹೇಗೆ?

ಇದುವರೆಗೆ ಫಾರ್ಮರ್ ಐಡಿ ಹೊಂದಿರದ ರೈತರು ಕೂಡಲೇ ಈ ಕೆಳಗಿನ ದಾಖಲೆಗಳೊಂದಿಗೆ ನೋಂದಣಿ ಮಾಡಿಕೊಳ್ಳಲು ಕೋರಲಾಗಿದೆ.

ಅಗತ್ಯ ದಾಖಲೆಗಳು: ಪಹಣಿ, ಬ್ಯಾಂಕ್ ಪಾಸ್ ಬುಕ್ ಮತ್ತು ಆಧಾರ್ ಕಾರ್ಡ್.

ನೋಂದಣಿ ಕೇಂದ್ರಗಳು: ರೈತ ಸಂಪರ್ಕ ಕೇಂದ್ರ, ತೋಟಗಾರಿಕಾ ಇಲಾಖೆ ಅಥವಾ ಸಾಮಾನ್ಯ ಸೇವಾ ಕೇಂದ್ರಗಳು.

ಈಗಾಗಲೇ ಐಡಿ ಹೊಂದಿರುವ ರೈತರು ತಮ್ಮ ಎಲ್ಲಾ ಸರ್ವೆ ನಂಬರ್‌ಗಳನ್ನು ಅದಕ್ಕೆ ಲಿಂಕ್ ಮಾಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಚಿಲ್ಲರೆ ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ 'ಓ' ಫಾರಂಗಳನ್ನು ನವೀಕರಣಗೊಳಿಸಿಕೊಳ್ಳಬೇಕು. ಮಾರಾಟದ ವೇಳೆ ರೈತರ ಎಫ್ಐಡಿ ನಮೂದಿಸುವುದು ಕಡ್ಡಾಯ. ಒಂದು ವೇಳೆ 'ಓ' ಫಾರಂ ಇಲ್ಲದೆ ಮಾರಾಟ ಮಾಡಿದರೆ, ನಿಗದಿಗಿಂತ ಹೆಚ್ಚಿನ ಬೆಲೆಗೆ ಗೊಬ್ಬರ ಮಾರಾಟ ಮಾಡಿದರೆ ಕೃಷಿಯೇತರ ಉದ್ದೇಶಕ್ಕೆ ರಸಗೊಬ್ಬರ ನೀಡಿದರೆ, ಅಂತಹ ಮಾರಾಟಗಾರರ ಪರವಾನಗಿಯನ್ನು ತಕ್ಷಣವೇ ರದ್ದುಗೊಳಿಸಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಕಡಕ್ ಎಚ್ಚರಿಕೆ ನೀಡಿದ್ದಾರೆ.

# ಬಸವ ಜಯಂತಿ, ಭಗೀರಥ ಜಯಂತಿ ಅರ್ಥಪೂರ್ಣವಾಗಿ ಆಚರಿಸಿ: ಡಿಸಿ



ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಮುಂಬರುವ ಬಸವ ಜಯಂತಿ ಮತ್ತು ಭಗೀರಥ ಜಯಂತಿಗಳ ಜಿಲ್ಲಾ ಮಟ್ಟದ ಕಾರ್ಯಕ್ರಮಗಳನ್ನು ಶಿಷ್ಟಾಚಾರದಂತೆ ಅತ್ಯಂತ ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಯಂತಿಗಳ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಮುದಾಯದ ಮುಖಂಡರಿಂದ ಸಲಹೆಗಳನ್ನು ಸ್ವೀಕರಿಸಿದ ಬಳಿಕ ಆಚರಣೆಯ ದಿನಾಂಕ ಮತ್ತು ಸ್ಥಳಗಳನ್ನು ನಿಗದಿಪಡಿಸಿದರು.

ಆಚರಣೆಯ ವಿವರ:

ಬಸವ ಜಯಂತಿ: ಇದೇ ಏಪ್ರಿಲ್ 20ರಂದು ನಗರದ ಗಾಂಧಿಕೊಳಾಯಿ ರಸ್ತೆಯಲ್ಲಿರುವ ಬಸವನಗುಡಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಭಗೀರಥ ಜಯಂತಿ: ಏಪ್ರಿಲ್ 23ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಭಕ್ತಿದಾಯಕವಾಗಿ ಆಚರಿಸಲು ತೀರ್ಮಾನಿಸಲಾಗಿದೆ.


ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ: ವೇದಿಕೆ ಕಾರ್ಯಕ್ರಮಗಳಲ್ಲಿ ಮಹನೀಯರ ವಿಚಾರಧಾರೆಗಳ ಕುರಿತು ಉಪನ್ಯಾಸಗಳನ್ನು ಏರ್ಪಡಿಸಲಾಗುವುದು. ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಕಲ ಸಿದ್ಧತೆಗೆ ಆದೇಶ: ಕಾರ್ಯಕ್ರಮದ ಯಶಸ್ಸಿಗೆ ಆಹ್ವಾನ ಪತ್ರಿಕೆ ಮುದ್ರಣ, ವೇದಿಕೆ ಸಿದ್ಧತೆ, ಕುಡಿಯುವ ನೀರು, ಸ್ವಚ್ಛತೆ, ಮಧ್ಯಾಹ್ನದ ಉಪಹಾರ ಮತ್ತು ಪೊಲೀಸ್ ಭದ್ರತೆ ಸೇರಿದಂತೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಯಾವುದೇ ಲೋಪ ದೋಷಗಳು ಉಂಟಾಗದಂತೆ ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಬೇಕು ಎಂದು ತಾಕೀತು ಮಾಡಿದರು.

ಜಿಲ್ಲೆಯ ಸಮಸ್ತ ನಾಗರಿಕರು, ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಮತ್ತು ಸಮುದಾಯದ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅತಿಕ್ ಪಾಷಾ, ತಹಸೀಲ್ದಾರ್ ರಶ್ಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿ ಕುಮಾರ್ ಹಾಗೂ ಸಮುದಾಯದ ಮುಖಂಡರಾದ ಮಹೇಶ್ ಬಸಾಪುರ, ಪರಶುರಾಮಮೂರ್ತಿ ಸೇರಿದಂತೆ ಹಲವು ಗಣ್ಯರು ಹಾಜರಿದ್ದರು.

# ಭಕ್ತಿ ಪುಷ್ಪಾಂಜಲಿ ಸಮೂಹದ ವಿಜೃಂಭಣೆ ವಾರ್ಷಿಕೋತ್ಸವ



ಬೆಂಗಳೂರು

ನಗರದ ಕತ್ರಿಗುಪ್ಪೆಯ ಪೂರ್ಣಪ್ರಜ್ಞ ವಿದ್ಯಾಪೀಠದಲ್ಲಿ 'ಭಕ್ತಿ ಪುಷ್ಪಾಂಜಲಿ' ಮುಖಪುಟ ಸಮೂಹದ 7ನೇ ವಾರ್ಷಿಕೋತ್ಸವವು ಸಾಂಸ್ಕೃತಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಅತ್ಯಂತ ವಿಜೃಂಭಣೆಯಿಂದ ಜರುಗಿತು.

ಹರಿದಾಸರತ್ನ ಶ್ರೀ ವರಾಹಹರಿವಿಠಲದಾಸರು ದೀಪ ಪ್ರಜ್ವಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕುಮಾರಿ ಸಾನ್ವಿ ಜೋಯಿಸ್ ಹಾಗೂ ಕುಮಾರಿ ಐಕ್ಯ ಕುಲಕರ್ಣಿ ಅವರು ಗಣಪತಿ ಸ್ತುತಿಯನ್ನು ನೆರವೇರಿಸಿದರು. ಸಮೂಹದ ಸಂಸ್ಥಾಪಕಿ ಶ್ರೀಮತಿ ವಿಜಯಲಕ್ಷ್ಮಿ ಮಯ್ಯ ಅವರು ಕಳೆದ ಏಳು ವರ್ಷಗಳ ಸಾಧನೆಯ ವರದಿ ವಾಚಿಸಿದರು.

ಕಾರ್ಯಕ್ರಮದಲ್ಲಿ ಭಂಡಾರಕೇರಿ ಮಠದ ಪೀಠಾಧೀಶರಾದ ಶ್ರೀ ಶ್ರೀ ವಿದ್ಯೇಶತೀರ್ಥ ಸ್ವಾಮೀಜಿಯವರು ಹರಿದಾಸಿನಿ ಡಾ. ಎನ್.ಜಿ. ವಿಜಯಲಕ್ಷ್ಮಿ ಅವರ 27ನೇ ಕೃತಿಯಾದ "ಅಯೋಧ್ಯ ಕ್ಷೇತ್ರ ಪ್ರವಾಸ ಕಥನ ಮತ್ತು ಶ್ರೀರಾಮ ಭಜನಾಮೃತ" ಪುಸ್ತಕವನ್ನು ಲೋಕಾರ್ಪಣೆಗೊಳಿಸಿದರು. ಬಳಿಕ ಆಶೀರ್ವಚನ ನೀಡಿದ ಶ್ರೀಗಳು, ದಾಸಸಾಹಿತ್ಯವನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಸಮೂಹವು ಮಾಡುತ್ತಿರುವ ಸೇವೆಯನ್ನು ಶ್ಲಾಘಿಸಿದರು. ಇದೇ ಸಂದರ್ಭದಲ್ಲಿ ಹರಿದಾಸಿನಿ ಬಿ.ಕೆ. ಶ್ರೀಮತಿರಾವ್ ಅವರ ಕೃತಿಗಳ ಬಗ್ಗೆಯೂ ಮೆಚ್ಚುಗೆ ವ್ಯಕ್ತಪಡಿಸಿದರು.

ಸಮೂಹದ ಸದಸ್ಯರಿಂದ ನಡೆದ ಗುಂಪುಗಾಯನ, ಕೋಲಾಟ, ಸಮೂಹ ಗೀತೆಗಳು ಪ್ರೇಕ್ಷಕರ ಮನಸೂರೆಗೊಂಡವು. ಮಕ್ಕಳಿಂದ ನಡೆದ ಶ್ಲೋಕ ಪಠಣ ಹಾಗೂ ನೃತ್ಯ ಕಾರ್ಯಕ್ರಮಗಳು ವಿಶೇಷ ಆಕರ್ಷಣೆಯಾಗಿದ್ದವು. ಕಾರ್ಯಕ್ರಮದ ಅಂಗವಾಗಿ ಸಮೂಹದ ಹಿರಿಯ ಸದಸ್ಯರನ್ನು ಸನ್ಮಾನಿಸಲಾಯಿತು ಹಾಗೂ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ಸದಸ್ಯರಿಗೆ ಅಭಿನಂದನಾ ಪತ್ರಗಳನ್ನು ವಿತರಿಸಲಾಯಿತು.

ಸಮೂಹದ ನಿರ್ವಾಹಕಿ ಶ್ರೀಮತಿ ಸುಮನ ಪ್ರಭಾಕರ್ ಅವರು ವಂದನಾರ್ಪಣೆ ಮಾಡಿದರು. ಭಕ್ತಿ ಮತ್ತು ಸಾಹಿತ್ಯದ ಈ ಸಂಗಮದಲ್ಲಿ ಅಪಾರ ಸಂಖ್ಯೆಯ ಭಕ್ತರು ಹಾಗೂ ಸಾಹಿತ್ಯಾಸಕ್ತರು ಪಾಲ್ಗೊಂಡಿದ್ದರು.

# 29ರಿಂದ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ 59ನೇ ತಿರುಕಲ್ಯಾಣೋತ್ಸವ ಸಂಭ್ರಮ

ಚಿಕ್ಕಬಳ್ಳಾಪುರ

ತಾಲ್ಲೂಕಿನ ಗುಂಡ್ಲಗುರ್ಕಿ ಸಮೀಪದ ಬಂಡಳಕೆರೆಯ ಐತಿಹಾಸಿಕ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದ ಆವರಣದಲ್ಲಿ 59ನೇ ವರ್ಷದ ತಿರುಕಲ್ಯಾಣೋತ್ಸವ ಮಹೋತ್ಸವವು ಇದೇ ಏಪ್ರಿಲ್ 29ರಿಂದ ಮೇ 1ರವರೆಗೆ ಜರುಗಲಿದೆ ಎಂದು ದೇವಸ್ಥಾನದ ಪ್ರಧಾನ ಅರ್ಚಕರಾದ ತಿರುವೆಗಳಾಚಾರ್ ಹಾಗೂ ಚಕ್ರಪಾಣಾಚಾರ್ ತಿಳಿಸಿದ್ದಾರೆ.

ಈ ಬಾರಿ ಶ್ರೀ ನರಸಿಂಹ ಜಯಂತಿ ಹಾಗೂ ತಿರುಕಲ್ಯಾಣೋತ್ಸವವನ್ನು ಪಾಂಚರಾತ್ರಾಗಮ ರೀತ್ಯ ನಡೆಸಲು ಭಗವದ್ವಾಗತಾಚಾರ್ಯರು ನಿಶ್ಚಯಿಸಿದ್ದು, ಮೂರು ದಿನಗಳ ಕಾಲ ವಿವಿಧ ವೈದಿಕ ಹಾಗೂ ದೈವಿಕ ಕೈಂಕರ್ಯಗಳು ನೆರವೇರಲಿವೆ.

ಏಪ್ರಿಲ್ 29 (ಸೋಮವಾರ): ಮುಂಜಾನೆ ತೋರಣಾಲಂಕಾರದೊಂದಿಗೆ ಉತ್ಸವಕ್ಕೆ ಚಾಲನೆ ದೊರೆಯಲಿದೆ. ನಂತರ ಗಣಪತಿ ಹೋಮ, ಸುದರ್ಶನ ಹೋಮ, ಪ್ರಧಾನ ಹೋಮ ಹಾಗೂ ಶಾಂತಿ ಹೋಮಗಳು ಜರುಗಲಿವೆ. ಅಂದು ಮಧ್ಯಾಹ್ನ 12 ಗಂಟೆಗೆ ಪುರದಗಡ್ಡೆ ಗ್ರಾಮಸ್ಥರಿಂದ ಅನ್ನಸಂತರ್ಪಣೆ ಮತ್ತು ಶ್ರೀ ಲಕ್ಷ್ಮೀ ನರಸಿಂಹ ಲೋಕಕಲ್ಯಾಣೋತ್ಸವ ನಡೆಯಲಿದೆ.

ಮೇ 1 (ಬುಧವಾರ): ದೇವರಿಗೆ ವಿಶೇಷ ಅಭಿಷೇಕ, ಕುಂಕುಮಾರ್ಚನೆ, ಅಷ್ಟೋತ್ತರ ಹೂವಿನ ಸೇವೆಗಳು ನಡೆಯಲಿವೆ. ಅಂದು ಕಾಡಡಿಬ್ಬೂರು ಗ್ರಾಮಸ್ಥರಿಂದ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿದೆ. ಸಂಜೆ ಗರುಡೋತ್ಸವ, ಪಾರ್ವತೋತ್ಸವ ಹಾಗೂ ರಾತ್ರಿ ಶಯನೋತ್ಸವದೊಂದಿಗೆ ಮಹೋತ್ಸವಕ್ಕೆ ತೆರೆ ಬೀಳಲಿದೆ.

ಮೂರು ದಿನಗಳ ಕಾಲ ನಡೆಯುವ ಈ ಪುಣ್ಯ ಕಾರ್ಯಕ್ರಮಗಳಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ತಹಸೀಲ್ದಾರ್ ಹಾಗೂ ಮುಜರಾಯಿ ಅಧಿಕಾರಿ ರಶ್ಮಿ, ದೇವರಾಜ ಭಟ್ಟಾಚಾರ್, ಅನಂತ ಪದ್ಮನಾಭಾಚಾರಿ ಹಾಗೂ ಶ್ರೀವತ್ಸ ಅವರು ಜಂಟಿ ಪ್ರಕಟಣೆಯಲ್ಲಿ ಕೋರಿದ್ದಾರೆ.



ಬುಧವಾರ ಕೋಲಾರದ ಹಳೆ ಬಸ್ ನಿಲ್ದಾಣದ ಸಮೀಪದಲ್ಲಿ ಭಾರತ ರತ್ನ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜನ್ಮ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಂಬೇಡ್ಕರ್ ಅವರ ಪ್ರತಿಮೆಗೆ ಪುಷ್ಪಾರ್ಚನೆ ಸಲ್ಲಿಸಿ, ಅವರ ಆದರ್ಶಗಳು, ನಡೆ-ನುಡಿ ಹಾಗೂ ಸರಳ ಜೀವನವನ್ನು ಸ್ಮರಿಸಲಾಯಿತು. ಅವರ ತತ್ವಗಳು ಮತ್ತು ಸಮಾಜಕ್ಕೆ ನೀಡಿದ ಮಹತ್ವದ ಕೊಡುಗೆಗಳನ್ನು ನೆನಪಿಸಿಕೊಂಡು, ಅವರ ಮಾರ್ಗದಲ್ಲಿ ಸಾಗುವ ಸಂಕಲ್ಪವನ್ನು ವ್ಯಕ್ತಪಡಿಸಲಾಯಿತು. ಈ ವೇಳೆ ಬಿಜೆಪಿ ಮುಖಂಡ ಓಂ ಶಕ್ತಿ ಚಲಪತಿ ಸೇರಿದಂತೆ ಹಲವರು ಇದ್ದರು.

# ದಲಿತ ಮತಗಳಿಗಾಗಿ ಕಾಂಗ್ರೆಸ್‌ನಿಂದ ಅಂಬೇಡ್ಕರ್ ಜಪ: ಡಾ. ಕೆ. ಸುಧಾಕರ್ ಟೀಕೆ



ಬಾಗೇಪಲ್ಲಿ

"ಸ್ವಾತಂತ್ರ್ಯ ಪೂರ್ವದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ಉದ್ದೇಶಪೂರ್ವಕವಾಗಿ ಎರಡು ಬಾರಿ ಸೋಲಿಸಿದ್ದೇ ಕಾಂಗ್ರೆಸ್ ಪಕ್ಷ. ಅಂಬೇಡ್ಕರ್ ನಿಧನರಾದಾಗಲೂ ಸಂಸ್ಕಾರಕ್ಕೆ ಸಹಕರಿಸದ ಅಮಾನವೀಯ ಸಂಸ್ಕೃತಿ ಕಾಂಗ್ರೆಸ್ಸಿಗದ್ದಾಗಿತ್ತು," ಎಂದು ಸಂಸದ ಡಾ. ಕೆ. ಸುಧಾಕರ್ ಕಿಡಿಕಾರಿದರು.

ಪಟ್ಟಣದ ಹೊರವಲಯದ ಬಾಬುಫಾರಂನಲ್ಲಿ ಎನ್.ಡಿ.ಎ. ಮುಖಂಡ ಹರಿನಾಥರೆಡ್ಡಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಏರ್ಪಡಿಸಲಾಗಿದ್ದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

"ಕೊಲಂಬೋ ವಿಶ್ವವಿದ್ಯಾಲಯದಲ್ಲಿ ವಿಶ್ವದ ಬುದ್ಧಿಜೀವಿಗಳ ಪಟ್ಟಿಯಲ್ಲಿ ಅಂಬೇಡ್ಕರ್ ಅವರ ಭಾವಚಿತ್ರ ಮೊದಲ ಸ್ಥಾನದಲ್ಲಿದೆ. ಆದರೆ, ಕಾಂಗ್ರೆಸ್ ಮಾತ್ರ ಅವರನ್ನು ಸದಾ ತುಳಿಯುವ ಕೆಲಸ ಮಾಡಿತು. ಅಂದು ಅಂಬೇಡ್ಕರ್ ವಿರುದ್ಧ ಅವರ ಕಾರ್ಯದರ್ಶಿಯನ್ನೇ ಅಭ್ಯರ್ಥಿಯನ್ನಾಗಿ ಮಾಡಿ ನೆಹರು ಪ್ರಚಾರ ನಡೆಸಿದ್ದರು. ಇಂದು ಅಂಬೇಡ್ಕರ್ ಜಯಂತಿಗೆ ಜಾಗ ನೀಡದೆ ಬಾಗೇಪಲ್ಲಿಯಲ್ಲೂ ಅದೇ ಸಂಸ್ಕೃತಿ ಮುಂದುವರಿಯುತ್ತಿದೆ. ಅಂಬೇಡ್ಕರ್ ಅವರಿಗೆ ಭಾರತ ರತ್ನ ನೀಡಿದ್ದು ಅಟಲ್ ಬಿಹಾರಿ ವಾಜಪೇಯಿ ನೇತೃತ್ವದ ಬಿಜೆಪಿ ಸರ್ಕಾರವೇ ಹೊರತು ಕಾಂಗ್ರೆಸ್ ಅಲ್ಲ," ಎಂದು ಸ್ಮರಿಸಿದರು.

ಎನ್.ಡಿ.ಎ. ಮುಖಂಡ ಹರಿನಾಥರೆಡ್ಡಿ ಮಾತನಾಡಿ, "ಸಮಾಜಸೇವೆಗೆ ಅಡ್ಡಿಪಡಿಸುವ ಶಾಸಕರ ನೀಚ ರಾಜಕೀಯ ಅಸಹನೀಯ. ಸಮಾಜಮುಖಿ ಕೆಲಸಗಳಿಗೆ ಅಡ್ಡಿಪಡಿಸಿದರೆ ಸುಮ್ಮನಿರುವುದಿಲ್ಲ. ದಲಿತ ಮುಖಂಡರ ಮೇಲೆ ರೌಡಿಶೀಟ್ ಹಾಕಿಸುವುದು, ತುಳಿಯುವುದು ನಿಮ್ಮ ಅಭಿವೃದ್ಧಿಯೇ?" ಎಂದು ಶಾಸಕರ ವಿರುದ್ಧ ಛಾಟಿ ಬೀಸಿದರು. ರಸ್ತೆಗಳ ಹದಗೆಟ್ಟ ಸ್ಥಿತಿ ಮತ್ತು ಕ್ಷೇತ್ರದ ಭೂಕಬಳಿಕೆಯ ವಿಚಾರಗಳ ಬಗ್ಗೆಯೂ ಅವರು ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ರಾಜಬೀದಿಗಳಲ್ಲಿ ಕಾರು ಹಾಗೂ ಆಟೋಗಳ ಮೂಲಕ ಭರ್ಜರಿ ರ್‍ಯಾಲಿ ನಡೆಸಲಾಯಿತು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಮತ್ತು ಪತ್ರಕರ್ತರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಂಜಾರ ಗುರುಪೀಠದ ಮಹೇಶ್ ಶರ್ಮಾ ಶ್ರೀಗಳು, ಸರ್ವಧರ್ಮ ಗುರುಪೀಠದ ಶರಣಬಸವ ಸಂಗಮೇಶ್ವರ ಶ್ರೀಗಳು ಸಾನಿಧ್ಯ ವಹಿಸಿದ್ದರು. ಬಿಜೆಪಿ ಜಿಲ್ಲಾ ನಿಕಟಪೂರ್ವ ಅಧ್ಯಕ್ಷ ರಾಮಲಿಂಗಪ್ಪ, ಮಾದಾರ ಮಹಾಸಂಘದ ಅಧ್ಯಕ್ಷ ಅ.ನ. ಮೂರ್ತಿ ಹಾಗೂ ಜೆ.ಪಿ. ಚಂದ್ರಶೇಖರರೆಡ್ಡಿ ಸೇರಿದಂತೆ ನೂರಾರು ಮುಖಂಡರು ಉಪಸ್ಥಿತರಿದ್ದರು.

# 'ಜಾತಿ ಪದ್ಧತಿ ಮುಕ್ತ ಸಮಾಜ ಮುಂದಾಗಿ'



ತಿಪಟೂರು

"ಸ್ವಾತಂತ್ರ್ಯ ಬಂದು ಸಂವಿಧಾನ ಜಾರಿಯಾದ ದಶಕಗಳ ನಂತರವೂ ಸಮಾಜದಲ್ಲಿ ಅಸ್ಪೃಶ್ಯತೆ ಮತ್ತು ಮರ್ಯಾದೆ ಹತ್ಯೆಗಳಂತಹ ಪಿಡುಗುಗಳು ಜೀವಂತವಾಗಿವೆ. ಇಂತಹ ಸಮಾಜ ಪೀಡಕ ಪದ್ಧತಿಗಳನ್ನು ತೊಡೆದುಹಾಕಿ ಸಮಸಮಾಜ ನಿರ್ಮಾಣ ಮಾಡಲು ವಿದ್ಯಾರ್ಥಿ ಸಮೂಹ ಜಾಗೃತರಾಗಬೇಕು," ಎಂದು ಡಾ.ಬಿ.ಆರ್. ಅಂಬೇಡ್ಕರ್ ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ರಾಜಶೇಖರ್ ಕೆ. ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎಪಿಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಅಂಬೇಡ್ಕರ್ ಯುವಜನ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವಸಂಸ್ಥೆ ಮಾನ್ಯ ಮಾಡಿದ ಜ್ಞಾನದ ದಿನ: "ಅಂಬೇಡ್ಕರ್ ಅವರು ಜಗತ್ತಿನಲ್ಲಿಯೇ ಅತಿ ಹೆಚ್ಚು ಪದವಿಗಳನ್ನು ಪಡೆದ ಧೀಮಂತ ನಾಯಕ. ಅವರ ಜ್ಞಾನದ ಹರವು ಅಪಾರವಾಗಿದ್ದರಿಂದಲೇ ಅವರ ಜನ್ಮದಿನವನ್ನು ಇಂದು ಜಗತ್ತಿನಾದ್ಯಂತ 'ಜ್ಞಾನದ ದಿನ'ವನ್ನಾಗಿ ಆಚರಿಸಲಾಗುತ್ತಿದೆ. ಸಾಮಾಜಿಕ ಸಮಾನತೆ, ಲಿಂಗ ಸಮಾನತೆ ಮತ್ತು ಕಾರ್ಮಿಕರ ಹಕ್ಕುಗಳಿಗಾಗಿ ಅವರು ನೀಡಿದ ಕೊಡುಗೆ ಇಡೀ ದೇಶಕ್ಕೆ ಆಸ್ತಿ," ಎಂದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಶಶಿಕುಮಾರ್ ಎಚ್.ಸಿ. ಮಾತನಾಡಿ, "ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ. ಅವರು ಭಾರತದ ಪ್ರತಿಯೊಬ್ಬ ಪ್ರಜೆಯ ಹಕ್ಕುಗಳಿಗಾಗಿ ಹೋರಾಡಿದವರು. ಅವರನ್ನು ಒಂದು ಜಾತಿಗೆ ಕಟ್ಟಿ ಹಾಕುವುದು ವಿಪರ್ಯಾಸದ ಸಂಗತಿ. ನಾವೆಲ್ಲರೂ ಸಂವಿಧಾನದ ಆಶಯಗಳನ್ನು ಅರಿತು ಬಾಳಬೇಕು," ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ವಿತರಿಸಲಾಯಿತು. ಪ್ರಥಮ ಅಶ್ವಿನಿ ಡಿ.ಬಿ (ಬಿ.ಎ ತೃತೀಯ ವರ್ಷ) ದ್ವಿತೀಯ ಮೊನಿಕಾ ಎಲ್.ಎಸ್ ತೃತೀಯ ಚಿನ್ಮಯಿ ಬಿ.ಸಿ (ದ್ವಿತೀಯ ವರ್ಷ) ಬಹುಮಾನ ಪಡೆದ ವಿದ್ಯಾರ್ಥಿಗಳು.

ವೇದಿಕೆಯಲ್ಲಿ ಸಂಸ್ಥೆಯ ನಿರ್ದೇಶಕ ಅನಿಲ್ ಕುಮಾರ್, ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಕುಮಾರ್ ಸಿ.ಜಿ, ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ್ ಇ, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ. ಅನುಪ್ರಸಾದ್ ಕೆ.ಆರ್, ಮನಃಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಬಾಗಪ್ಪ ಚಲವಾದಿ ಹಾಗೂ ಕಾಲೇಜಿನ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂಬೇಡ್ಕರ್ ಚಿಂತನೆಗಳ ಗಣಿ: ಡಾ. ರೂಪಾ ರೈನಾ

ರಾಮನಗರ

ಭಾರತ ದೇಶದ ಇತಿಹಾಸದಲ್ಲಿ ಅನೇಕ ಮಹಾನ್ ವ್ಯಕ್ತಿತ್ವಗಳು ಉದಯಿಸಿ ತಮ್ಮ ಚಿಂತನೆಗಳ ಮೂಲಕ ಸಮಾಜದ ಮೇಲೆ ಅಚ್ಚಳಿಯದ ಗುರುತು ಮೂಡಿಸಿದ್ದಾರೆ. ಅಂತಹ ಮಹಾನ್ ಚೇತನರಲ್ಲಿ ಪ್ರಮುಖರಾದವರು ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್. ಅವರು ಕೇವಲ ಸಂವಿಧಾನ ರಚನೆಗಾರರಷ್ಟೇ ಅಲ್ಲ, ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಮಾನವ ಹಕ್ಕುಗಳ ಪರ ಹೋರಾಡಿದ ಕ್ರಾಂತಿಕಾರಿ ಚಿಂತಕರೂ ಹೌದು. ಅವರ ಜೀವನ ಮತ್ತು ಚಿಂತನೆಗಳು ಇಂದಿಗೂ ನಮ್ಮ ಸಮಾಜಕ್ಕೆ ದಾರಿದೀಪವಾಗಿವೆ. ಅಂಬೇಡ್ಕರ್ ಮಹತ್ವದ ಚಿಂತನೆಗಳ ಗಣಿ ಎಂದು ರಾಜ್ಯಶಾಸ್ತ್ರ ಪ್ರಾಧ್ಯಾಪಕಿ ಡಾ. ರೂಪಾ ರೈನಾ ಅವರು ಅಭಿಪ್ರಾಯಪಟ್ಟರು.

ಕನಕಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಡಾ. ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು.

ಅಂಬೇಡ್ಕರ್ ಅವರ ವ್ಯಕ್ತಿತ್ವದ ಆಳವನ್ನು ಚೆನ್ನಾಗಿ ಪ್ರತಿಬಿಂಬಿಸುತ್ತದೆ. ಡಾ. ಅಂಬೇಡ್ಕರ್ ಅವರು ಸಮಾಜದಲ್ಲಿ ಆಳವಾಗಿ ನೆಲೆಗೊಂಡಿದ್ದ ಅಸಮಾನತೆ, ಅಸ್ಪೃಶ್ಯತೆ ಮತ್ತು ಶೋಷಣೆಯ ವಿರುದ್ಧ ಹೋರಾಡಿದ ಮಹಾನ್ ನಾಯಕರು. ಅವರು ತಾವು ಅನುಭವಿಸಿದ ಅನ್ಯಾಯವನ್ನು ಕೇವಲ ವೈಯಕ್ತಿಕ ಸಮಸ್ಯೆಯಾಗಿ ನೋಡದೇ, ಅದನ್ನು ಸಮಸ್ತ ಶೋಷಿತ ವರ್ಗಗಳ ಸಮಸ್ಯೆಯಾಗಿ ಪರಿಗಣಿಸಿ, ಅದರ ವಿರುದ್ಧ ಸಂಘಟಿತ ಹೋರಾಟ ನಡೆಸಿದರು. ಅವರ ಚಿಂತನೆಗಳ ಮೂಲದಲ್ಲೇ ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವ ಎಂಬ ಮೌಲ್ಯಗಳು ಇದ್ದವು ಎಂದರು.

ಅಂಬೇಡ್ಕರ್ ಅವರ ಚಿಂತನೆಗಳನ್ನು ವಿಶ್ಲೇಷಿಸಿ, ಅವರು ಕೇವಲ ಒಂದು ಸಮುದಾಯದ ನಾಯಕನಲ್ಲ, ಸಂಪೂರ್ಣ ಮಾನವಕುಲದ ಮಾರ್ಗದರ್ಶಕ ಎಂದು ಹೇಳಿದರು. ಅಂಬೇಡ್ಕರ್ ಅವರ ದೃಷ್ಟಿಯಲ್ಲಿ ಶಿಕ್ಷಣವೇ ಸಮಾಜದ ಪರಿವರ್ತನೆಯ ಪ್ರಮುಖ ಸಾಧನ. "ಶಿಕ್ಷಣ ಪಡೆಯಿರಿ, ಸಂಘಟಿತರಾಗಿ, ಹೋರಾಡಿ" ಎಂಬ ಅವರ ಘೋಷಣೆ ಇಂದಿಗೂ ಯುವಜನತೆಗೆ ಪ್ರೇರಣೆ ನೀಡುತ್ತದೆ ಎಂದು ತಿಳಿಸಿದರು.

ಅಂಬೇಡ್ಕರ್ ಅವರು ಸಮಾಜದಲ್ಲಿ ಸಮಾನತೆ ಸಾಧಿಸಲು ಶಿಕ್ಷಣವನ್ನು ಅತ್ಯಂತ ಪ್ರಮುಖ ಆಯುಧವೆಂದು ಪರಿಗಣಿಸಿದರು. ಅವರು ತಮ್ಮ ಜೀವನದಲ್ಲಿ ಎಷ್ಟೇ ಅಡೆತಡೆಗಳು ಬಂದರೂ, ವಿದ್ಯಾಭ್ಯಾಸವನ್ನು ಕೈಬಿಡಲಿಲ್ಲ. ಕೊಲಂಬಿಯಾ ವಿಶ್ವವಿದ್ಯಾಲಯ ಮತ್ತು ಲಂಡನ್ ಶಾಲಾ ಆಫ್ ಎಕಾನಾಮಿಕ್ಸ್ ನಲ್ಲಿ ಅವರು ಉನ್ನತ ಶಿಕ್ಷಣ ಪಡೆದರು. ಅವರ ಈ ಸಾಧನೆಗಳು ಶೋಷಿತ ಸಮುದಾಯದ ಯುವಕರಿಗೆ ಹೊಸ ದಾರಿಯನ್ನು ತೋರಿಸಿವೆ ಎಂದವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ. ಶಾಮಲ ಬಿ ಅವರು ಮಾತನಾಡಿ, "ಅಂಬೇಡ್ಕರ್ ದೇಶಕ್ಕೆ ಸೈದ್ಧಾಂತಿಕ ತಿರುವು ಕೊಟ್ಟ ಮಹಾನ್ ಚೇತನ" ಎಂದು ಹೇಳಿದರು. ನಿಜಕ್ಕೂ, ಅಂಬೇಡ್ಕರ್ ಅವರ ಚಿಂತನೆಗಳು ಭಾರತದ ರಾಜಕೀಯ ಮತ್ತು ಸಾಮಾಜಿಕ ವ್ಯವಸ್ಥೆಗೆ ಹೊಸ ದಿಕ್ಕನ್ನು ನೀಡಿದವು. ಅವರು ರೂಪಿಸಿದ ಭಾರತೀಯ ಸಂವಿಧಾನವು ವಿಶ್ವದಲ್ಲೇ ಅತ್ಯಂತ ಪ್ರಗತಿಪರ ಸಂವಿಧಾನಗಳಲ್ಲಿ ಒಂದಾಗಿದೆ ಎಂದು ಹೇಳಿದರು.

ಅಂಬೇಡ್ಕರ್ ಅವರ ಸಂವಿಧಾನದಲ್ಲಿ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕುಗಳನ್ನು ನೀಡಲಾಗಿದೆ. ಜಾತಿ, ಧರ್ಮ, ಲಿಂಗ ಇತ್ಯಾದಿ ಆಧಾರದ ಮೇಲೆ ನಡೆಯುವ ಭೇದಭಾವವನ್ನು ಸಂಪೂರ್ಣವಾಗಿ ತಿರಸ್ಕರಿಸಲಾಗಿದೆ. ಇದು ಅವರ ಸಮಾನತೆಯ ಕನಸಿನ ಪ್ರತಿಫಲವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಇತಿಹಾಸ ವಿಭಾಗದ ಮುಖ್ಯಸ್ಥರಾದ ಸಾವಿತ್ರಿ ಅವರು ಪ್ರಾಸ್ತಾವಿಕ ನುಡಿಗಳನ್ನು ಆಡಿದರು. ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ವಿಶ್ವರಾಧ್ಯ ಅವರು ಸ್ವಾಗತಿಸಿದರು. ದೈಹಿಕ ಶಿಕ್ಷಣ ನಿರ್ದೇಶಕ ಆರ್. ನಂಜುಂಡ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ಈ ಎಲ್ಲರ ಸಹಕಾರದಿಂದ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು. ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಡಾ. ಕೋಮಲ ಎ.ಸಿ, ಡಾ. ಅಕ್ಷತಾ ಪರಂಜತಿ ಕುಮಾರ್, ಡಾ. ಗೀತಾಬಾಯಿ ಬಸವರಾಜು, ಡಾ. ಮುಕ್ತಾರ್ ಪಾಷಾ, ಮಹಮ್ಮದ್ ಪಾಷಾ, ಪ್ರಸನ್ನ ಕುಮಾರ್, ಲೋಕೇಶ್, ಮಂಜುನಾಥ್, ಚಂದ್ರಶೇಖರ್ ಸೇರಿದಂತೆ ಕಾಲೇಜಿನ ಬೋಧಕರು ಬೋಧಕೇತರ ಸಿಬ್ಬಂದಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಭಾರತ ಸಾರಥಿ
BHARATHA SARATHI KANNADA DAILY NEWS PAPER

17/04/2026



## 24ರಿಂದ ಬೇಸಿಗೆ ಶಿಬಿರ

ಕೋಲಾರ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಬಾಲಭವನ ಸೊಸೈಟಿ, ಕೋಲಾರ ರವರಿಂದ 2026–27 ಸಾಲಿನಲ್ಲಿ 5 ವರ್ಷದಿಂದ 16 ವರ್ಷದವರಿಗಿನ ಮಕ್ಕಳಿಗೆ 15 ದಿನಗಳ ಜಿಲ್ಲಾ ಮಟ್ಟದ ಬೇಸಿಗೆ ಶಿಬಿರವನ್ನು ಇದೇ 24 ರಿಂದ ಮೇ 11ರ ವರೆಗೆ ಉಪ ನಿರ್ದೇಶಕರ ಕಚೇರಿಯ ಸಭಾ ಭವನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ನ್ಯಾಯಲಯ ಆವರಣ, ಕೋಲಾರ ಇಲ್ಲಿ ಚಿತ್ರಕಲೆ, ಕರಕುಶಲ, ಯೋಗ, ಕರಾಟೆ, ಸಂಗೀತ ಹಾಗೂ ಸಮೂಹ ನೃತ್ಯ ಚಟುವಟಿಕೆಗಳನ್ನು ಬಹುಮುಖ ಪ್ರತಿಭೆಯುಳ್ಳ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುವುದು. ಶಾಲ ಮಕ್ಕಳು, ಗ್ರಾಮೀಣ ಪ್ರದೇಶದ ಹಾಗೂ ಸೌಲಭ್ಯ ವಂಚಿತ ಮಕ್ಕಳಿಗೆ ಸರ್ಕಾರಿ ಸುಧಾರಣಾ ಸಂಸ್ಥೆಗಳ ಬಾಲಕರ, ಬಾಲಕಿಯರ ಬಾಲಮಂದಿರ ಮಕ್ಕಳಿಗೆ ಶಿಬಿರದಲ್ಲಿ ವಿಶೇಷ ಆದ್ಯತೆ ನೀಡಲಾಗುವುದು. ಆಸಕ್ತಿ ಇರುವ ಮಕ್ಕಳು ಏಪ್ರಿಲ್ 23 ರೊಳಗೆ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು. ಮೊದಲು ಬಂದವರಿಗೆ ಮೊದಲ ಆದ್ಯತೆ, ಭಾಗವಹಿಸಿದ ಎಲ್ಲಾ ಮಕ್ಕಳಿಗೆ ಪ್ರಮಾಣ ಪತ್ರ ನೀಡಲಾಗುವುದು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಬಾಲಭವನ ಸೊಸೈಟಿ, ಕೋಲಾರ ರವರಿಂದ 2026–27 ಸಾಲಿನಲ್ಲಿ 5 ವರ್ಷದಿಂದ 16 ವರ್ಷದವರಿಗಿನ ಮಕ್ಕಳಿಗೆ 15 ದಿನಗಳ ಜಿಲ್ಲಾ ಮಟ್ಟದ ಬೇಸಿಗೆ ಶಿಬಿರವನ್ನು ಇದೇ 24 ರಿಂದ ಮೇ 11ರ ವರೆಗೆ ಉಪ ನಿರ್ದೇಶಕರ ಕಚೇರಿಯ ಸಭಾ ಭವನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ನ್ಯಾಯಲಯ ಆವರಣ, ಕೋಲಾರ ಇಲ್ಲಿ ಚಿತ್ರಕಲೆ, ಕರಕುಶಲ, ಯೋಗ, ಕರಾಟೆ, ಸಂಗೀತ ಹಾಗೂ ಸಮೂಹ ನೃತ್ಯ ಚಟುವಟಿಕೆಗಳನ್ನು ಬಹುಮುಖ ಪ್ರತಿಭೆಯುಳ್ಳ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುವುದು. ಶಾಲ ಮಕ್ಕಳು, ಗ್ರಾಮೀಣ ಪ್ರದೇಶದ ಹಾಗೂ ಸೌಲಭ್ಯ ವಂಚಿತ ಮಕ್ಕಳಿಗೆ ಸರ್ಕಾರಿ ಸುಧಾರಣಾ ಸಂಸ್ಥೆಗಳ ಬಾಲಕರ, ಬಾಲಕಿಯರ ಬಾಲಮಂದಿರ ಮಕ್ಕಳಿಗೆ ಶಿಬಿರದಲ್ಲಿ ವಿಶೇಷ ಆದ್ಯತೆ ನೀಡಲಾಗುವುದು. ಆಸಕ್ತಿ ಇರುವ ಮಕ್ಕಳು ಏಪ್ರಿಲ್ 23 ರೊಳಗೆ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು. ಮೊದಲು ಬಂದವರಿಗೆ ಮೊದಲ ಆದ್ಯತೆ, ಭಾಗವಹಿಸಿದ ಎಲ್ಲಾ ಮಕ್ಕಳಿಗೆ ಪ್ರಮಾಣ ಪತ್ರ ನೀಡಲಾಗುವುದು.

## ಹೆದ್ದಾರಿಯಲ್ಲಿ ಸ್ವಚ್ಛತೆ ಕಾಪಾಡಿ, ಇಲ್ಲವೇ ಕ್ರಮ ಎದುರಿಸಿ: ಜಿಲ್ಲಾಧಿಕಾರಿ

ರಾಮನಗರ

ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ವೇನ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯ ಮಾರ್ಗದ ಎರಡೂ ಬದಿಯಲ್ಲಿ ಘನತ್ಯಾಜ್ಯ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಇಲ್ಲದಿದ್ದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಸೋಮವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಷ್ಟ್ರೀಯ ಹೆದ್ದಾರಿ 275 ಎಕ್ಸ್‌ಪ್ರೆಸ್ ವೇ ಹಾಗೂ ಅದರ ಸರ್ವಿಸ್ ರಸ್ತೆಗಳ ಬದಿಯಲ್ಲಿ ಘನ ತ್ಯಾಜ್ಯಗಳು ಸಾಕಷ್ಟು ಕಂಡುಬರುತ್ತಿದೆ. ಇದು ವಾಹನ ಸವಾರರಿಗೆ ತೊಡಕಾಗಿ ಅಪಘಾತ ಸಂಭವಿಸುವ ಸಾಧ್ಯತೆಗಳಿವೆ. ಆದಕಾರಣ ರಸ್ತೆ ಸವಾರರ ಸುರಕ್ಷತಾ ದೃಷ್ಟಿಯಿಂದ, ತ್ಯಾಜ್ಯ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸಲೇಬೇಕು,



ಈ ಹೆದ್ದಾರಿಯಲ್ಲಿ ಸ್ವಚ್ಛತೆ ಕಾಪಾಡದಿದ್ದರೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರ ವಿರುದ್ಧವೇ ಕ್ರಮ ಕೈಗೊಳ್ಳಲಾಗುವುದು ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ತಾಂತ್ರಿಕ ವ್ಯವಸ್ಥಾಪಕರಾದ ಚಾರುಲತಾ ಅವರಿಗೆ ಎಚ್ಚರಿಕೆ ನೀಡಿದರು.

ರಾಷ್ಟ್ರೀಯ ಹೆದ್ದಾರಿ 275 ಎಕ್ಸ್ಪೆಸ್ ವೇ ರಸ್ತೆಯ ಬ್ರಿಡ್ಜ್‌ಗಳು, ಅಂಡರ್ ಪಾಸ್‌ಗಳು, ಸರ್ವಿಸ್ ರಸ್ತೆಗಳಲ್ಲಿ ಘನತ್ಯಾಜ್ಯ ಕಂಡುಬರುತ್ತಿದ್ದು, ಸೂಕ್ತವಾಗಿ ತ್ಯಾಜ್ಯ ವಿಲೇವಾರಿ ಆಗುತ್ತಿಲ್ಲ. ಹೆದ್ದಾರಿಯ ಕೆಲವು ಬದಿಗಳಲ್ಲಿ ಕಬ್ಬಿಣದ ಮೆಸ್ ಬೇಲಿಯನ್ನು ಕತ್ತರಿಸಲಾಗಿದೆ ಅದನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು, ಹೆದ್ದಾರಿಯ ವಿವಿಧೆಡೆ ಬಲ್ಬ್‌ಗಳ ಕಳ್ಳತನವಾಗುತ್ತಿರುವುದನ್ನು ತಡೆಗಟ್ಟಲು ಕಡ್ಡಾಯವಾಗಿ ಸಿಸಿಟಿವಿ ಅಳವಡಿಸಬೇಕು. ರಾಷ್ಟ್ರೀಯ ಹೆದ್ದಾರಿ ಮತ್ತು ಸರ್ವೀಸ್ ರಸ್ತೆಯಲ್ಲಿ ನಿಷೇಧಿತ ಸ್ಥಳ, ನೋ ಪಾರ್ಕಿಂಗ್ ನಂತಹ ಸೂಚನಾ ಫಲಕಗಳು ಹಾಗೂ ಅಂಡರ್ ಪಾಸ್‌ಗಳ ಹತ್ತಿರ ಸಿಗ್ನಲ್ ಬೋರ್ಡ್‌ಗಳನ್ನು ಅಳವಡಿಸಿ ಪ್ರಯಾಣಿಕರಿಗೆ ಅರಿವು ಮೂಡಿಸಬೇಕು, ಅದೇ ರೀತಿ ಎಕ್ಸ್‌ಪ್ರೆಸ್ ವೇನ ಆಗಮನ ಹಾಗೂ ನಿರ್ಗಮನದಲ್ಲಿ ವಿದ್ಯುತ್ ಬೆಳಕಿನ ವ್ಯವಸ್ಥೆಯೊಂದಿಗೆ ಸಿಸಿಟಿವಿಗಳನ್ನು ಅಳವಡಿಸಬೇಕು ಎಂದು ಸೂಚನೆ ನೀಡಿದರು.

ಕುಂಬಳಗೂಡಿನಿಂದ ನಿಡಘಟ್ಟ ನಡುವೆ ಎರಡು ಹೈವೇ ಪೆಟ್ರೋಲ್ ವಾಹನಗಳು ಗಸ್ತು ತಿರುಗುತ್ತಿದ್ದು, ಗಸ್ತು ಪ್ರಾರಂಭಿಸಿದ ಸ್ಥಳದಿಂದ ವಾಪಸ್ ಅದೇ ಸ್ಥಳಕ್ಕೆ ಬರಲು ಹೆಚ್ಚಿನ ಸಮಯ ಬೇಕಾಗುತ್ತದೆ ಆದ ಕಾರಣ ಮತ್ತೆರಡು ಹೈವೇ ಪೆಟ್ರೋಲ್ ವಾಹನಗಳನ್ನು ಗಸ್ತು ತಿರುಗಲು ವ್ಯವಸ್ಥೆ ಮಾಡಬೇಕು, ರಾಷ್ಟ್ರೀಯ ಹೆದ್ದಾರಿ ಸಂಸ್ಥೆಯವರು ತಮ್ಮ ವಾಹನಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಗಸ್ತು ನಿರ್ವಹಣೆ ಮಾಡಿದಲ್ಲೀ ಅಪರಾಧ ಚಟುವಟಿಕೆಗಳನ್ನು ನಿಗಾ ವಹಿಸಬಹುದಾಗಿದೆ ಎಂದವರು ತಿಳಿಸಿದರು.

ಜಿಲ್ಲಾ ಹಾಗೂ ತಾಲ್ಲೂಕುಗಳ ಮುಖ್ಯ ರಸ್ತೆಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಡಿವೈಎಸ್‌ಪಿ ರಾಮಚಂದ್ರಯ್ಯ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಹಾಗೂ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಕ್ಕಳಿಗೆ ಪ್ರತಿನಿತ್ಯ ಸಂವಿಧಾನದ ಪೀಠಿಕೆ ಓದಿಸಿ: ಶಾಸಕ



ಶಿಡ್ಲಘಟ್ಟ

"ಸಮಾಜದ ಪ್ರತಿಯೊಬ್ಬರೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಜೀವನ ಚರಿತ್ರೆ ಮತ್ತು ಇತಿಹಾಸವನ್ನು ಓದಿ ಅರಿತುಕೊಳ್ಳಬೇಕು. ವಿಶೇಷವಾಗಿ ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಸಂವಿಧಾನದ ಪೀಠಿಕೆಯನ್ನು ಓದಿಸಬೇಕು, ಆಗ ಮಾತ್ರ ಸಮಾಜದಲ್ಲಿ ಧನಾತ್ಮಕ ಬದಲಾವಣೆ ತರಲು ಸಾಧ್ಯ," ಎಂದು ಶಾಸಕ ಮೇಲೂರು ರವಿಕುಮಾರ್ ತಿಳಿಸಿದರು.

ನಗರದ ಪ್ರಜಾಸೌಧ ಕಚೇರಿಯ ಮುಂಭಾಗ ಆಯೋಜಿಸಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಹಾಗೂ ಡಾ. ಬಾಬು ಜಗಜೀವನ್ ರಾಮ್ ಅವರ 119ನೇ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಅಂದಿನ ರಾಜಕೀಯ ಪರಿಸ್ಥಿತಿಯನ್ನು ಸ್ಮರಿಸಿದ ಶಾಸಕರು, "ವಿಶ್ವದ ಶ್ರೇಷ್ಠ ಸಂವಿಧಾನವನ್ನು ನೀಡಿದ ಡಾ. ಅಂಬೇಡ್ಕರ್ ಅವರನ್ನು ಅಂದಿನ ಕಾಲದ ಕೆಲ ರಾಜಕಾರಣಿಗಳು ಎರಡು ಬಾರಿ ಸೋಲಿಸಿದರು. ಆದರೆ ಇಂದು ಅದೇ ರಾಜಕಾರಣಿಗಳು ಅಂಬೇಡ್ಕರ್ ಅವರ ಫೋಟೋ ಮುಂದೆ ನಿಂತು ಮೊಸಳೆ ಕಣ್ಣೀರು ಹಾಕುತ್ತಿದ್ದಾರೆ," ಎಂದು ವ್ಯಂಗ್ಯವಾಡಿದರು.

ಇದೇ ವೇಳೆ ಭಾರತೀಯ ಪ್ರಾದೇಶಿಕ ಸೇನಾಧಿಕಾರಿ ಲೆಫ್ಟಿನೆಂಟ್ ಭವ್ಯ ನರಸಿಂಹಮೂರ್ತಿ ಅವರು ಡಾ. ಅಂಬೇಡ್ಕರ್ ಅವರ ಹೋರಾಟದ ಬದುಕನ್ನು ಸ್ಮರಿಸಿದರು. ಆರ್‌ಎಂಪಿಯು ಕಾಲೇಜಿನ ಪ್ರಾಂಶುಪಾಲರಾದ ಡಾ. ಮೂರ್ತಿ ಸಾಮ್ರಾಟ್ ಅವರು ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ಅವರ ಜೀವನ ಸಾಧನೆಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಜಯಂತಿಯ ಅಂಗವಾಗಿ ಶಾಸಕರ ಕ್ಷೇತ್ರ ಅಭಿವೃದ್ಧಿ ನಿಧಿಯಿಂದ ವಿಕಲಚೇತನ ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಲಾಯಿತು.

ಸಭೆಯಲ್ಲಿ ತಹಸೀಲ್ದಾರ್ ಗಗನ ಸಿಂಧು, ತಾ.ಪಂ. ಇಓ ಹೇಮಾವತಿ, ನಗರಸಭೆ ಪೌರಾಯುಕ್ತ ಅಮೃತ, ಮುಖಂಡರಾದ ಮಂಜುನಾಥ್, ಗಣೇಶ್, ಬಂಕ್ ಮುನಿಯಪ್ಪ, ರಾಮಯ್ಯ, ಜಗದೀಶ್, ಲಕ್ಷ್ಮಣ ರಾಜು ಹಾಗೂ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

## 'ಭರತನಾಟ್ಯದಿಂದ ದೈಹಿಕ ಮತ್ತು ಮಾನಸಿಕ ಸ್ವಾಸ್ಥ್ಯ ವೃದ್ಧಿ'

ಶ್ರೀನಿವಾಸಪುರ

"ದೈಹಿಕ ಆರೋಗ್ಯ ರಕ್ಷಣೆಯಲ್ಲಿ ನಾಟ್ಯ ಕಲೆಯು ಮಹತ್ವದ ಪಾತ್ರ ವಹಿಸುತ್ತದೆ. ಅದರಲ್ಲೂ ಭರತನಾಟ್ಯವು ದೇಹದ ಮೂಳೆ ಮತ್ತು ಮಾಂಸಖಂಡಗಳ ಸಬಲತೆಗೆ ಪೂರಕವಾಗಿದೆ," ಎಂದು ವೆಂಕಟೇಶ್ವರ ನರ್ಸಿಂಗ್ ಹೋಂನ ವೈದ್ಯಾಧಿಕಾರಿ ಡಾ. ವೈ.ವಿ. ವೆಂಕಟಾಚಲ ತಿಳಿಸಿದರು.

ಪಟ್ಟಣದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಮಂಗಳವಾರ ರಾತ್ರಿ ಈಶ ನಾಟ್ಯಕಲಾ ಅಕಾಡೆಮಿ ಹಾಗೂ ಈಶ ನಾಟ್ಯಕಲಾ ಸೇವಾ ಟ್ರಸ್ಟ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸಂಸ್ಥೆಯ ವಾರ್ಷಿಕೋತ್ಸವ ಹಾಗೂ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪೋಷಕರು ಮಕ್ಕಳನ್ನು ಕೇವಲ ಓದಿಗೆ ಸೀಮಿತಗೊಳಿಸದೆ ಸಂಗೀತ, ನೃತ್ಯ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಬೇಕು. ಇಂತಹ ಕಲೆಗಳು ಮಕ್ಕಳ ಮನಸ್ಸಿನ ಮೇಲಿರುವ ಓದಿನ ಒತ್ತಡವನ್ನು ಕಡಿಮೆ ಮಾಡಿ, ಮಾನಸಿಕ ನೆಮ್ಮದಿ ನೀಡುತ್ತವೆ ಎಂದು ಅವರು ಕಿವಿಮಾತು ಹೇಳಿದರು.

ಜಿಲ್ಲಾ ಅಖಿಲ ಭಾರತೀಯ ಸಾಹಿತ್ಯ ಪರಿಷತ್ತಿನ ಅಧ್ಯಕ್ಷೆ ಮಾಯಾ ಬಾಲಚಂದ್ರ ಮಾತನಾಡಿ, "ಭರತನಾಟ್ಯವು ಸಾವಿರಾರು ವರ್ಷಗಳ ಇತಿಹಾಸವಿರುವ ಭಾರತದ ಅತ್ಯಂತ ಪ್ರಾಚೀನ ಶಾಸ್ತ್ರೀಯ ಕಲೆ. ಮಾವಿನ ಪಟ್ಟಣ



ಶ್ರೀನಿವಾಸಪುರದಲ್ಲಿ ಇಂತಹ ಶಾಸ್ತ್ರೀಯ ಸಂಗೀತ ಮತ್ತು ನೃತ್ಯ ಶಾಲೆ ಸ್ಥಾಪನೆಯಾಗಿರುವುದು ಹೆಮ್ಮೆಯ ವಿಷಯ. ಸಾರ್ವಜನಿಕರು ಇಂತಹ ಕಲಾ ಸಂಸ್ಥೆಗಳನ್ನು ಬೆಳೆಸಬೇಕು," ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಎಚ್. ಮೃತ್ಯುಂಜಯ, ಸಾಹಿತಿ ಆರ್. ಚೌಡರೆಡ್ಡಿ ಹಾಗೂ ಶಿವಾನಂದ ಅವರು ಸಂಗೀತ ಮತ್ತು ನಾಟ್ಯದ ಮಹತ್ವದ ಕುರಿತು ಮಾತನಾಡಿದರು.

ಅಕಾಡೆಮಿಯ ವಿದ್ಯಾರ್ಥಿಗಳಿಂದ ನಡೆದ ಆಕರ್ಷಕ ಭರತನಾಟ್ಯ ಪ್ರದರ್ಶನವು ಪ್ರೇಕ್ಷಕರ ಗಮನ ಸೆಳೆಯಿತು. ಗಾಯಕ ವೆಂಕಟೇಶ್ ಅವರಿಂದ ಕನ್ನಡ ಗೀತೆಗಳ ಗಾಯನ ಸುಧೆ ಹರಿಯಿತು. ಇದೇ ಸಂದರ್ಭದಲ್ಲಿ ಸಂಗೀತ ಶಿಕ್ಷಕಿ ಪ್ರತೀಶ ನರೇಶ್ ಅವರನ್ನು ಪೋಷಕರ ವತಿಯಿಂದ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ವಿ. ನಿಶಾಂತ್, ವೆಂಕಟರೆಡ್ಡಿ, ನರೇಶ್, ರೂಪಾ, ಎನ್. ಮಂಜುನಾಥ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಬಾವಿಗೆ ಬಿದ್ದಿದ್ದ ಜಿಂಕೆ ರಕ್ಷಣೆ



ಚಿಂತಾಮಣಿ

ತಾಲ್ಲೂಕಿನ ಕಸಬಾ ಹೋಬಳಿಯ ಕರಿಯಪ್ಪಲ್ಲಿ ಗ್ರಾಮದ ಜಮೀನೊಂದರ ಬಾವಿಗೆ ಆಕಸ್ಮಿಕವಾಗಿ ಬಿದ್ದಿದ್ದ ಜಿಂಕೆಯನ್ನು ಅಗ್ನಿಶಾಮಕ ದಳದ ಸಿಬ್ಬಂದಿ ಯಶಸ್ವಿಯಾಗಿ ರಕ್ಷಿಸಿ, ಸುರಕ್ಷಿತವಾಗಿ ಕಾಡಿಗೆ ಮರಳಿ ಬಿಟ್ಟಿದ್ದಾರೆ.

ಗ್ರಾಮದ ಅಶೋಕರೆಡ್ಡಿ ಎಂಬುವವರಿಗೆ ಸೇರಿದ ಜಮೀನಿನಲ್ಲಿ ಸುಮಾರು 40 ರಿಂದ 50 ಅಡಿ ಆಳದ ಕಲ್ಲು ಕಟ್ಟಡದ ಬಾವಿಯಿದ್ದು, ಮೇಯಲು ಬಂದಿದ್ದ ಜಿಂಕೆ ಆಕಸ್ಮಿಕವಾಗಿ ಇದರಲ್ಲಿ ಬಿದ್ದಿತ್ತು. ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ, ಅರಣ್ಯ ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ರಕ್ಷಣಾ ಕಾರ್ಯಾಚರಣೆ ಕೈಗೊಂಡರು.

ಹಗ್ಗದ ಸಹಾಯದಿಂದ ಜಿಂಕೆ ರಕ್ಷಣೆ: ಬಾವಿಯು ಸಾಕಷ್ಟು ಆಳವಾಗಿದ್ದರಿಂದ ಹಗ್ಗಗಳ ಸಹಾಯದೊಂದಿಗೆ ಅತ್ಯಂತ ಜಾಗರೂಕತೆಯಿಂದ ಜಿಂಕೆಯನ್ನು ಮೇಲಕ್ಕೆತ್ತಲಾಯಿತು. ಜಿಂಕೆಗೆ ಯಾವುದೇ ಗಾಯಗಳಾಗದಂತೆ ಸುರಕ್ಷಿತವಾಗಿ ರಕ್ಷಿಸಿದ ಸಿಬ್ಬಂದಿ, ಬಳಿಕ ಅರಣ್ಯ ಇಲಾಖೆಯ ಸೂಚನೆಯಂತೆ ಅದನ್ನು ಸಮೀಪದ ಅರಣ್ಯ ಪ್ರದೇಶಕ್ಕೆ ಬಿಟ್ಟಿದ್ದಾರೆ. ಈ ರಕ್ಷಣಾ ಕಾರ್ಯಾಚರಣೆಯಲ್ಲಿ ಅಗ್ನಿಶಾಮಕ ಸಿಬ್ಬಂದಿಯವರಾದ ಲೋಕೇಶ್.ಕೆ. ವೆಂಕಟಶಿವಾರೆಡ್ಡಿ, ರಾಜು, ವಿವೇಕ್ ಹಾಗೂ ಯಮನಪ್ಪ ಪಾಲ್ಗೊಂಡು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

## ಚರಂಡಿ ಕಾಮಗಾರಿ: ಗುತ್ತಿಗೆದಾರರ ಕೈಚಳಕಕ್ಕೆ ಜನತೆ ಕೆಂಗಣ್ಣು

ಬಂಗಾರಪೇಟೆ

ಪಟ್ಟಣದ ಕಾರೋನೇಷನ್ ರಸ್ತೆಯಲ್ಲಿ ಸುಮಾರು 1.5 ಕೋಟಿ ರೂ. ವಿಶೇಷ ಅನುದಾನದಲ್ಲಿ ನಡೆಯುತ್ತಿರುವ ರಸ್ತೆ ಹಾಗೂ ಚರಂಡಿ ಕಾಮಗಾರಿಯು ಈಗ ವಿವಾದಕ್ಕೆ ಈಡಾಗಿದೆ. ಆರಂಭದಲ್ಲಿ ಗುಣಮಟ್ಟದ ಕಾಮಗಾರಿಯಿಂದ ಮೆಚ್ಚುಗೆ ಗಳಿಸಿದ್ದ ಗುತ್ತಿಗೆದಾರರು, ಮುಂದುವರಿದ ಭಾಗದಲ್ಲಿ ಅಧ್ವಾನ ಎಸಗಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಓಸ್ವಾಲ್ ನರ್ಸಿಂಗ್ ಹೋಂನಿಂದ ಕಾರಹಳ್ಳಿ ವೃತ್ತದವರೆಗೆ ಅತ್ಯಂತ ಗುಣಮಟ್ಟದ ಸಿಮೆಂಟ್ ರಸ್ತೆ ನಿರ್ಮಿಸಲಾಗಿದ್ದು, ಸಾರ್ವಜನಿಕರು ಈ ಕಾರ್ಯವನ್ನು ಶ್ಲಾಘಿಸಿದ್ದರು. ಆದರೆ,



ಕಾರಹಳ್ಳಿ ವೃತ್ತದಿಂದ ಬಸ್ ನಿಲ್ದಾಣದ ವೃತ್ತದವರೆಗಿನ ಕಾಮಗಾರಿಯಲ್ಲಿ ವ್ಯಾಪಕ ನಿರ್ಲಕ್ಷ್ಯವಹಿಸಲಾಗಿದೆ. ಚರಂಡಿ ಕಾಮಗಾರಿ ಇನ್ನೂ ಪೂರ್ಣಗೊಳ್ಳುವ ಮೊದಲೇ ಅವ್ಯವಸ್ಥೆಗಳು ಶುರುವಾಗಿವೆ.

ಈ ಭಾಗದಲ್ಲಿ ಚರಂಡಿ ದುರಸ್ತಿ ಕಾರ್ಯ ನಡೆದಿದ್ದು, ಅದರ ಮೇಲೆ ಕಡಪ ಚಪ್ಪಡಿ ಕಲ್ಲುಗಳನ್ನು ಅಳವಡಿಸಿ ಕಾಂಕ್ರೀಟ್ ಹಾಕಬೇಕಿತ್ತು. ಆದರೆ, ಕಾಮಗಾರಿ ವಿಳಂಬದಿಂದಾಗಿ ಹೊಸ ಚರಂಡಿಯಲ್ಲಿ ಈಗಾಗಲೇ ಕಸ ಮತ್ತು ಹೂಳು ತುಂಬಿಕೊಂಡಿದೆ. ವಿಪರ್ಯಾಸವೆಂದರೆ, ಗುತ್ತಿಗೆದಾರರು ಈ ತ್ಯಾಜ್ಯವನ್ನು ತೆರವುಗೊಳಿಸದೆಯೇ ಅದರ ಮೇಲೆಯೇ ಕಡಪ ಕಲ್ಲುಗಳನ್ನು ಇರಿಸಿ ಕಾಂಕ್ರೀಟ್ ಹಾಕುತ್ತಿದ್ದಾರೆ.

ತ್ಯಾಜ್ಯದ ಮೇಲೆ ಕಾಮಗಾರಿ ನಡೆಸಿರುವುದರಿಂದ ಚರಂಡಿ ನೀರು ಮುಂದೆ ಹರಿಯಲು ಸಾಧ್ಯವಾಗದೆ ಒಂದೇ ಕಡೆ ನಿಲ್ಲುತ್ತಿದೆ. ಇದರಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ದುರ್ವಾಸನೆ ಹರಡುತ್ತಿದ್ದು, ಮಳೆ ಬಂದರೆ ಈ ಕೊಳಚೆ ನೀರು ರಸ್ತೆಯ ಮೇಲೆ ಹರಿಯುವ ಭೀತಿ ಎದುರಾಗಿದೆ.

ಅಧಿಕಾರಿಗಳು ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದ ಹಿನ್ನೆಲೆಯಲ್ಲಿ ಗುತ್ತಿಗೆದಾರರು ತಮ್ಮಿಷ್ಟದಂತೆ ಕಾಮಗಾರಿ ನಡೆಸುತ್ತಿದ್ದಾರೆ ಎಂದು ಸ್ಥಳೀಯರು ಟೀಕಿಸಿದ್ದಾರೆ. ನಗರಸಭೆ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ, ಹೂಳು ತೆರವುಗೊಳಿಸಿ ಗುಣಮಟ್ಟದ ಕಾಮಗಾರಿ ನಡೆಸುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಬೆಟ್ಟದ ಮಾರಮ್ಮನಿಗೆ ಜ್ಯೋತಿರ್ಗಂಭ ಸೇವೆ



ವೈ.ಎನ್.ಹೊಸಕೋಟೆ

ಕರ್ನಾಟಕ ಮತ್ತು ಆಂಧ್ರ ಪ್ರದೇಶದ ಗಡಿ ರೇಖೆಯ ಮೇಲೆ ನೆಲೆಸಿರುವ ಪ್ರಸಿದ್ಧ ಧಾರ್ಮಿಕ ಕೇಂದ್ರ ಬೆಟ್ಟದ ಮಾರಮ್ಮ ದೇವಿಯ ಸನ್ನಿಧಿಯಲ್ಲಿ ಮಂಗಳವಾರ ಭಕ್ತಾಧಿಗಳು ಅತ್ಯಂತ ಸಡಗರ–ಸಂಭ್ರಮದಿಂದ ಜ್ಯೋತಿರ್ಗಂಭ ಸೇವೆಯನ್ನು ನೆರವೇರಿಸಿದರು.

ಸೋಮವಾರದಿಂದಲೇ ಆರಂಭವಾದ ಧಾರ್ಮಿಕ ವಿಧಿವಿಧಾನಗಳಲ್ಲಿ ಮೊದಲ ದಿನ ಗಂಗಾಪೂಜೆ ಜರುಗಿತು. ಮಂಗಳವಾರ ಬೆಳಿಗ್ಗೆ ಪುಣ್ಯಾವಾಹನೆ, ಪೃಥ್ವಿಪೂಜೆ, ಕಳಶ ಪ್ರತಿಷ್ಠೆ ಹಾಗೂ ಶಕ್ತಿಪೂಜೆಗಳನ್ನು ಭಕ್ತಿಪೂರ್ವಕವಾಗಿ ನೆರವೇರಿಸಲಾಯಿತು. ಬೆಟ್ಟದ ಪರಿಸರದಲ್ಲಿ ವನಿತೆಯರು ತಂಬಿಟ್ಟು ಜ್ಯೋತಿಗಳನ್ನು ಬೆಳಗಿಸಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾದ ಜ್ಯೋತಿರ್ಗಂಭದ ಮೇಲೆ ಭಕ್ತರು ಮೇಲುದೀಪವನ್ನು ಬೆಳಗಿಸಿ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು. ಈ ಅಪರೂಪದ ಕ್ಷಣಕ್ಕೆ ಸಾಕ್ಷಿಯಾದ ನೂರಾರು ಭಕ್ತರು ಜಯಘೋಷ ಹಾಕುತ್ತಾ ಭಕ್ತಿ ಸಮರ್ಪಿಸಿದರು. ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಬೆಸ್ಕಾಂ ಮಂಜುನಾಥ ಮತ್ತು ಜ್ಯೋತಿರ್ಗಂಭದ ಕೆತ್ತನೆ ಮಾಡಿದ ಶಿಲ್ಪಿ ರಾಜಪ್ಪ ಅವರನ್ನು ಗ್ರಾಮಸ್ಥರು ಅಭಿನಂದಿಸಿದರು.

ಬೆಟ್ಟಗುಡ್ಡಗಳಿಂದ ಆವೃತವಾಗಿರುವ ಈ ಕ್ಷೇತ್ರವು ಪ್ರಾಕೃತಿಕ ರಮ್ಯ ತಾಣವಾಗಿದ್ದು, ಇತ್ತೀಚಿನ ದಿನಗಳಲ್ಲಿ ಪ್ರವಾಸಿಗರ ಹಾಗೂ ಭಕ್ತರ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿದೆ. ಪ್ರತಿ ಮಂಗಳವಾರ ಮತ್ತು ಶುಕ್ರವಾರ ಇಲ್ಲಿ ವಿಶೇಷ ಪೂಜೆಗಳು ನಡೆಯಲಿದ್ದು, ಆಂಧ್ರ ಪ್ರದೇಶ ಹಾಗೂ ಕರ್ನಾಟಕದ ವಿವಿಧ ಮೂಲೆಗಳಿಂದ ಸಾವಿರಾರು ಭಕ್ತರು ಆಗಮಿಸುವುದು ಇಲ್ಲಿನ ವಿಶೇಷವಾಗಿದೆ.

## ಅರ್ಜಿ ಆಹ್ವಾನ

ತುಮಕೂರು

ರುಡ್‌ಸೆಟ್ ಸಂಸ್ಥೆ ವತಿಯಿಂದ ಮೇ 11ರಿಂದ ಮಹಿಳೆಯರಿಗಾಗಿ ಟೈಲರಿಂಗ್ ಕುರಿತು 31 ದಿನಗಳ ಉಚಿತ ತರಬೇತಿ ನೀಡಲು ಉದ್ದೇಶಿಸಿದ್ದು, ತರಬೇತಿ ಪಡೆಯಲಿಚ್ಛಿಸುವ ಆಸಕ್ತ ಗ್ರಾಮೀಣ ನಿರುದ್ಯೋಗಿ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಭಾಗದ ಬಿಪಿಎಲ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಹೊಂದಿರಬೇಕು.

ಆಸಕ್ತರು ಹೆಚ್ಚಿನ ಮಾಹಿತಿಗೆ ದೇವನಹಳ್ಳಿ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9481506564, 9740982585ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ತಿಳಿಸಿದ್ದಾರೆ.

## ಕುಡಿಯುವ ನೀರಿನ ಸಮಸ್ಯೆಯನ್ನು ಶೀಘ್ರ ಪರಿಹರಿಸಲು ಬಿ.ವಿ. ಅಶ್ವಿಜ ಸೂಚನೆ

ತುಮಕೂರು

ಜಿಲ್ಲೆಯಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ಶೀಘ್ರದಲ್ಲೇ ಪರಿಹರಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯತಿ ವಿಡಿಯೋ ಸಂವಾದ ಕೇಂದ್ರದಲ್ಲಿ ಬುಧವಾರ ಮಹತ್ವದ ಸಭೆ ನಡೆಸಿ ಅವರು ಮಾತನಾಡಿದರು.

ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಿಗೆ ತಕ್ಷಣ ಭೇಟಿ ನೀಡಿ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ವಿಶೇಷ ಸಭೆ ನಡೆಸಬೇಕು. ಗ್ರಾಮಗಳಲ್ಲಿನ ಎಲ್ಲ ಕಾಮಗಾರಿಗಳನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಿ ಜನರಿಗೆ ನಿರಂತರವಾಗಿ ಶುದ್ಧ ಕುಡಿಯುವ ನೀರು ಒದಗಿಸಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯ ಎಲ್ಲಾ ಗ್ರಾಮಗಳ



ಬೋರ್‌ವೆಲ್‌ಗಳ ಸ್ಥಿತಿ, RO ಪ್ಲಾಂಟ್‌ಗಳ ಸಂಖ್ಯೆ, ಫ್ಲಷಿಂಗ್ ಕಾರ್ಯಗಳ ಪ್ರಗತಿ, ಪೈಪ್‌ಲೈನ್‌ಗಳ ಅಳವಡಿಕೆ, ಪಂಪ್ ಮತ್ತು ಮೋಟಾರ್ ವ್ಯವಸ್ಥೆಗಳ ಕುರಿತು ಮಾಹಿತಿ ಪಡೆದ ಅವರು, ಕುಡಿಯುವ ನೀರು ಸರಬರಾಜು ಮಾಡುವ ಟ್ಯಾಂಕರ್‌ಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಹೊಸ ಬೋರ್‌ವೆಲ್‌ಗಳಿಗೆ ಅನುಮೋದನೆ ನೀಡುವುದು ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪ್ರಗತಿ ಪರಿಶೀಲನೆ ಹಾಗೂ ವಿವಿಧ ಯೋಜನೆಗಳ ಪ್ರಗತಿ ಕುರಿತು ವಿವರವಾದ ಚರ್ಚೆ ನಡೆಯಿತು.

ಕಾರ್ಯನಿರ್ವಹಿಸುತ್ತಿರುವ, ಕಾರ್ಯನಿರ್ವಹಿಸದ ಹಾಗೂ ಜೆಜೆಎಂ ಅಡಿಯಲ್ಲಿ ಪ್ರಸ್ತಾಪಿತ, ತೋಡಿದ, ಅಳವಡಿಸಿದ ಮತ್ತು ಪರೀಕ್ಷೆಗೊಂಡ ಬೋರ್‌ವೆಲ್‌ಗಳ ಒಟ್ಟು ಸಂಖ್ಯೆಯನ್ನು ಕುರಿತು ವಿಚಾರಿಸಲಾಯಿತು.

ಖಾಸಗಿ ಟ್ಯಾಂಕರ್‌ಗಳು ಮತ್ತು ಖಾಸಗಿ ಬೋರ್‌ವೆಲ್‌ಗಳಿಗೆ ಸಂಬಂಧಿಸಿದ ಪಾವತಿಗಳಲ್ಲಿ ಯಾವುದಾದರೂ ಬಾಕಿ ಇರುವುದರ ಬಗ್ಗೆ ಚರ್ಚಿಸಲಾಯಿತು.

ಇಂದಿನವರೆಗೆ ಟಾಸ್ಕ್ ಫೋರ್ಸ್ ಸಭೆಗಳು ನಡೆದಿರುವ ಮಾಹಿತಿ ಹಾಗೂ ಕಳುಹಿಸಿದ ಬೋರ್‌ವೆಲ್ ಪ್ರಸ್ತಾವನೆಗಳ ವಿವರಗಳನ್ನು ಪರಿಶೀಲಿಸಿದರು.

ಎಲ್ಲಾ ತಾಲ್ಲೂಕುಗಳಲ್ಲಿ ಇಂದಿನವರೆಗೆ ಓವರ್‌ಹೆಡ್ ಟ್ಯಾಂಕ್‌ಗಳ ಸ್ವಚ್ಛತೆಗೆ ಸಂಬಂಧಿಸಿದ ವಿವರವನ್ನು ಪರಿಶೀಲಿಸಿದರು.

ಖಾಸಗಿ ಸಂಸ್ಥೆಗಳ ಮೂಲಕ ನಿರ್ವಹಿಸಲಾಗುತ್ತಿರುವ ಖಓ ಪ್ಲಾಂಟ್‌ಗಳಲ್ಲಿ ಎಷ್ಟು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಕಾರ್ಯನಿರ್ವಹಿಸದ ಸ್ಥಿತಿಯಲ್ಲಿವೆ ಎಂಬುದನ್ನು ಅಧಿಕಾರಿಗಳಿಂದ ಮಾಹಿತಿ ಪಡೆದರು.


ಸಭೆಯಲ್ಲಿ ವಿವಿಧ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್‌ಗಳು, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಹಾಗೂ ವಿವಿಧ ವಿಭಾಗ ಮಟ್ಟದ ಅಧಿಕಾರಿಗಳು ಹಾಜರಿದ್ದರು. ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಭಾಗವಹಿಸಿದ್ದರು.

## ಅಜ್ಞಾನ ನೀಗಿಸಿದ ಅಂಬೇಡ್ಕರ್ ಆದರ್ಶ ಪಾಲಿಸಿ: ಶಶಿಕುಮಾರ್

ತಿಪಟೂರು

"ಡಾ. ಬಿ.ಆರ್. ಅಂಬೇಡ್ಕರ್ ಅವರು ದಲಿತರು ಹಾಗೂ ಶೋಷಿತರಿಗೆ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕವಾಗಿ ಸಮಾನ ಅವಕಾಶಗಳನ್ನು ಕಲ್ಪಿಸಿಕೊಟ್ಟಿದ್ದಾರೆ. ಅವರ ಜೀವನದ ಆದರ್ಶಗಳು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿದ್ದು, ಪ್ರತಿಯೊಬ್ಬರೂ ಅವುಗಳನ್ನು ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು," ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಶಶಿಕುಮಾರ್ ಕರೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಡಾ. ಬಿ.ಆರ್. ಅಂಬೇಡ್ಕರ್



ಯುವಜನ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಹಾಗೂ ಡಾ. ಬಾಬು ಜಗಜೀವನರಾಮ್ ಅವರ 119ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ಜಗಜೀವನರಾಮ್ ಅವರು ಹಸಿರು ಕ್ರಾಂತಿಯ ಮೂಲಕ ದೇಶದ ಹಸಿವನ್ನು ನೀಗಿಸಿದರೆ, ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಸಮಾಜದಲ್ಲಿದ್ದ ಮೌಢ್ಯತೆ ಮತ್ತು ಅಜ್ಞಾನವನ್ನು ಹೋಗಲಾಡಿಸಿದರು. ಸಂವಿಧಾನದ ಆಶಯಗಳನ್ನು ಅರ್ಥಮಾಡಿಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯ," ಎಂದು ಡಾ. ಶಶಿಕುಮಾರ್ ತಿಳಿಸಿದರು. ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಸಂಸ್ಥೆಯ ಅಧ್ಯಕ್ಷ ರಾಜಶೇಖರ್ ಕೆ. ಮಾತನಾಡಿ, "ಸ್ವಾತಂತ್ರ್ಯ ಸಮಾನತೆ ಹಾಗೂ ಸಾಮಾಜಿಕ ನ್ಯಾಯ ಎಂಬ ಪ್ರಜಾಪ್ರಭುತ್ವದ ಮೂಲ ಮೌಲ್ಯಗಳನ್ನು ಕಟ್ಟಿಕೊಟ್ಟವರು ಅಂಬೇಡ್ಕರ್. ಶಿಕ್ಷಣ, ಸಂಘಟನೆ ಮತ್ತು ಹೋರಾಟ ಎಂಬ ಘೋಷವಾಕ್ಯಗಳು ಇಂದಿಗೂ ಯುವಶಕ್ತಿಯನ್ನು ಜಾಗೃತಗೊಳಿಸುವ ಶಕ್ತಿ ಹೊಂದಿವೆ. ಹಿಂದುಳಿದ ವರ್ಗಗಳಿಗೆ ನ್ಯಾಯ ದೊರಕಿಸಿಕೊಟ್ಟಿದ್ದು ಸಂವಿಧಾನದ ದೊಡ್ಡ ಸಾಧನೆ," ಎಂದರು. ಕಾರ್ಯಕ್ರಮದ ಅಂಗವಾಗಿ 'ಅಂಬೇಡ್ಕರ್ ಅವರ ಸಮಗ್ರ ಬರಹಗಳು ಮತ್ತು ಭಾಷಣಗಳು' ಕುರಿತು ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿತ್ತು. ಸ್ಪರ್ಧೆಯಲ್ಲಿ ವಿಜೇತರಾದ ಅಶ್ವಿನಿ ಡಿ.ಪಿ, ಮೋನಿಕ ಎಲ್.ಎಸ್, ಹಾಗೂ ಚಿನ್ಮಯಿ ಬಿ.ಸಿ ಅವರಿಗೆ ನಗದು ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ವೇದಿಕೆಯಲ್ಲಿ ವಿಭಾಗ ಮುಖ್ಯಸ್ಥರಾದ ಅನುಕುಮಾರ್ ಶ್ರೀನಿವಾಸ್, ಸಂಸ್ಥೆಯ ನಿರ್ದೇಶಕ ಚಂದ್ರಶೇಖರ್ ಹೆಚ್.ಟಿ.ಹಳ್ಳಿ, ವಿವಿಧ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

17/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕುಪ್ಪಂ ಬಾಲಾಜಿ ಕರಗ ನೃತ್ಯಕ್ಕೆ ಮಾರುಹೋದ ಭಕ್ತಸಮೂಹ

ಕೋಲಾರ

ತಾಲ್ಲೂಕಿನ ನರಸಾಪುರ ಗ್ರಾಮದಲ್ಲಿ ಶ್ರೀ ಧರ್ಮರಾಯಸ್ವಾಮಿ ಮತ್ತು ದ್ರೌಪದಮ್ಮನವರ 95ನೇ ವರ್ಷದ ಹೂವಿನ ಕರಗ ಮಹೋತ್ಸವವು ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಅದ್ದೂರಿಯಾಗಿ ನೆರವೇರಿತು. ಶ್ರೀ ಧರ್ಮರಾಯಸ್ವಾಮಿಯ ಕರಗ ಮಹೋತ್ಸವ ಅಭಿವೃದ್ಧಿ ಟ್ರಸ್ಟ್ ಹಾಗೂ ತಿಗಳ ಯುವಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಈ ಧಾರ್ಮಿಕ ಉತ್ಸವವನ್ನು ಆಯೋಜಿಸಲಾಗಿತ್ತು.



ಮಹೋತ್ಸವಕ್ಕೆ ಹೊಸಕೋಟೆ ತಾಲ್ಲೂಕಿನ ಶಿವನಾಪುರ ಮಠದ ಶ್ರೀ ಪ್ರಣವಾನಂದಪುರಿ ಸ್ವಾಮೀಜಿ ಹಾಗೂ ದೇವನಹಳ್ಳಿ ತಾಲ್ಲೂಕಿನ ಮುಳ್ಳಳ್ಳಿ ಶ್ರೀ ಬಾಲಯೋಗಿ ಸಾಯಿ ಮಂಜುನಾಥ ಮಹರಾಜ್ ಅವರು ಚಾಲನೆ ನೀಡಿದರು. ರಾತ್ರಿ 9 ಗಂಟೆಗೆ ವೇದಿಕೆಯ ಮೇಲೆ ಕರಗದ ಪೂಜಾರಿ ಕುಪ್ಪಂ ಬಾಲಾಜಿ ಅವರು ವಾದ್ಯ ಹಾಗೂ ತಮಟೆ ಮೇಳಗಳ ಲಯಕ್ಕೆ ತಕ್ಕಂತೆ ನಡೆಸಿದ ನೃತ್ಯ ಪ್ರದರ್ಶನವು ನೆರೆದಿದ್ದ ಸಾವಿರಾರು ಜನರ ಕಣ್ಣಿಗೆ ಹಬ್ಬದಂತೆ ಕಂಗೊಳಿಸಿತು.

ಕರಗ ಮಹೋತ್ಸವದ ಅಂಗವಾಗಿ ನರಸಾಪುರ ಗ್ರಾಮದ ಪ್ರತಿಯೊಂದು ದೇವಾಲಯಗಳಲ್ಲಿ ವಿಶೇಷ ಪೂಜೆಗಳನ್ನು ಸಲ್ಲಿಸಲಾಯಿತು. ಇಡೀ ಗ್ರಾಮದಲ್ಲಿ ಹಬ್ಬದ ಕಳೆ ಮನೆಮಾಡಿತ್ತು. ಧರ್ಮರಾಯ ಸ್ವಾಮಿ ಮತ್ತು ದ್ರೌಪದಮ್ಮನ ದೇವಸ್ಥಾನದಲ್ಲಿ ದೇವರಿಗೆ ಮನಮೋಹಕ ಹೂವಿನ ಅಲಂಕಾರ, ಮಹಾ ಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ನಡೆಯಿತು. ಊರಿನ ಪ್ರಮುಖ ರಸ್ತೆಗಳಲ್ಲಿ ದೀಪಾಲಂಕಾರ ಮಾಡಲಾಗಿದ್ದು, ದೇವರುಗಳ ಪಲ್ಲಕ್ಕಿ ಉತ್ಸವ ಹಾಗೂ ಮಹಿಳೆಯರಿಂದ ನಡೆದ ದೀಪಾರಾಧನೆ ಭಕ್ತಿಯ ಪರಾಕಾಷ್ಠೆಯನ್ನು ಮೆರೆಯಿತು.

ಈ ಸಂಭ್ರಮದ ಕ್ಷಣಕ್ಕೆ ಎಂಎಲ್‌ಸಿ ಎಂ.ಎಲ್. ಅನಿಲ್ ಕುಮಾರ್, ಡಿಐಜಿಪಿ ಡಿ. ದೇವರಾಜ್, ವಿಧಾನ ಪರಿಷತ್ ಮಾಜಿ ಸಭಾಪತಿ ವಿ.ಆರ್. ಸುದರ್ಶನ್ ಸೇರಿದಂತೆ ಹಲವು ಗಣ್ಯರು ಸಾಕ್ಷಿಯಾದರು.

ಟ್ರಸ್ಟಿನ ಅಧ್ಯಕ್ಷ ಈರಪ್ಪ, ಕಾರ್ಯದರ್ಶಿ ಬಿ. ಶ್ರೀನಿವಾಸ್, ಜಿಲ್ಲಾ ವಹ್ನಿಕುಲ ಕ್ಷತ್ರಿಯ ಅಧ್ಯಕ್ಷ ಉದಯ್ ಕುಮಾರ್, ಗ್ರಾಮ ಪಂಚಾಯ್ತಿ ಅಧ್ಯಕ್ಷ ಕುಮಾರ್ ಹಾಗೂ ತಿಗಳರ ಸಮುದಾಯದ ಮುಖಂಡರು, ಕುಲಸ್ಥರು ಈ ಅದ್ದೂರಿ ಉತ್ಸವದ ಉಸ್ತುವಾರಿ ವಹಿಸಿದ್ದರು. ನರಸಾಪುರ ಹಾಗೂ ಸುತ್ತಮುತ್ತಲಿನ ಹತ್ತಾರು ಹಳ್ಳಿಗಳ ಸಾವಿರಾರು ಭಕ್ತರು ಕರಗ ದರ್ಶನ ಪಡೆದು ಪುನೀತರಾದರು.

# ಸಂವಿಧಾನದ ಅರಿವು ಯುವ ಜನತೆಗೆ ದಾರಿದೀಪ: ಶ್ರೀನಿವಾಸ್



ಬಂಗಾರಪೇಟೆ

"ವಿಶ್ವದಲ್ಲೇ ಶ್ರೇಷ್ಠವಾಗಿರುವ ಭಾರತದ ಸಂವಿಧಾನವನ್ನು ಓದಿ ಅರಿತುಕೊಂಡಾಗ ಮಾತ್ರ ಯುವ ಸಮುದಾಯ ತಮ್ಮ ಜೀವನವನ್ನು ಅತ್ಯುತ್ತಮವಾಗಿ ರೂಪಿಸಿಕೊಳ್ಳಲು ಸಾಧ್ಯ," ಎಂದು ಡಿಎಸ್‌ಎಸ್ ಮುಖಂಡ ಕೊಡುಗುರ್ಕಿ ಕಾಲೋನಿ ಶ್ರೀನಿವಾಸ್ ತಿಳಿಸಿದರು.

ತಾಲ್ಲೂಕಿನ ಬೂದಿಕೋಟೆ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಪ್ರಯುಕ್ತ ಅಂಬೇಡ್ಕರ್ ಅವರ ಭಾವಚಿತ್ರವಿರುವ ಪಲ್ಲಕ್ಕಿಗಳನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಅದ್ದೂರಿಯಾಗಿ ಮೆರವಣಿಗೆ ಮಾಡಿದ ನಂತರ ಅವರು ಮಾತನಾಡಿದರು.

"ನಮ್ಮ ಸಂವಿಧಾನವು ಇಡೀ ವಿಶ್ವದಲ್ಲಿಯೇ ಅತ್ಯಂತ ಶ್ರೇಷ್ಠವಾದ ಕೈಬರಹದ ಸಂವಿಧಾನವಾಗಿದೆ. ಇದನ್ನು ರಚಿಸಲು 2 ವರ್ಷ 11 ತಿಂಗಳು 18 ದಿನಗಳ ಕಾಲಾವಕಾಶ ತಗುಲಿದ್ದು, ಪ್ರತಿಯೊಬ್ಬ ಭಾರತೀಯನಿಗೂ ಸಮಾನ ಹಕ್ಕುಗಳನ್ನು ನೀಡಿದೆ. ಅಂಬೇಡ್ಕರ್ ಅವರು ಯಾವುದೇ ಒಂದು ವರ್ಗ ಅಥವಾ ಜಾತಿಗೆ ಸೀಮಿತವಾದವರಲ್ಲ; ಅವರು ಸಮಾಜದ ಪ್ರತಿಯೊಬ್ಬ ವ್ಯಕ್ತಿಗೂ ಹಕ್ಕನ್ನು ನೀಡಿದ ಮಹಾನ್ ನಾಯಕ," ಎಂದು ಸ್ಮರಿಸಿದರು.

ಬಂಗಾರಪೇಟೆ ಪಟ್ಟಣದಲ್ಲಿ ತಾಲ್ಲೂಕು ಆಡಳಿತದ ವತಿಯಿಂದ ಹಮ್ಮಿಕೊಳ್ಳಲಾಗಿರುವ ಜಯಂತಿ ಕಾರ್ಯಕ್ರಮಕ್ಕೆ ಬೂದಿಕೋಟೆ ಹೋಬಳಿಯಿಂದ ಸುಮಾರು 10 ಅದ್ದೂರಿ ಪಲ್ಲಕ್ಕಿಗಳು ಭಾಗವಹಿಸಲಿದ್ದು, ಈ ಬಾರಿ ಅತ್ಯಂತ ಸಡಗರದಿಂದ ಜಯಂತಿಯನ್ನು ಆಚರಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಬೂದಿಕೋಟೆ ಗ್ರಾ.ಪಂ. ಮಾಜಿ ಅಧ್ಯಕ್ಷ ಬಿ. ಕೃಷ್ಣಪ್ಪ ಶೆಟ್ಟಿ, ಬಿ.ಆರ್. ಮಂಜುನಾಥ್, ಮುಖಂಡರಾದ ರಾಜಪ್ಪ, ಆನಂದ್, ಅನು ಚಂದ್ರಶೇಖರ್, ಆಲಂಬಾಡಿ ಮುನಿಯಪ್ಪ, ತಿಮ್ಮಪ್ಪ ಹಾಗೂ ಪಿಡಿಒ ಕಿಶೋರ್, ವಸಂತ್ ಕುಮಾರ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಅಂಬೇಡ್ಕರ್ ಜಯಂತಿ ಸಮಾರಂಭಕ್ಕೆ ವಿವಿ ಸಜ್ಜು

ಕೋಲಾರ

ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಿಂದ ನಗರ ಹೊರವಲಯದ ಮಂಗಸಂದ್ರದ ಸುವರ್ಣಗಂಗೆ ಕ್ಯಾಂಪಸ್‌ನಲ್ಲಿ ಗುರುವಾರ ಬೆಳಗ್ಗೆ 10ಗಂಟೆಗೆ, ಮಹಾನ್ ಮಾನವತಾವಾದಿ ಹಾಗೂ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಡಿಸಿ ಡಾ. ಎಂ.ಆರ್. ರವಿ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಾನಪದ ಅಕಾಡೆಮಿಯ ಮಾಜಿ ಅಧ್ಯಕ್ಷರು ಪಿಚ್ಚಳ್ಳಿ ಶ್ರೀನಿವಾಸ್, ನಿವೃತ್ತ ಪ್ರಾಧ್ಯಾಪಕ ಪ್ರೊ. ರಾಜಪ್ಪ ದಳವಾಯಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ವಿವಿ ಕುಲಪತಿ ಪ್ರೊ. ಬಿ.ಕೆ. ರವಿ ವಹಿಸಲಿದ್ದಾರೆ. ಈ ವೇಳೆ ಆಡಳಿತ ಕುಲಸಚಿವ ಸಿ.ಎನ್. ಶ್ರೀಧರ್, ಮೌಲ್ಯಮಾಪನ ಕುಲಸಚಿವ ಪ್ರೊ. ಲೋಕನಾಥ್, ವಿತ್ತಾಧಿಕಾರಿ ವಸಂತ ಕುಮಾರ್, ಸುವರ್ಣಗಂಗೆ ಕ್ಯಾಂಪಸ್‌ನ ನಿರ್ದೇಶಕಿ ಪ್ರೊ. ಕುಮುದಾ, ಪಿಎಂ ಉಷಾ ಸೆಲ್‌ನ ನೋಡೆಲ್ ಅಧಿಕಾರಿ ಡಾ. ರಮೇಶ್, ಹಾಗೂ ಎಲ್ಲಾ ಸಿಂಡಿಕೇಟ್ ಸದಸ್ಯರು, ಬೋಧಕ, ಬೋಧಕೇತರ ಸಿಬ್ಬಂದಿ ಭಾಗವಹಿಸಲಿದ್ದಾರೆ.

# ಅಂಬೇಡ್ಕರ್ ವ್ಯಕ್ತಿಯಲ್ಲ, ಪಾಲಿಸಬೇಕಾದ ಜೀವಿತ ಧರ್ಮ: ಶಿವಪ್ಪ

ಕೋಲಾರ

ಎಳೆಯ ಮನಸ್ಸುಗಳಲ್ಲಿ ಜಾತಿಯ ವಿಷಬೀಜ ಬಿತ್ತಬಾರದು. ಎಳೆಯ ಮನಸ್ಸುಗಳು ಎಂದೂ ಕಲುಷಿತಗೊಳ್ಳಬಾರದು. ಅಂಬೇಡ್ಕರ್ ಜೀವಿತ ಧರ್ಮವಾಗಬೇಕು ಎಂದು ಅಂಬೇಡ್ಕರ್‌ವಾದಿ ಅರಿವು ಶಿವಪ್ಪ ಕರೆ ನೀಡಿದರು.

ಇಲ್ಲಿನ ಕ್ರೀಡಾ ಸಂಘದ ವತಿಯಿಂದ ನಗರದ ಟೇಕಲ್ ರಸ್ತೆಯಲ್ಲಿರುವ ಅಂಬೇಡ್ಕರ್ ಮಕ್ಕಳ ಉದ್ಯಾನವನದಲ್ಲಿ ಡಿ. ಸುಧಾಕರ್ ಸ್ಮರಣಾರ್ಥ ಉಚಿತ ಬೇಸಿಗೆ ತರಬೇತಿ ಶಿಬಿರದಲ್ಲಿ ಆಯೋಜಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಕ್ಕಳನ್ನುದ್ದೇಶಿಸಿ ಮಾತನಾಡಿದರು.

ಅಂಬೇಡ್ಕರ್ ಒಂದು ಜಾತಿಗೆ ಸೀಮಿತ ಮಾಡಬಾರದು ಅವರು ಈ ದೇಶಕ್ಕೆ ಸಂವಿಧಾನ ನೀಡಿದ ಮಹನೀಯರು, ಸಮಾಜದಲ್ಲಿ ಸಮಾನತೆಯ ಬೆಳಕು ಕಾಣಲು ಕಾರಣರಾದವರು ಎಂದು ಅಭಿಪ್ರಾಯಪಟ್ಟರು.

ಕ್ರೀಡಾ ಸಂಘದ ಹಿರಿಯ ಸದಸ್ಯ ಪುರುಷೋತ್ತಮ ಮಾತನಾಡಿ, ನಾವು ಜಾತಿ, ಜಾತಿ ಎಂಬ ಕನವರಿಕೆಯಿಂದ ಹೊರ ಬಂದಲ್ಲಿ ಮಾತ್ರ ಜಾತಿ ದೂರವಿಡಲು ಸಾಧ್ಯ. ಕೋಲಾರ ಕ್ರೀಡಾ ಸಂಘ ಜಾತಿ,



ಬಣ್ಣ ರಹಿತವಾಗಿಯೇ ಶಿಬಿರಗಳನ್ನು ನಡೆಸಿಕೊಂಡು ಬರುತ್ತಿದೆ ಎಂದರು.

ಕಳೆದ 39 ವರ್ಷಗಳಿಂದ ಬೇಸಿಗೆ ಶಿಬಿರವನ್ನು ನಡೆಸಿಕೊಂಡು ಬಂದಿರುವುದಲ್ಲದೇ ಕಳೆದ ಇಪ್ಪತ್ತೈದು ವರ್ಷಗಳಿಂದ ಸಂಘದ ಉಪಾಧ್ಯಕ್ಷರುಗಳಾದ ಜೆ.ಪಿ ಮತ್ತು ಅಪ್ಪಿ ನಾರಾಯಣಸ್ವಾಮಿ ಉಸ್ತುವಾರಿಯಲ್ಲಿ, ಸಾಮಾ ಬಾಬುರವರ ಅಧ್ಯಕ್ಷತೆಯಲ್ಲಿ ಅಂಬೇಡ್ಕರ್ ಜಯಂತಿ ಕಾರ್ಯಕ್ರಮವನ್ನು ನಡೆಸಿಕೊಂಡು ಬರುತ್ತಿರುವುದಾಗಿ ತಿಳಿಸಿದರು.

ಸಂಘದ ಉಪಾಧ್ಯಕ್ಷ ಜಯಪ್ರಕಾಶ್, ಮಕ್ಕಳಿಗೆ ಅಂಬೇಡ್ಕರ್ ಜೀವನ ಮತ್ತು ಆದರ್ಶಗಳ ಬಗ್ಗೆ ತಿಳಿಸಿ ಅದನ್ನು ಜೀವನದಲ್ಲಿ ಅಳವಡಿಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಸಾಮಾ ಅನಿಲ್ ಕುಮಾರ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ನಗರ ಸಭೆ ನಿಕಟಪೂರ್ವ ಉಪಾಧ್ಯಕ್ಷೆ ಸಂಗೀತ ಜಗದೀಶ್, ತರಬೇತುದಾರರಾದ ಸುರೇಶ್ ಬಾಬು (ಕಮಾಂಡೋ), ರಾಧೇಯ, ಹಿರಿಯ ಖೋಖೋ ಆಟಗಾರ್ತಿ ಪದ್ಮಾ ಕಾಮತ್, ಸಹಾಯಕ ತರಬೇತುದಾರರಾದ ಅಭಿರಾಮ್, ನಂದೀಶ್, ಪವಿತ್ರ, ಜಾನ್, ಬಾಲಾಜಿ, ಭಾಗವಹಿಸಿದ್ದರು. ಕುಮಾರಿ ಲಿಖಿತ ಮತ್ತು ತಂಡ ಪ್ರಾರ್ಥಿಸಿ, ಸಂಘದ ಕಾರ್ಯದರ್ಶಿ ಹರೀಶ್ ಬಾಬು ಕಾರ್ಯಕ್ರಮ ನಿರೂಪಿಸಿ, ಹಿರಿಯ ತರಬೇತುದಾರರಾದ ಕೃಷ್ಣಮೂರ್ತಿ ಮತ್ತು ಉಪಾಧ್ಯಕ್ಷ ಅಪ್ಪಿ ನಾರಾಯಣಸ್ವಾಮಿ ಕಾರ್ಯಕ್ರಮದ ಉಸ್ತುವಾರಿ ವಹಿಸಿದ್ದರು.

# ಕೊಂಡರಾಜಹಳ್ಳಿ ಪಿಡಿಓ ವರ್ಗಾವಣೆಗೆ ಗ್ರಾಮಸ್ಥರ ಒತ್ತಾಯ



ಕೋಲಾರ

ಕೊಂಡರಾಜನಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ. ರಾಮಕೃಷ್ಣಪ್ಪ ರವರ ವಿರುದ್ಧದ ಅಕ್ರಮಗಳ ತನಿಖೆ ಹಾಗೂ ಶಿಸ್ತು ಕ್ರಮ ಜರುಗಿಸಲು ಹಾಗೂ ವರ್ಗಾವಣೆಗೊಂಡ ಸ್ಥಳಕ್ಕೆ ನಿಯೋಜನೆ ಮಾಡಲು ಸೂಚನೆಗೆ ಒತ್ತಾಯಿಸಿ ಕೊಂಡರಾಜನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಂಡರಾಜನಹಳ್ಳಿ, ಅಮ್ಮೇರಹಳ್ಳಿ, ವಿಜಯನಗರ, ಖಾದ್ರಿಪುರ ಸಂಗೊಂಡಹಳ್ಳಿ, ತೇರಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಸ್ಥರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಇಲ್ಲಿನ ಗ್ರಾಮ ಪಂಚಾಯಿತಿಯ ಪಿ.ಡಿ.ಓ ಎಂ. ರಾಮಕೃಷ್ಣಪ್ಪ ರವರ ಕರ್ತವ್ಯ ಲೋಪ ಹಾಗೂ ಭ್ರಷ್ಟಾಚಾರದ ಕುರಿತು ಮನವಿ ಸಲ್ಲಿಸಿದ್ದು, ಮನವಿಯಲ್ಲಿ ತಿಳಿಸಿರುವ ಅಂಶಗಳು.

ವರ್ಗಾವಣೆಯಾದರೂ ಕರ್ತವ್ಯಕ್ಕೆ ಹಾಜರಾಗದಿರುವುದು: ಸದರಿ ಅಧಿಕಾರಿಯನ್ನು ವರ್ಗಾವಣೆ ಮಾಡಿದ್ದರೂ ಸಹ, ಅವರು ಇದುವರೆಗೂ ನಿಯೋಜಿತ ಸ್ಥಳಕ್ಕೆ ತೆರಳದೆ ಕೊಂಡರಾಜನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮುಂದುವರಿಯುತ್ತಿದ್ದಾರೆ. ಇದು ಸರ್ಕಾರದ ಆದೇಶದ ಉಲ್ಲಂಘನೆಯಾಗಿದೆ.

ಅಕ್ರಮ ಇ-ಸ್ವತ್ತು ದಾಖಲಾತಿ: ಕೊಂಡರಾಜನಹಳ್ಳಿ ಪಂಚಾಯಿತಿಯು ನಗರ ಪ್ರದೇಶಕ್ಕೆ ಹೊಂದಿಕೊಂಡಿರುವುದರಿಂದ, ಭೂಮಾಫಿಯಾದವರೊಂದಿಗೆ ಶಾಮೀಲಾಗಿ ರಾಜಕೀಯ ಪ್ರಭಾವದಿಂದ ಹಲವಾರು ಅಕ್ರಮ ಇ-ಸ್ವತ್ತುಗಳನ್ನು ಸೃಷ್ಟಿಸಿದ್ದಾರೆ. ವಿಶೇಷವಾಗಿ ಹಾರೋಹಳ್ಳಿ ಗ್ರಾಮದ ಸರ್ವೆ ನಂ. 26/2 ರ ಜಮೀನಿಗೆ ಸಂಬಂಧಿಸಿದಂತೆ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಸುಮಾರು 30ಕ್ಕೂ ಹೆಚ್ಚು ಅಕ್ರಮ ಇ-ಸ್ವತ್ತುಗಳನ್ನು ಮಾಡಿಕೊಟ್ಟಿರುವುದು ದಾಖಲೆಗಳಿಂದ ತಿಳಿದುಬಂದಿದೆ.

ನಿಧಿಯ ದುರುಪಯೋಗ: 15ನೇ ಹಣಕಾಸು ಯೋಜನೆ ಹಾಗೂ ಎಸ್‌ಸಿ/ಎಸ್‌ಟಿ ಕಲ್ಯಾಣಕ್ಕಾಗಿ ಮೀಸಲಿಟ್ಟ ಅನುದಾನದಲ್ಲಿ ಭಾರೀ ಪ್ರಮಾಣದ ಅವ್ಯವಹಾರ ನಡೆದಿದೆ. ಕೇವಲ ಕೆಲವು ಸದಸ್ಯರ ಹಿತಾಸಕ್ತಿಗಾಗಿ ಅನುದಾನ ಬಳಕೆ ಮಾಡುತ್ತಾ, ಅರ್ಹ ಫಲಾನುಭವಿಗಳಿಗೆ ಅನ್ಯಾಯ ಮಾಡುತ್ತಿದ್ದಾರೆ.

ಸಾರ್ವಜನಿಕರೊಂದಿಗೆ ದುರ್ವರ್ತನೆ: ಪಂಚಾಯಿತಿಯಲ್ಲಿ ಮೂಲಸೌಕರ್ಯಗಳ ಬಗ್ಗೆ ವಿಚಾರಿಸಲು ಬರುವ ಸಾರ್ವಜನಿಕರಿಗೆ ಉದ್ಧಟತನದ ಉತ್ತರ ನೀಡುವುದು ಹಾಗೂ "ಪರಿಶಿಷ್ಟ ಜಾತಿ ದೌರ್ಜನ್ಯ ತಡೆ ಕಾಯ್ದೆ" ಅಡಿಯಲ್ಲಿ ಸುಳ್ಳು ಕೇಸು ದಾಖಲಿಸುವುದಾಗಿ ಬೆದರಿಕೆ ಹಾಕುತ್ತಿದ್ದಾರೆ. ಇದರಿಂದ ಸಾರ್ವಜನಿಕರು ಪಂಚಾಯಿತಿಗೆ ಬರಲು ಭಯಪಡುವಂತಾಗಿದೆ.

2025-26ನೇ ಸಾಲಿನಲ್ಲಿ ಪಂಚಾಯಿತಿಯ ಸಾಮಾನ್ಯ ಸಭೆಗಳು, ವಾರ್ಡ್ ಸಭೆ, ಗ್ರಾಮ ಸಭೆ ಮಾಡದೆ ಮತ್ತು ಯಾವುದೇ ರೀತಿ ಪ್ಲಾನ್ ಮಾಡದೆ, ಸಾಮಾನ್ಯ ಸಭೆಯಲ್ಲಿ ಅನುಮತಿ ಪಡೆಯದೆ ಲಕ್ಷಾಂತರ ರೂಪಾಯಿಗಳನ್ನು ಕಾನೂನು ಬಾಹಿರವಾಗಿ ಖರ್ಚು ಮಾಡಿದ್ದಾರೆ. ಈ ವಿಚಾರವಾಗಿ ತನಿಖೆ ಮಾಡಬೇಕು.

ತನಿಖಾ ವರದಿ: ಈಗಾಗಲೇ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಯ ತನಿಖಾ ವರದಿಗಳಲ್ಲಿ ಇವರ ಅವಧಿಯಲ್ಲಿ ಕಾನೂನು ಬಾಹಿರ ಚಟುವಟಿಕೆಗಳು ನಡೆದಿರುವುದು ದೃಢಪಟ್ಟಿದ್ದರೂ, ಈವರೆಗೂ ಇವರ ಮೇಲೆ ಯಾವುದೇ ಕಠಿಣ ಕ್ರಮ ಜರುಗಿಸದಿರುವುದು ವಿಷಾದನೀಯ.

ಆದ್ದರಿಂದ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಈ ಕೂಡಲೇ ಮಧ್ಯಪ್ರವೇಶಿಸಿ, ಎಂ. ರಾಮಕೃಷ್ಣಪ್ಪ ರವರನ್ನು ಕೂಡಲೇ ಬಿಡುಗಡೆಗೊಳಿಸಿ ಹೊಸ ಅಧಿಕಾರಿಯನ್ನು ನೇಮಿಸಬೇಕು. ಅಲ್ಲದೆ, ಅವರ ಅವಧಿಯಲ್ಲಿ ನಡೆದ ಅಕ್ರಮ ಇ-ಸ್ವತ್ತುಗಳನ್ನು ರದ್ದುಪಡಿಸಿ, ಭ್ರಷ್ಟಾಚಾರದ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕೆಂದು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ನಿರಂಜನ್ ಎಲ್, ಕರ್ನಾಟಕ ದಲಿತ ಸಿಂಹಸೇನೆ ರಾಜ್ಯಾಧ್ಯಕ್ಷ ಹೂಹಳ್ಳಿ ಪ್ರಕಾಶ್, ಖಾದ್ರಿಪುರ ಗ್ರಾಮ ಪಂಚಾಯತಿ ಮಾಜಿ ಸದಸ್ಯ ಗೋವಿಂದಪ್ಪ, ಕೊಂಡರಾಜನಹಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಮಂಜುನಾಥ್, ಸಂಗೊಂಡಹಳ್ಳಿ ಕುಮಾರ್, ಗ್ರಾಮಸ್ಥರಾದ ಪಾಪರಾಜನಹಳ್ಳಿ ಮಂಜು, ತೇರಹಳ್ಳಿ ಪಾಪಣ್ಣ, ರಾಜಣ್ಣ ಸೇರಿದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಂಡರಾಜನಹಳ್ಳಿ, ಅಮ್ಮೇರಹಳ್ಳಿ, ವಿಜಯನಗರ, ಖಾದ್ರಿಪುರ ಸಂಗೊಂಡಹಳ್ಳಿ, ತೇರಹಳ್ಳಿ ಸೇರಿದಂತೆ ಸುತ್ತಮುತ್ತಲ ಗ್ರಾಮಸ್ಥರು ಹಾಜರಿದ್ದರು.

# ಅಂಬೇಡ್ಕರ್ ಆದರ್ಶ ಪಾಲಿಸಿ ಮುನ್ನಡೆಯಿರಿ: ಡಾ. ಛಾಯಾದೇವಿ

ಕೋಲಾರ

ಅಂಬೇಡ್ಕರ್ ಅವರ ಕಲಿಕೆಯ ಹಸಿವು ನಿಮ್ಮದಾಗಿಸಿಕೊಂಡು ಅವರ ಆದರ್ಶಗಳನ್ನು ಪಾಲಿಸುವ ಮೂಲಕ ಸಮಾಜದ ಉನ್ನತ ಸ್ಥಾನಗಳಿಗೆ ಆಯ್ಕೆಯಾಗಿ ಪೋಷಕರ ಆಶಯಗಳನ್ನು ಈಡೇರಿಸಿ ಎಂದು ವಿದ್ಯಾರ್ಥಿಗಳಿಗೆ ರಮಾಮಣಿ ಸುಂದರರಾಜ ಅಯ್ಯಂಗಾರ್ ಪದವಿ ಕಾಲೇಜಿನ ಪ್ರಾಂಶುಪಾಲೆ ಡಾ. ಛಾಯಾದೇವಿ ಕರೆ ನೀಡಿದರು.

ಅವರು ತಾಲ್ಲೂಕಿನ ಬೆಳ್ಳೂರಿನ ಕೃಷ್ಣಮಾಚಾರ್ ಮತ್ತು ಶೇಷಮ್ಮ ಸ್ಮಾರಕ ನಿಧಿ ಟ್ರಸ್ಟ್ ಅಡಿಯಲ್ಲಿ ನಡೆಯುತ್ತಿರುವ ರಮಾಮಣಿ ನಗರದ ರಮಾಮಣಿ ಸುಂದರರಾಜ ಅಯ್ಯಂಗಾರ್ ಪದವಿ ಪೂರ್ವ ಮತ್ತು ಪದವಿ ಕಾಲೇಜಿನಲ್ಲಿ ನಡೆದ ಬಾಬಾಸಾಹೇಬ್ ಅಂಬೇಡ್ಕರ್ ರವರ135ನೇ ಜಯಂತಿ ಕಾರ್ಯಕ್ರಮದಲ್ಲಿ ದ್ವಿತೀಯ ಪಿಯುಸಿ ಸಾಧಕ ವಿದ್ಯಾರ್ಥಿಗಳನ್ನು ಪುರಸ್ಕರಿಸಿ ಅವರು ಮಾತನಾಡುತ್ತಿದ್ದರು.

ಅಂಬೇಡ್ಕರ್ ಅವರಿಗಿದ್ದ ಪುಸ್ತಕ ಓದುವಲ್ಲಿನ ಪ್ರೀತಿ ಇಂದು ಮಕ್ಕಳಲ್ಲಿ ಇಲ್ಲವಾಗುತ್ತಿದೆ ಎಂದು ವಿಷಾದಿಸಿದ ಅವರು, ಅಂಬೇಡ್ಕರ್ ಅವರು ಇಡೀ ಸಮಾಜ ಮತ್ತು ಮನುಕುಲಕ್ಕೆ ಮಾದರಿಯಾಗಿದ್ದಾರೆ ಅವರ ಆದರ್ಶಗಳು ಜಾರಿಗೆ ಬಂದರೆ ಮಾತ್ರ ಸುಂದರ ಸಮ ಸಮಾಜ ನಿರ್ಮಾಣ ಸಾಧ್ಯ ಎಂದರು.

ಈ ಬಾರಿ ಕಾಲೇಜಿಗೆ ಶೇಕಡ 100ರಷ್ಟು ಫಲಿತಾಂಶ ಬಂದಿದ್ದು ಜೊತೆಗೆ ಶೇಕಡ 31 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿ, ಶೇಕಡ 68 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, ಶೇಕಡ 1 ರಷ್ಟು ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ತೇರ್ಗಡೆಯಾಗಿ ಕಾಲೇಜಿಗೆ ಕೀರ್ತಿತಂದಿರುತ್ತಾರೆಂದು ಹರ್ಷ ವ್ಯಕ್ತಪಡಿಸಿದರು.

ಅದರಲ್ಲೂ ಹೆಮ್ಮೆಯ ವಿಷಯವೆಂದರೆ ವಾಣಿಜ್ಯ ವಿಭಾಗದ ಕುಮಾರಿ ಕುರ್ರತ್ ಖಾನಂ ಎಂಬ ವಿದ್ಯಾರ್ಥಿನಿ 590 ಅಂಕಗಳನ್ನು ಪಡೆದು ಹೋಬಳಿಗೆ ಪ್ರಥಮ ಸ್ಥಾನ, ಜಿಲ್ಲೆಗೆ ಆರನೇ ಸ್ಥಾನ ಹಾಗೂ ರಾಜ್ಯಕ್ಕೆ 10ನೇ ಸ್ಥಾನ ಪಡೆದಿದ್ದು, ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ, ಲೆಕ್ಕಶಾಸ್ತ್ರ ವಿಷಯಗಳಲ್ಲಿ ನೂರಕ್ಕೆ ನೂರು ಅಂಕ ಪಡೆದಿರುವುದು ಹಾಗೂ ವಿಜ್ಞಾನ ವಿಭಾಗದ ಮಹಮ್ಮದಿ ಎಂಬ ವಿದ್ಯಾರ್ಥಿನಿ ಗಣಕ ವಿಜ್ಞಾನ ವಿಷಯದಲ್ಲಿ ನೂರಕ್ಕೆ ನೂರು ಅಂಕ ಪಡೆದು ನಮ್ಮ ಮುಂಬರುವ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿರುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬೆಳಮಾರನಹಳ್ಳಿ ಗ್ರಾಮ ಪಂಚಾಯತಿಯ ಮಾಜಿ ಅಧ್ಯಕ್ಷ ಚಂದ್ರಶೇಖರ್ ಮಾತನಾಡಿ, ಭಾರತ ದೇಶದ ನಿರ್ಮಾಣದಲ್ಲಿ ಅಂಬೇಡ್ಕರ್ ರವರ ಪಾತ್ರವನ್ನು ಸ್ಮರಿಸಿ, ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಹಾಗೂ ಅವರ ಪೋಷಕರಿಗೆ ಅಭಿನಂದಿಸಿ, ಯೋಗಾಚಾರ್ಯ ಡಾಕ್ಟರ್ ಬಿಕೆಎಸ್ ಅಯ್ಯಂಗಾರ್ ಅವರು ಸಮಾಜಕ್ಕೆ ಸೇವೆ ಸಲ್ಲಿಸಬೇಕೆಂಬ ಉದ್ದೇಶದಿಂದ ಈ ಸಂಸ್ಥೆ ಸ್ಥಾಪಿಸಿದ್ದು, ಇಂದಿಗೂ ಗುರೂಜಿಯವರ ಮಾರ್ಗದರ್ಶನದಲ್ಲಿಯೇ ನಡೆಯುತ್ತಿರುವ ಆಡಳಿತ ವರ್ಗ ಹಾಗೂ ಶಿಕ್ಷಕರು ಪ್ರತಿ ವರ್ಷವೂ ಉತ್ತಮ ಫಲಿತಾಂಶ ನೀಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಗಣಕ ವಿಭಾಗದ ಉಪನ್ಯಾಸಕ ಮನೋಹರ್ ಮತ್ತು ಕನ್ನಡ ವಿಭಾಗದ ಯಶವಂತ್ ಪಾಲ್ ಡಾಕ್ಟರ್ ಅಂಬೇಡ್ಕರವರ ಜೀವನವನ್ನು ಬಣ್ಣಿಸುವ ಹಾಡುಗಳನ್ನು ಹಾಡಿದರು.

ಕಾರ್ಯಕ್ರಮದಲ್ಲಿ ಕಳೆದ ಮಾರ್ಚ್ 2026ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಿಜ್ಞಾನ ಮತ್ತು ವಾಣಿಜ್ಯ ವಿಭಾಗದಲ್ಲಿ ಉತ್ತಮ ಅಂಕಗಳನ್ನು ಪಡೆದ 62 ವಿದ್ಯಾರ್ಥಿಗಳು ಮತ್ತು ಅವರ ಪೋಷಕರನ್ನು ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದ ಕಾಲೇಜಿನ ಉಪನ್ಯಾಸಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# 'ಫಲಾನುಭವಿಗಳ ಮನೆ ಶೀಘ್ರ ಪೂರ್ಣಗೊಳಿಸಿ'

ರಾಮನಗರ

ಇಲ್ಲಿನ ನಗರಸಭೆಯ 2010-11ನೇ ಸಾಲಿನಿಂದ 2021-22ನೇ ಸಾಲಿನವರೆಗೆ ರಾಜ್ಯ ಪುರಸ್ಕೃತ ಯೋಜನೆಗಳಾದ ವಾಜಪೇಯಿ ನಗರ ವಸತಿ ಯೋಜನೆ ಮತ್ತು ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ (ನಗರ), ಪೌರ ಕಾರ್ಮಿಕರ ಗೃಹಭಾಗ್ಯ ಯೋಜನೆ ಹಾಗೂ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಜ್ ಯೋಜನೆಯಡಿ ವಿವಿಧ ಹಂತಗಳಲ್ಲಿ ಮನೆಯ ಕಟ್ಟಡವನ್ನು ಸ್ಥಗಿತಗೊಳಿಸಿರುವ ಫಲಾನುಭವಿಗಳು ಮನೆಯ ಕಟ್ಟಡವನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಜ್ ಯೋಜನೆಯಡಿ ಈಗಾಗಲೇ ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸುವ ಉದ್ದೇಶದಿಂದ ಅಭಿಯಾನದ ಅವಧಿಯನ್ನು 2025ರ ನವೆಂಬರ್ 31 ರಿಂದ 2026ರ ಸೆಪ್ಟೆಂಬರ್ 30ರ ವರೆಗೆ ವಿಸ್ತರಿಸಲಾಗಿದ್ದು, ಇದು ಅಂತಿಮ ಕಾಲಾವಕಾಶ ನೀಡಲಾಗಿದೆ. ಕಾರಣ ಮನೆ ನಿರ್ಮಾಣ ಕಾರ್ಯವು 2026ರ ಸೆಪ್ಟೆಂಬರ್ 30ರೊಳಗೆ ಪೂರ್ಣಗೊಳ್ಳದಿದ್ದಲ್ಲಿ ಕೇಂದ್ರ ಸರ್ಕಾರದಿಂದ ಯಾವುದೇ ಬಾಕಿ ಅನುದಾನ ಬಿಡುಗಡೆ ಮಾಡಲಾಗುವುದಿಲ್ಲವೆಂದು ಸ್ಪಷ್ಟವಾಗಿ ತಿಳಿಸಿರುತ್ತಾರೆ. ಕಾರಣ ಎಲ್ಲಾ ಯೋಜನೆಗಳ ಮನೆ ಕಟ್ಟಡ ನಿರ್ಮಾಣ ಕಾರ್ಯವನ್ನು 2026ರ ಸೆಪ್ಟೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸಲು ಮತ್ತೊಮ್ಮೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ನಗರಸಭೆಯ ವಸತಿ ಯೋಜನೆ ವಿಷಯ ನಿರ್ವಾಹಕರನ್ನು ಸಂಪರ್ಕಿಸಿ ಲಿಖಿತವಾಗಿ ಉತ್ತರ ನೀಡಬೇಕು. ತಪ್ಪಿದ್ದಲ್ಲಿ ಮುಂದಿನ ಆಗು-ಹೋಗುಗಳಿಗೆ ಫಲಾನುಭವಿಗಳೇ ನೇರ ಹೊಣೆಗಾರರಾಗಿರುತ್ತೀರಿ ಎಂಬ ಅಂಶವನ್ನು ಮತ್ತೊಮ್ಮೆ ತಿಳಿಸಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

# ನೀರಿನ ಪೂರೈಕೆಯಲ್ಲಿ ನಿರ್ಲಕ್ಷ್ಯವಹಿಸಿದರೆ ಕ್ರಮ: ಡಿಸಿ

ಚಿಕ್ಕಬಳ್ಳಾಪುರ

ಕುಡಿಯುವ ನೀರಿನ ಪೂರೈಕೆಯಲ್ಲಿ ಯವುದೇ ಕಾರಣಕ್ಕೂ ಜಿಲ್ಲೆಯಲ್ಲಿ ವ್ಯತ್ಯಯ ಆಗಬಾರದು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ "ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ"ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಗ್ರಾಮಾಂತರ ಪ್ರದೇಶ ಹಾಗೂ ನಗರ ಪ್ರದೇಶದ ಯಾವುದೇ ಜನವಸತಿ ಪ್ರದೇಶದಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ಸಮಸ್ಯೆ ಕಂಡು ಬಂದರೆ ತುರ್ತು ಕ್ರಮವಾಗಿ ಕೂಡಲೆ "ಟ್ಯಾಂಕರ್ ಮೂಲಕ ನೀರಿನ ಪೂರೈಕೆ ಮಾಡಲು ಕ್ರಮ ವಹಿಸಬೇಕು. ಬೇಸಿಗೆಯ ತೀವ್ರತೆ ಹೆಚ್ಚುತ್ತಿದ್ದು, ಯಾವ ಕೊಳವೆ ಬಾವಿ ನೀರು ಯಾವ ಸಂದರ್ಭದಲ್ಲಿ ನಿಂತು ಹೋಗಲಿದೆ ಹೇಳಲಿಕ್ಕೆ ಆಗುವುದಿಲ್ಲ. ಆದ್ದರಿಂದ ಟ್ಯಾಂಕರ್ ಮೂಲಕವಾಗಲಿ ಅಥವಾ ಖಾಸಗಿ ಕೊಳವೆ ಬಾವಿ ಮೂಲಕ ನೀರು ಪೂರೈಸುವ ತಾತ್ಕಾಲಿಕ ವ್ಯವಸ್ಥೆ ಮಾಡಬೇಕು. ಆ ನಂತರ ಜಲಜೀವನ್ ಮಿಷನ್ ಯೋಜನೆಯಡಿ ಅಥವಾ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಅನುಮೋದನೆ ಪಡೆದುಕೊಂಡು ಕೊಳವೆ ಬಾವಿ ಕೊರೆದು ನೀರಿನ ಸಮಸ್ಯೆ ನೀಗಿಸಬೇಕು. ಈ



ನಿಟ್ಟಿನಲ್ಲಿ ತಾಲ್ಲೂಕು ಪಂಚಾಯ್ತಿಗಳ ಕಾರ್ಯನಿರ್ವಹಣಾಧಿಕಾರಿಗಳು, ನಗರಾಡಳಿತ ಸಂಸ್ಥೆಗಳ ಆಯುಕ್ತರು, ಮುಖ್ಯಾಧಿಕಾರಿಗಳು ಹಾಗೂ ತಾಲ್ಲೂಕು ತಹಸೀಲ್ದಾರರು ಹೆಚ್ಚಿನ ನಿಗಾವಹಿಸಿ ದಿನ ನಿತ್ಯದ ನೀರಿನ ಪೂರೈಕೆ ಬಗ್ಗೆ ಮಾಹಿತಿ ಪಡೆಯಬೇಕು ಎಂದರು.

ಪ್ರಸ್ತುತ ಚಿಕ್ಕಬಳ್ಳಾಪುರ ತಾಲ್ಲೂಕಿನ ಕವರನಹಳ್ಳಿ, ಕಣಿತಹಳ್ಳಿ, ನಕ್ಕಲಹಳ್ಳಿ ಮತ್ತು ಮಧುರೇನಹಳ್ಳಿ. ಚಿಂತಾಮಣಿ ತಾಲ್ಲೂಕಿನ ಗೌಡನಹಳ್ಳಿ, ಶೆಟ್ಟಿಹಳ್ಳಿ, ಮಲ್ಲಕಪುರ ಮತ್ತು ಕೃಷ್ಣಮ್ಮನ ಹೊಸಹಳ್ಳಿ. ಬಾಗೇಪಲ್ಲಿ ತಾಲ್ಲೂಕಿನ ಚಾಮಲವಾರಿಪಲ್ಲಿ, ಯಲಗಲಪಲ್ಲಿ, ವೀರಾಪುರ, ಮಲ್ಲೆಪಲ್ಲಿ ಮತ್ತು ಗಂಗರೆಡ್ಡಿಪಲ್ಲಿ. ಶಿಡ್ಲಘಟ್ಟ ತಾಲ್ಲೂಕಿನ ವಲ್ಲಪ್ಪನಹಳ್ಳಿ, ಚೀಮಂಗಲ, ಹೇಮಾರ್ಲಹಳ್ಳಿ, ಜಂಗಮಕೋಟೆ, ಭಕ್ತರಹಳ್ಳಿ, ಪಲಿಚೆರ್ಲು, ತದೂರು ಮತ್ತು ಮುಗಲಪಡಿ. ಗೌರಿಬಿದನೂರು ತಾಲ್ಲೂಕಿನ ಸಿದ್ದೇನಹಳ್ಳಿ. ಗುಡಿಬಂಡೆ ತಾಲ್ಲೂಕಿನ ಚಿನ್ನಹಳ್ಳಿ ಸೇರಿದಂತೆ ಒಟ್ಟು 23 ಗ್ರಾಮಗಳಿಗೆ ಕುಡಿಯುವ ನೀರನ್ನು ಖಾಸಗಿ ಕೊಳವೆ ಬಾವಿಗಳ ಮಾಲೀಕರ ಸಹಕಾರ ಪಡೆದು ನೀರು ಪೂರೈಸಲಾಗುತ್ತಿದೆ. ಬಾಗೇಪಲ್ಲಿ ತಾಲ್ಲೂಕಿನ ಮಲ್ಲೆಪಲ್ಲಿ ಗ್ರಾಮಕ್ಕೆ ಟ್ಯಾಂಕರ್ ಮೂಲಕ ಪ್ರಸ್ತುತ ನೀರು ಸರಬರಾಜು ಮಾಡಲಾಗುತ್ತಿದೆ. ಕುಡಿಯುವ ನೀರಿನ ಸಮಸ್ಯೆ ತಲೆದೋರಬಹುದಾದ ಗ್ರಾಮಗಳನ್ನು ಮುನ್ನೆಚ್ಚರಿಕೆಯಾಗಿ ಗುರ್ತಿಸಲು ನಿರಂತರ ನಿಗಾ ಇಡಲು ಕಾರ್ಯನಿರ್ವಾಹಣಾಧಿಕಾರಿಗಳಿಗೆ ಸೂಚಿಸಿದರು.

ಇನ್ನೂ ನಗರ ಪ್ರದೇಶ ವ್ಯಾಪ್ತಿಯಲ್ಲಿ ಗೌರಿಬಿದನೂರು ನಗರದ 4 ವಾರ್ಡ್‌ಗಳು, ಶಿಡ್ಲಘಟ್ಟ ನಗರದ 6 ವಾರ್ಡ್‌ಗಳು, ಚಿಂತಾಮಣಿಯ 4 ವಾರ್ಡ್‌ಗಳು ಹಾಗೂ ಬಾಗೇಪಲ್ಲಿಯ 4 ವಾರ್ಡ್ ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಸದ್ಯಕ್ಕೆ ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಪೂರೈಸಲಾಗುತ್ತಿದೆ. ನಗರ ಪ್ರದೇಶ ವ್ಯಾಪ್ತಿಯಲ್ಲಿ ಈ ವರೆಗೆ ಟ್ಯಾಂಕರ್ ಮೂಲಕ ನೀರು ಪೂರೈಸುವ ಪರಿಸ್ಥಿತಿ ಎದುರಾಗಿಲ್ಲ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ.ನವೀನ್ ಭಟ್, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್, ಎಲ್ಲ ತಾಲ್ಲೂಕುಗಳ ತಹಸೀಲ್ದಾರರು, ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಾಹಣಾಧಿಕಾರಿಗಳು, ನಗರಾಡಳಿತ ಸಂಸ್ಥೆಗಳ ಆಯುಕ್ತರು, ಮುಖ್ಯಾಧಿಕಾರಿಗಳು ಸೇರಿದಂತೆ ಹಲವರು ಹಾಜರಿದ್ದರು.

# ಹಗ್ಗಜಗ್ಗಾಟಕ್ಕೆ ಬಿದ್ದ ತೆರೆ: ಶಿಕ್ಷಕರ ಸಂಘದ ಚುನಾವಣೆಯಲ್ಲಿ ಮೂಡಿತು ಒಮ್ಮತ

ಬೂದಿಕೋಟೆ

ಬಂಗಾರಪೇಟೆ ತಾಲ್ಲೂಕಿನ ಶಿಕ್ಷಕರ ಸಂಘದ ಕಾರ್ಯಕಾರಿ ಸಮಿತಿಯ ಹತ್ತು ಸ್ಥಾನಗಳಿಗೆ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಎಲ್ಲಾ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಜಿ.ಬಿ. ಯುವರಾಜು ಘೋಷಿಸಿದ್ದಾರೆ.

ಶಿಕ್ಷಕರ ಸಂಘದ ಒಟ್ಟು 10 ಕಾರ್ಯಕಾರಿ ಸಮಿತಿ ಸ್ಥಾನಗಳಿಗೆ ಮೊದಲು 34 ಮಂದಿ ಸ್ಪರ್ಧಾಕಾಂಕ್ಷಿಗಳು ನಾಮಪತ್ರ ಸಲ್ಲಿಸಿದ್ದರು.



ಮಂಗಳವಾರ ನಾಮಪತ್ರ ವಾಪಸ್ ಪಡೆಯಲು ಅಂತಿಮ ದಿನವಾಗಿದ್ದರಿಂದ, ಶಿಕ್ಷಕ ಮುಖಂಡರು ಸಮಾಲೋಚನೆ ನಡೆಸಿ ಒಮ್ಮತದ ನಿರ್ಧಾರಕ್ಕೆ ಬಂದರು. ಈ ಹಿನ್ನೆಲೆಯಲ್ಲಿ 24 ಮಂದಿ ತಮ್ಮ ನಾಮಪತ್ರಗಳನ್ನು ಹಿಂಪಡೆದಿದ್ದು, ಉಳಿದ 10 ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾದಂತಾಗಿದೆ.

ಆಯ್ಕೆಯಾದ ಸದಸ್ಯರು: ಸಿ. ಅಪ್ಪಯ್ಯಗೌಡ, ಎಸ್.ಎಂ. ಶ್ಯಾಮಮೂರ್ತಿ, ಎಂ. ನಾರಾಯಣಸ್ವಾಮಿ, ಕೆ.ಜಿ. ಶ್ರೀನಿವಾಸ್, ಬಿ.ಆರ್. ಮಂಜುನಾಥ್, ಎಂ. ನಾಗೇಂದ್ರ, ಸೈಯದ್ ಮುಕ್ತಿಯಾರ್ ಅಹಮದ್, ಎಂ. ರುಕ್ಮೀಣಿಯಮ್ಮ, ಎಂ.ಜಿ. ಪ್ರೇಮಲತಾ, ಎಂ.ಆರ್. ಸುಜಾತ

ಚುನಾವಣಾ ಪ್ರಕ್ರಿಯೆಯಲ್ಲಿ ಇಸಿಓ ಸೋಮಶೇಖರ್ ಅವರು ಸಹಾಯಕ ಚುನಾವಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದರು. ಶಿಕ್ಷಕ ಸಂಘದ ಸದಸ್ಯರು ಒಗ್ಗಟ್ಟಿನಿಂದ ಅವಿರೋಧ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಿರುವುದಕ್ಕೆ ವ್ಯಾಪಕ ಹರ್ಷ ವ್ಯಕ್ತವಾಗಿದೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy